VOLUME: 16 | 25 JUNE 2026 | ಬುಧವಾರ | RS: 2 | PAGE: 06 ISSUE: 134 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಸೂಪರ್‌ಸ್ಟಾರ್ ರಜನಿಕಾಂತ್ ಅಭಿನಯದ 173ನೇ ಸಿನಿಮಾದ ಟೈಟಲ್ ಮತ್ತು ಫಸ್ಟ್ ಲುಕ್ ಇಂದು ಅನಾವರಣಗೊಂಡಿದೆ. ಕಮಲ್ ಹಾಸನ್ ನಿರ್ಮಾಣದ ಈ ಬಹುನಿರೀಕ್ಷಿತ ಚಿತ್ರಕ್ಕೆ 'ಧರ್ಮನ್' ಎಂದು ಹೆಸರಿಡಲಾಗಿದೆ. ಚೆನ್ನೈನಲ್ಲಿ ನಡೆದ ಪೂಜಾ ಸಮಾರಂಭದಲ್ಲಿ ಚಿತ್ರದ ಟೈಟಲ್ ಹಾಗೂ ಫಸ್ಟ್ ಲುಕ್ ಬಿಡುಗಡೆ ಮಾಡಲಾಯಿತು. ಈ ವೇಳೆ ಚಿತ್ರತಂಡದ ಜೊತೆಗೆ ತಮಿಳು ಚಿತ್ರರಂಗದ ಹಲವು ಗಣ್ಯರು ಉಪಸ್ಥಿತರಿದ್ದರು.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

prabhavaa.com

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ






## ಅಯೋಧ್ಯೆ ಸ್ಫೋಟ ಸಂಚು ವಿಫಲ

ದಾವಣಗೆರೆ: ರಾಜ್ಯದಲ್ಲಿ ಆತಂಕ ಸೃಷ್ಟಿಸಿರುವ ಮಹತ್ವದ ಬೆಳವಣಿಗೆಯಲ್ಲಿ, ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಬನ್ನಿಕೋಡು ಗ್ರಾಮದಲ್ಲಿ ಅಡಗಿದ್ದ ಶಂಕಿತ ಉಗ್ರನನ್ನು ಕೇಂದ್ರ ಗುಪ್ತಚರ ಇಲಾಖೆ ಹಾಗೂ ರಾಜ್ಯ ಪೊಲೀಸರು ಜಂಟಿ ಕಾರ್ಯಾಚರಣೆಯಲ್ಲಿ ಬಂಧಿಸಿದ್ದಾರೆ. ಬಂಧಿತನನ್ನು ಉತ್ತರ ಪ್ರದೇಶ ಮೂಲದ 20 ವರ್ಷದ ಸುಹೇಲ್ ಎಂದು ಗುರುತಿಸಲಾಗಿದ್ದು, ವಿಚಾರಣೆ ವೇಳೆ ಅಯೋಧ್ಯೆಯ ರಾಮ ಮಂದಿರವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುವ ಸಂಚು ರೂಪಿಸಿದ್ದಾನೆ ಎಂಬ ಮಾಹಿತಿ ತನಿಖಾ ಸಂಸ್ಥೆಗಳಿಗೆ ಲಭ್ಯವಾಗಿದೆ.

ಮೂಲಗಳ ಪ್ರಕಾರ, ಶಂಕಿತನ ಮೊಬೈಲ್ ಹಾಗೂ ಇತರ ಡಿಜಿಟಲ್ ಸಾಧನಗಳ ಪರಿಶೀಲನೆ ವೇಳೆ ಪಾಕಿಸ್ತಾನ ಮೂಲದ ಶಂಕಿತ ಉಗ್ರ ಜಾಲಗಳೊಂದಿಗೆ ಸಂಪರ್ಕ ಹೊಂದಿದ್ದ ಸುಳಿವುಗಳು ಪತ್ತೆಯಾಗಿವೆ. ಸಾಮಾಜಿಕ ಜಾಲತಾಣಗಳ ಮೂಲಕ ಆತ ಉಗ್ರ ಚಟುವಟಿಕೆಗಳಿಗೆ ಸಂಬಂಧಿಸಿದ ವ್ಯಕ್ತಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದ ಎನ್ನಲಾಗಿದ್ದು, ಈ ಕುರಿತ ದಾಖಲೆಗಳನ್ನು ತನಿಖಾಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಜೂನ್ 3ರಂದು ದಾವಣಗೆರೆಯಲ್ಲಿ ಬಂಧಿತರಾಗಿದ್ದ ಇತರ ಶಂಕಿತ ಉಗ್ರರ ವಿಚಾರಣೆ ವೇಳೆ ಸುಹೇಲ್ ಹೆಸರು ಬೆಳಕಿಗೆ ಬಂದಿತ್ತು. ಅದರ ಆಧಾರದ ಮೇಲೆ ಹಲವು ದಿನಗಳಿಂದ ಆತನ ಮೇಲೆ ನಿಗಾ ಇರಿಸಿದ್ದ ಭದ್ರತಾ ಸಂಸ್ಥೆಗಳು, ಹರಿಹರದಲ್ಲಿ ಅಡಗಿದ್ದ ಸ್ಥಳವನ್ನು ಪತ್ತೆಹಚ್ಚಿ ಕಾರ್ಯಾಚರಣೆ ನಡೆಸಿ ಬಂಧಿಸುವಲ್ಲಿ ಯಶಸ್ವಿಯಾಗಿವೆ.

ಪ್ರಾಥಮಿಕ ತನಿಖೆಯಲ್ಲಿ ಅಯೋಧ್ಯೆಯ ರಾಮ ಮಂದಿರದ ಮೇಲೆ ಬಾಂಬ್ ದಾಳಿ ನಡೆಸುವ ಉದ್ದೇಶ ಹೊಂದಿದ್ದ ಬಗ್ಗೆ ಮಾಹಿತಿ ಲಭ್ಯವಾಗಿರುವುದರಿಂದ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ. ಆದರೆ ಈ ಕುರಿತು ಇನ್ನಷ್ಟು ಸ್ಪಷ್ಟ ಮಾಹಿತಿ ಸಮಗ್ರ ತನಿಖೆಯ ಬಳಿಕವೇ ಹೊರಬರಬೇಕಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯದ ಗೃಹ ಇಲಾಖೆ ಕೂಡ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಬಂಧಿತನ ಸಂಪರ್ಕ ಜಾಲ, ಆತನಿಗೆ ಸಹಕಾರ ನೀಡಿದವರ ವಿವರ ಹಾಗೂ ದೇಶವಿರೋಧಿ ಚಟುವಟಿಕೆಗಳ ಹಿಂದಿರುವ ಸಂಘಟನೆಯ ಬಗ್ಗೆ ತನಿಖೆ ತೀವ್ರಗೊಳಿಸಲಾಗಿದೆ. ಅಗತ್ಯವಿದ್ದರೆ ಕೇಂದ್ರ ತನಿಖಾ ಸಂಸ್ಥೆಗಳ ಸಹಕಾರವನ್ನೂ ಪಡೆಯುವ ಸಾಧ್ಯತೆ ಇದೆ.



ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಹವಾಮಾನ ಇಲಾಖೆ ನಗರಕ್ಕೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಮುಂದಿನ 48 ಗಂಟೆಗಳ ಕಾಲ ಭಾರೀ ಮಳೆಯ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಿದೆ. ಮಂಗಳವಾರ ರಾತ್ರಿ 8.30ರಿಂದ ಬುಧವಾರ ಬೆಳಗ್ಗೆ 5.30ರ ಅವಧಿಯಲ್ಲಿ ನಗರದಲ್ಲಿ ದಾಖಲೆ ಪ್ರಮಾಣದ ಮಳೆಯಾಗಿದೆ. ರಾಮ ಮಂದಿರ ಪ್ರದೇಶದಲ್ಲಿ 224 ಮಿ.ಮೀ., ಕೊಲಾಬಾದಲ್ಲಿ 218.5 ಮಿ.ಮೀ. ಹಾಗೂ ಸಾಂತಾಕ್ರೂಜ್‌ನಲ್ಲಿ 210.6 ಮಿ.ಮೀ. ಮಳೆ ದಾಖಲಾಗಿದ್ದು, ಹಲವು ತಗ್ಗು ಪ್ರದೇಶಗಳು ನೀರಿನಿಂದ ಆವೃತಗೊಂಡಿವೆ. ಇದರಿಂದ ಜನಜೀವನ ಮತ್ತು ಸಂಚಾರ ವ್ಯವಸ್ಥೆಯ ಮೇಲೆ ಪರಿಣಾಮ ಬೀರಿದೆ.

# ಮಳೆ ಅಬ್ಬರಕ್ಕೆ ಮುಂಬೈ ತತ್ತರ

ಮುಂಬೈ: ಮಂಗಳವಾರ ರಾತ್ರಿ ಸುರಿದ ಭಾರೀ ಮಳೆಯಿಂದ ದೇಶದ ಆರ್ಥಿಕ ರಾಜಧಾನಿ ಮುಂಬೈ ಅಸ್ತವ್ಯಸ್ತಗೊಂಡಿದೆ. ನಗರದ ಹಲವು ಪ್ರದೇಶಗಳಲ್ಲಿ ರಸ್ತೆಗಳು ಜಲಾವೃತಗೊಂಡಿದ್ದು, ವಾಹನ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗಿದೆ. ಹಲವೆಡೆ ಮರಗಳು ಉರುಳಿಬಿದ್ದಿದ್ದು, ಕೆಲವು ಪ್ರದೇಶಗಳಲ್ಲಿ ಗೋಡೆ ಕುಸಿತದ ಘಟನೆಗಳೂ ವರದಿಯಾಗಿವೆ.

ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಹವಾಮಾನ ಇಲಾಖೆ ನಗರಕ್ಕೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಮುಂದಿನ 48 ಗಂಟೆಗಳ ಕಾಲ ಭಾರೀ ಮಳೆಯ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಿದೆ. ಮಂಗಳವಾರ ರಾತ್ರಿ 8.30ರಿಂದ ಬುಧವಾರ ಬೆಳಗ್ಗೆ 5.30ರ ಅವಧಿಯಲ್ಲಿ ನಗರದಲ್ಲಿ ದಾಖಲೆ ಪ್ರಮಾಣದ ಮಳೆಯಾಗಿದೆ. ರಾಮ ಮಂದಿರ ಪ್ರದೇಶದಲ್ಲಿ 224 ಮಿ.ಮೀ., ಕೊಲಾಬಾದಲ್ಲಿ 218.5 ಮಿ.ಮೀ. ಹಾಗೂ ಸಾಂತಾಕ್ರೂಜ್‌ನಲ್ಲಿ 210.6 ಮಿ.ಮೀ. ಮಳೆ ದಾಖಲಾಗಿದ್ದು, ಹಲವು ತಗ್ಗು ಪ್ರದೇಶಗಳು ನೀರಿನಿಂದ ಆವೃತಗೊಂಡಿವೆ. ಇದರಿಂದ ಜನಜೀವನ ಮತ್ತು ಸಂಚಾರ ವ್ಯವಸ್ಥೆಯ ಮೇಲೆ ಪರಿಣಾಮ ಬೀರಿದೆ. ಭಾರೀ ಮಳೆಯ ಪರಿಣಾಮ ರೈಲು ಸಂಚಾರಕ್ಕೂ ತಟ್ಟಿದೆ. ತುರ್ಭೆ ಮತ್ತು ಕೋಪರ್ಖೈರನೆ ನಿಲ್ದಾಣಗಳ ನಡುವಿನ ಹಳಿಯಲ್ಲಿ ಕುಸಿತ ಉಂಟಾದ ಕಾರಣ ಕೆಲಕಾಲ ರೈಲು ಸೇವೆ ಸ್ಥಗಿತಗೊಂಡಿತ್ತು. ಬಳಿಕ ತುರ್ತು ದುರಸ್ತಿ ಕಾರ್ಯ ಕೈಗೊಂಡ ಅಧಿಕಾರಿಗಳು ಹಳಿಯನ್ನು ಪುನಃ ಸಂಚಾರಕ್ಕೆ ಯೋಗ್ಯವಾಗಿಸಿದ್ದು, ರೈಲು ಸೇವೆ ಪುನರಾರಂಭಗೊಂಡಿದೆ. ನಗರದ ಹಲವೆಡೆ ನೀರು ನಿಧಾನವಾಗಿ ಇಳಿಯತೊಡಗಿದ್ದು, ಪರಿಸ್ಥಿತಿ ಕ್ರಮೇಣ ಸಹಜ ಸ್ಥಿತಿಯತ್ತ ಮರಳುತ್ತಿದೆ. ಆದರೂ ಮಳೆ ಮುಂದುವರಿಯುವ ಸಾಧ್ಯತೆ ಇರುವುದರಿಂದ ನಾಗರಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ವಿಪತ್ತು ನಿರ್ವಹಣಾ ತಂಡಗಳು ಹಾಗೂ ನಾಗರಿಕ ಸಂಸ್ಥೆಗಳು ಕಟ್ಟೆಚ್ಚರ ವಹಿಸಿದ್ದು, ಪರಿಸ್ಥಿತಿಯ ಮೇಲೆ ನಿರಂತರ ನಿಗಾ ಇರಿಸಲಾಗಿದೆ.

## ಪಾಕ್‌ಗೆ ಭಾರತ ತಿರುಗೇಟು

ನವದೆಹಲಿ: ವಿಶ್ವಸಂಸ್ಥೆಯ ವೇದಿಕೆಯಲ್ಲಿ ಮತ್ತೊಮ್ಮೆ ಕಾಶ್ಮೀರ ವಿಷಯವನ್ನು ಪ್ರಸ್ತಾಪಿಸಿದ ಪಾಕಿಸ್ತಾನಕ್ಕೆ ಭಾರತ ತೀಕ್ಷ್ಣ ಮತ್ತು ಸ್ಪಷ್ಟ ಸಂದೇಶ ರವಾನಿಸಿದೆ. ಜಮ್ಮು–ಕಾಶ್ಮೀರವು ಭಾರತದ ಅವಿಭಾಜ್ಯ ಹಾಗೂ ಬೇರ್ಪಡಿಸಲಾಗದ ಭಾಗವಾಗಿದ್ದು, ಅದು ಹಿಂದೆ ಭಾರತದ್ದಾಗಿತ್ತು, ಈಗಲೂ ಭಾರತದ್ದೇ ಆಗಿದೆ ಮತ್ತು ಮುಂದೆಯೂ ಭಾರತದ್ದಾಗಿಯೇ ಉಳಿಯಲಿದೆ ಎಂದು ಭಾರತ ಖಡಕ್‌ವಾಗಿ ಹೇಳಿದೆ.

ವಿಶ್ವಸಂಸ್ಥೆಯ ಸಭೆಯೊಂದರಲ್ಲಿ ಪಾಕಿಸ್ತಾನದ ಪ್ರತಿನಿಧಿಗಳು ಜಮ್ಮು–ಕಾಶ್ಮೀರ ವಿಷಯವನ್ನು ಪ್ರಸ್ತಾಪಿಸಿ ಭಾರತ ವಿರುದ್ಧ ಟೀಕೆ ನಡೆಸಲು ಯತ್ನಿಸಿದರು. ಇದಕ್ಕೆ ತಕ್ಷಣ ಪ್ರತಿಕ್ರಿಯಿಸಿದ ಭಾರತೀಯ ಪ್ರತಿನಿಧಿಗಳು, ಕಾಶ್ಮೀರ ವಿಷಯವು ಸಂಪೂರ್ಣವಾಗಿ ಭಾರತದ ಆಂತರಿಕ ವಿಚಾರವಾಗಿದ್ದು, ಅದನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಎಳೆದು ತರುವ ಪ್ರಯತ್ನಗಳು ನಿರರ್ಥಕ ಎಂದು ಸ್ಪಷ್ಟಪಡಿಸಿದರು.

ಭಾರತದ ಪ್ರತಿನಿಧಿಗಳು, ಜಮ್ಮು–ಕಾಶ್ಮೀರದ ಬಗ್ಗೆ ಪಾಕಿಸ್ತಾನ ಮಾಡುತ್ತಿರುವ ಆರೋಪಗಳು ವಾಸ್ತವಾಂಶಗಳಿಗೆ ದೂರವಾಗಿವೆ ಎಂದು ತಿಳಿಸಿದರು. ಪಾಕಿಸ್ತಾನ ತನ್ನದೇ ದೇಶದೊಳಗಿನ ಸಮಸ್ಯೆಗಳನ್ನು ಬಗೆಹರಿಸುವ ಬದಲು ನಿರಂತರವಾಗಿ ಭಾರತದ ವಿರುದ್ಧ ಸುಳ್ಳು ಪ್ರಚಾರ ನಡೆಸುತ್ತಿದೆ ಎಂದು ಆರೋಪಿಸಿದರು. ಜೊತೆಗೆ, ಭಯೋತ್ಪಾದನೆಗೆ ಬೆಂಬಲ ನೀಡುವ ದೇಶವಾಗಿ ಜಾಗತಿಕ ಮಟ್ಟದಲ್ಲಿ ಟೀಕೆಗೆ ಒಳಗಾಗಿರುವ ಪಾಕಿಸ್ತಾನ, ಇತರ ರಾಷ್ಟ್ರಗಳಿಗೆ ಉಪದೇಶ ನೀಡುವ ನೈತಿಕ ಹಕ್ಕನ್ನು ಕಳೆದುಕೊಂಡಿದೆ.

## ಸತೀಶ್ ಜಾರಕಿಹೊಳಿ ಬಾಮೈದನಿಗೆ ಇಡಿ ಶಾಕ್

ಬೆಳಗಾವಿ: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಬಾಮೈದ ಹಾಗೂ ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ವೈ. ಮಂಜುನಾಥ್ ಅವರಿಗೆ ಜಾರಿ ನಿರ್ದೇಶನಾಲಯ (ಇಡಿ) ಶಾಕ್ ನೀಡಿದೆ. ಬೆಳಗಾವಿ, ಮೈಸೂರು, ಬೆಂಗಳೂರು ಹಾಗೂ ಅರಸೀಕೆರೆ ಸೇರಿದಂತೆ ಆರು ಸ್ಥಳಗಳಲ್ಲಿ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ಬೆಳಿಗ್ಗೆ ಬೆಳಗಾವಿಯ ದೂರದರ್ಶನ ಕೇಂದ್ರದ ಸಮೀಪವಿರುವ ವೈ. ಮಂಜುನಾಥ್ ಅವರ ನಿವಾಸಕ್ಕೆ ಇಡಿ ಅಧಿಕಾರಿಗಳು ಭದ್ರತಾ ಸಿಬ್ಬಂದಿಯೊಂದಿಗೆ ತೆರಳಿ ಶೋಧ ಕಾರ್ಯ ಆರಂಭಿಸಿದರು. ಆಸ್ತಿ, ಆರ್ಥಿಕ ವ್ಯವಹಾರಗಳು ಹಾಗೂ ಸಂಬಂಧಿತ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.

ಇದೇ ವೇಳೆ ಮೈಸೂರಿನಲ್ಲಿರುವ ಮಂಜುನಾಥ್ ಅವರ ಸ್ನೇಹಿತೆಯ ನಿವಾಸ, ಬೆಂಗಳೂರಿನ ಅಪಾರ್ಟ್‌ಮೆಂಟ್ ಹಾಗೂ ಹಾಸನ ಜಿಲ್ಲೆಯ ಅರಸೀಕೆರೆಯಲ್ಲಿರುವ ಆಪ್ತರ ಮನೆಗಳ ಮೇಲೂ ಪರಿಶೀಲನೆ ನಡೆಸಲಾಗಿದೆ. ಅಥಣಿ ತಾಲೂಕಿನ ಐನಾಪುರ ಗ್ರಾಮದಲ್ಲಿರುವ ಸ್ನೇಹಿತನ ನಿವಾಸವೂ ತನಿಖೆಯ ವ್ಯಾಪ್ತಿಗೆ ಒಳಪಟ್ಟಿದೆ ಎನ್ನಲಾಗಿದೆ.

ವೈ. ಮಂಜುನಾಥ್ ಅವರು ಮಾಜಿ ಸಂಸದ ದೇವೇಂದ್ರಪ್ಪ ಅವರ ಪುತ್ರರಾಗಿದ್ದಾರೆ. ಬೇನಾಮಿ ಹೆಸರಿನಲ್ಲಿ ಜಮೀನು, ಮದ್ಯದಂಗಡಿ ಹಾಗೂ ಉಪಾಹಾರ ಗೃಹ ಸೇರಿದಂತೆ ವಿವಿಧ ಆಸ್ತಿಗಳನ್ನು ಹೊಂದಿರುವ ಆರೋಪಗಳ ಹಿನ್ನೆಲೆಯಲ್ಲಿ ಈ ದಾಳಿ ನಡೆದಿರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಸದ್ಯ ವೈ. ಮಂಜುನಾಥ್ ಬೆಂಗಳೂರಿನ ತಮ್ಮ ನಿವಾಸದಲ್ಲಿದ್ದಾರೆ ಎನ್ನಲಾಗಿದ್ದು, ಶೋಧ ಕಾರ್ಯದ ವೇಳೆ ಮಹತ್ವದ ದಾಖಲೆಗಳು ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಅಧಿಕಾರಿಗಳು ಸಂಗ್ರಹಿಸುತ್ತಿದ್ದಾರೆ. ಆದರೆ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇನ್ನೂ ಅಧಿಕೃತ ಮಾಹಿತಿ ಪ್ರಕಟಿಸಿಲ್ಲ.

## ಜು.1ರಿಂದಲೇ ವಿಕ್ಷಿತ ಭಾರತ್ ಜಿ ರಾಮ್ ಜಿ ಜಾರಿ

ಬೆಂಗಳೂರು: ಗ್ರಾಮೀಣ ಭಾಗದ ಕುಟುಂಬಗಳಿಗೆ ಉದ್ಯೋಗದ ಖಾತ್ರಿ ನೀಡಿದ್ದ ನರೇಗಾ ಹೊಸ ಸ್ವರೂಪ ವಿಕ್ಷಿತ ಭಾರತ್ ಜಿ ರಾಮ್ ಜಿಯಿಂದ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಹೊರೆಯಾದರೂ ಗ್ರಾಮೀಣ ಜನರ, ಮಹಿಳೆಯರ, ವಂಚಿತರ, ದುರ್ಬಲರ ಹಿತದೃಷ್ಟಿಯಿಂದ ಜುಲೈ 1ರಿಂದಲೇ ಜಾರಿಗೆ ತರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮಾ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೇಂದ್ರ ಸರ್ಕಾರ 90:10 ಅನುಪಾತದಲ್ಲಿ ವೇತನ ಭರಿಸುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಹಣ ನೀಡುತ್ತಿತ್ತು. ಆದರೆ, ಈಗ 60:40ರ ಅನುಪಾತದಲ್ಲಿ ವೆಚ್ಚ ಭರಿಸಬೇಕಾಗಿದ್ದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಆಗುತ್ತಿದೆ ಎಂದರು.

2006ರಿಂದ 2026ರಲ್ಲಿ ಇಲ್ಲಿಯವರೆಗೆ ಕೇಂದ್ರ ಸರ್ಕಾರ ನರೇಗಾ ಅಡಿಯಲ್ಲಿ 56492 ಕೋಟಿ ರೂ. ಭರಿಸಿದ್ದರೆ, ರಾಜ್ಯ ಸರ್ಕಾರ 4821 ಕೋಟಿ ಮಾತ್ರ ಭರಿಸಿ ಸುಮಾರು 182 ಕೋಟಿ ಮಾನವ ದಿನಗಳ ಉದ್ಯೋಗ ಒದಗಿಸಿತ್ತು. ಆದರೆ ಈಗ ಒಂದೇ ವರ್ಷಕ್ಕೆ 3806ಕೋಟಿ ರೂ. ವೆಚ್ಚ ಭರಿಸುವ ಸ್ಥಿತಿ ಬಂದಿದೆ. ಇದು ರಾಜ್ಯದ ಮೇಲೆ ಆಗುವ ದೊಡ್ಡ ಹೊರೆ ಎಂದು ತಿಳಿಸಿದರು.

ಸಂಸತ್ತಿನಲ್ಲಿ ವಿಬಿಜಿ ರಾಮ್ ಜಿ ಕಾಯಿದೆ ತರುವ ಮುನ್ನ ಕೇಂದ್ರ ಸರ್ಕಾರ ರಾಜ್ಯಗಳ ಸಲಹೆ ಪಡೆಯಬೇಕಾಗಿತ್ತು. ರಾಜ್ಯಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾಗಿತ್ತು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳನ್ನು ಬಿಟ್ಟು ಕಾಯಿದೆ ರೂಪಿಸಿದ ಬಗ್ಗೆಯೂ ಕರ್ನಾಟಕ ರಾಜ್ಯ ಸರ್ಕಾರದ ವಿರೋಧವಿದೆ. ಇದನ್ನು ಸುಪ್ರೀಂಕೋರ್ಟ್ ನಲ್ಲಿ ಪ್ರಶ್ನಿಸಲಾಗುತ್ತಿದೆ. ಜೊತೆಗೆ ಕೇಂದ್ರ ಸರ್ಕಾರ ಹಂತ ಹಂತವಾಗಿ ಕನಿಷ್ಠ 80:20ರ ಅನುಪಾತದಲ್ಲಾದರೂ ರಾಜ್ಯಗಳ ನೆರವಿಗೆ ನಿಲ್ಲಬೇಕು ಎಂದು ಆಗ್ರಹಿಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಅಡಿ ರಾಜ್ಯಕ್ಕೆ 5709 ಕೋಟಿ ರೂ. ಹಂಚಿಕೆ ಮಾಡಿದೆ. ಗ್ರಾಮೀಣ ಜನರಿಗೆ ತೊಂದರೆ ಆಗದಂತೆ ಯೋಜನೆಗೆ ರಾಜ್ಯ ಸರ್ಕಾರದ ವತಿಯಿಂದ 3806 ಕೋಟಿ ರೂ. ಭರಿಸಬೇಕಾಗುತ್ತದೆ. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಅವರು ಸಮ್ಮತಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರ ಅವೈಜ್ಞಾನಿಕವಾಗಿ ಬೇಸಾಯದ ಸಮಯದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡದಿರುವಂತೆ ಸೂಚಿಸಿದೆ. ಇದು ಗ್ರಾಮೀಣ ಕುಟುಂಬಗಳಿಗೆ ಮಾರಕವಾಗಿದೆ. ಕಾರಣ ಈಗ ಅತ್ಯಾಧುನಿಕ ಕೃಷಿ ಯಂತ್ರೋಪಕರಣ ಬಂದಿದ್ದು, ಗ್ರಾಮೀಣ ಕುಟುಂಬಗಳಿಗೆ ಬೇಸಾಯದ ಸಮಯದಲ್ಲೂ ಕೃಷಿ ಉದ್ಯೋಗ ಲಭಿಸುವುದಿಲ್ಲ. ಹೀಗಾಗಿ ವಿಬಿಜಿ ರಾಮ್ ಜಿ ಅವರ ಅನ್ನವನ್ನು ಕಸಿಸಿಕೊಂಡಂತೆ ಮಾಡಿದೆ. ಇದರ ವಿರುದ್ಧ ರಾಜ್ಯ ಸರ್ಕಾರ ಆಕ್ಷೇಪಣೆ ವ್ಯಕ್ತಪಡಿಸಿದೆ ಎಂದರು.

ಬರುವ 28ರಂದು ದೆಹಲಿಯಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್



ಸಚಿವರೊಂದಿಗೆ ಎಲ್ಲ ರಾಜ್ಯಗಳ ಸಚಿವರ ಸಭೆ ಇದ್ದು, ಈ ಸಭೆಯಲ್ಲಿ ಈ ಎಲ್ಲ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ನಮ್ಮ ರಾಜ್ಯದಲ್ಲಿ 375 ರೂ. ಕೂಲಿ ಇದೆ. ರಾಜ್ಯ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಳ ಮಾಡಿದೆ. ಇದಕ್ಕೆ ಹೊಂದುವಂತೆ ಕೇಂದ್ರವೂ ಕನಿಷ್ಠ ಕೂಲಿ ಹೆಚ್ಚಿಸಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು. ಜುಲೈ 1ರಿಂದ ಹೊಸ ಸ್ವರೂಪದ ಮನ್ರೇಗಾ (ವಿಬಿಜಿ ರಾಮ್ ಜಿ) ಜಾರಿ ಮಾಡಲಾಗುವುದು. ಇದರಡಿಯಲ್ಲಿ ಯಾರೇ ಉದ್ಯೋಗ ಕೇಳಿ ಬಂದರೂ ಅರ್ಹರಿಗೆ ಉದ್ಯೋಗ ನೀಡಲು ಸರ್ಕಾರ ಸನ್ನದ್ಧವಾಗಿದೆ ಎಂದರು.

ಕಳೆದ 3 ತಿಂಗಳಲ್ಲಿ ರಾಜ್ಯದಲ್ಲಿ 1.40 ಲಕ್ಷ ಮಾನವ ದಿನ ಸೃಷ್ಟಿಸಲಾಗಿದೆ. 9 ಕೋಟಿ ವಾರ್ಷಿಕ ಗುರಿ ಇಟ್ಟುಕೊಂಡಿದೆ. ಪ್ರತಿ ತಿಂಗಳೂ 80 ರಿಂದ 90 ಲಕ್ಷ ಮಾನವ ದಿನ ಸೃಷ್ಟಿ ನಮ್ಮ ಗುರಿಯಾಗಿದೆ ಎಂದರು. ಈಗಾಗಲೇ ನರೇಗಾ ಅಡಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 7000ಕ್ಕೂ ಹೆಚ್ಚು ಸಿಬ್ಬಂದಿಯ ಜೀವನೋಪಾಯಕ್ಕೆ ತೊಂದರೆ ಆಗದ ರೀತಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಖರ್ಗೆಯಿಂದ ಆಸ್ತಿ ಗುಳುಂ...?

ನವದೆಹಲಿ: ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕರ್ನಾಟಕ ಗೃಹ ಸಚಿವ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಬಿಜೆಪಿ ಭೂಕಬಳಿಕೆ ಮತ್ತು ಭ್ರಷ್ಟಾಚಾರದ ಗಂಭೀರ ಆರೋಪಗಳನ್ನು ಬುಧವಾರ ಮಾಡಿದೆ.

ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಅವರು, ಮಲ್ಲಿಕಾರ್ಜುನ ಖರ್ಗೆ ಮತ್ತು ಅವರ ಕುಟುಂಬದ ಒಡೆತನದ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ "ಬಡವರಿಗೆ ಸೇರಿದ ಭೂಮಿಯನ್ನು ಅಕ್ರಮವಾಗಿ ಹಂಚಿಕೆ ಮಾಡಲಾಗಿದೆ" ಎಂದು ಆರೋಪಿಸಿದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಕುಟುಂಬಸ್ಥರು ಮುನ್ನಡೆಸುತ್ತಿರುವ ಖಾಸಗಿ ಟ್ರಸ್ಟ್‌ಗೆ ಕರ್ನಾಟಕದಲ್ಲಿ 100 ಕೋಟಿ ರೂ. ಮೌಲ್ಯದ ಪ್ರಮುಖ ಸರ್ಕಾರಿ ಜಮೀನನ್ನು ನಿಯಮ ಉಲ್ಲಂಘಿಸಿ ಹಂಚಿಕೆ ಮಾಡಲಾಗಿದೆ ಎಂದು ಭಂಡಾರಿ ಆರೋಪಿಸಿದರು.

ಖರ್ಗೆ ಕುಟುಂಬದ ವಿರುದ್ಧ ಮೂರು ಪ್ರಮುಖ ಭೂ ಹಗರಣಗಳ ವಿವರಗಳನ್ನು ಬಿಡುಗಡೆ ಮಾಡಿದ ಪ್ರದೀಪ್ ಭಂಡಾರಿ, ಸಿದ್ದಾರ್ಥ ವಿಹಾರ್ ಟ್ರಸ್ಟ್ ನಲ್ಲಿ ಕೇವಲ ಖರ್ಗೆ ಕುಟುಂಬದ ಸದಸ್ಯರು ಮಾತ್ರ ಇದ್ದಾರೆ. ಸಿದ್ದಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ, ಅವರ ಪುತ್ರ ಪ್ರಿಯಾಂಕ್ ಖರ್ಗೆ, ಖರ್ಗೆ ಅವರ ಅಳಿಯ ಮತ್ತು ಅವರ ಧರ್ಮಪತ್ನಿ ಸದಸ್ಯರಾಗಿದ್ದಾರೆ.

ಇಡೀ ಕುಟುಂಬವೇ ಸೇರಿಕೊಂಡು ತಮ್ಮ ರಾಜಕೀಯ ಪ್ರಭಾವ ಹಾಗೂ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರ್ನಾಟಕದ ವಿವಿಧೆಡೆ ಬಡವರ ಭೂಮಿಯನ್ನು ಲೂಟಿ ಮಾಡಿದೆ ಎಂದು ಆರೋಪಿಸಿದರು.

"ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ 2024ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ 'ಏರೋಸ್ಪೇಸ್ ಮತ್ತು ಡಿಫೆನ್ಸ್ ಸಂಶೋಧನೆ ಮತ್ತು ಅಭಿವೃದ್ಧಿ' ಹೆಸರಿನಲ್ಲಿ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ ಭಾರಿ ಮೌಲ್ಯದ 5 ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ. ಖರ್ಗೆ ಕುಟುಂಬದ ವಿರುದ್ಧ ಮೂರು ಪ್ರಮುಖ ಭೂ ಹಗರಣಗಳ ವಿವರಗಳನ್ನು ಬಿಡುಗಡೆ ಮಾಡಿದ ಪ್ರದೀಪ್ ಭಂಡಾರಿ, ಸಿದ್ದಾರ್ಥ ವಿಹಾರ್ ಟ್ರಸ್ಟ್ ನಲ್ಲಿ ಕೇವಲ ಖರ್ಗೆ ಕುಟುಂಬದ ಸದಸ್ಯರು ಮಾತ್ರ ಇದ್ದಾರೆ. ಸಿದ್ದಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ, ಅವರ ಪುತ್ರ ಪ್ರಿಯಾಂಕ್ ಖರ್ಗೆ, ಖರ್ಗೆ ಅವರ ಅಳಿಯ ಮತ್ತು ಅವರ ಧರ್ಮಪತ್ನಿ ಸದಸ್ಯರಾಗಿದ್ದಾರೆ. ಇಡೀ ಕುಟುಂಬವೇ ಸೇರಿಕೊಂಡು ತಮ್ಮ ರಾಜಕೀಯ ಪ್ರಭಾವ ಹಾಗೂ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರ್ನಾಟಕದ ವಿವಿಧೆಡೆ ಬಡವರ ಭೂಮಿಯನ್ನು ಲೂಟಿ ಮಾಡಿದೆ ಎಂದು ಆರೋಪಿಸಿದರು.

"ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ 2024ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ 'ಏರೋಸ್ಪೇಸ್ ಮತ್ತು ಡಿಫೆನ್ಸ್ ಸಂಶೋಧನೆ ಮತ್ತು ಅಭಿವೃದ್ಧಿ' ಹೆಸರಿನಲ್ಲಿ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ ಭಾರಿ ಮೌಲ್ಯದ 5 ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ. ಕೈಗಾರಿಕಾ ಉದ್ದೇಶಗಳಿಗಾಗಿ ಬಳಸಬೇಕಿದ್ದ ಈ ಜಮೀನನ್ನು ಖರ್ಗೆ ಅವರ ಖಾಸಗಿ ಟ್ರಸ್ಟ್‌ಗೆ ನೀಡಲಾಗಿದ್ದು, ಇದರ ಪ್ರಸ್ತುತ ಮಾರುಕಟ್ಟೆ ಮೌಲ್ಯ ಸುಮಾರು 100 ಕೋಟಿ ರೂ." ಎಂದು ಬಿಜೆಪಿ ಹೇಳಿದೆ.

## ಗೃಹಲಕ್ಷ್ಮಿ ಯೋಜನೆಗೆ ಹೊಸ ನಿಯಮಗಳು: ಅಕ್ರಮ ತಡೆಗೆ

# ಸರ್ಕಾರದ ಕಟ್ಟುನಿಟ್ಟಿನ ಕ್ರಮ

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯನ್ನು ಇನ್ನಷ್ಟು ಪಾರದರ್ಶಕ ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹೊಸ ಕ್ರಮಗಳಿಗೆ ಮುಂದಾಗಿದೆ. ಯೋಜನೆಯ ದುರುಪಯೋಗ ತಡೆದು, ನಿಜವಾದ ಅರ್ಹ ಫಲಾನುಭವಿಗಳಿಗೆ ಮಾತ್ರ ಆರ್ಥಿಕ ನೆರವು ತಲುಪಿಸುವ ಉದ್ದೇಶದಿಂದ ಹೊಸದಾಗಿ ಅರ್ಜಿ ಸಲ್ಲಿಸುವ ಹಾಗೂ ಹಳೆಯ ಫಲಾನುಭವಿಗಳ ಮರುಪರಿಶೀಲನೆ ಪ್ರಕ್ರಿಯೆಗೆ ಅಂತಿಮ ಸಿದ್ಧತೆಗಳು ನಡೆಯುತ್ತಿವೆ.

ಇನ್ನೆರಡು ರಿಂದ ಮೂರು ದಿನಗಳಲ್ಲಿ ಯೋಜನೆಗೆ ಸಂಬಂಧಿಸಿದ ಅಧಿಕೃತ ಮಾರ್ಗಸೂಚಿಯನ್ನು ಅಂತಿಮಗೊಳಿಸುವ ನಿರೀಕ್ಷೆಯಿದ್ದು, ಬಳಿಕ ಹೊಸ ಅರ್ಜಿಗಳ ಸ್ವೀಕಾರ ಪ್ರಕ್ರಿಯೆ ಆರಂಭವಾಗಲಿದೆ. ಯೋಜನೆಯಡಿ ಮೃತಪಟ್ಟವರ ಹೆಸರಿನಲ್ಲಿ ಹಣ ವರ್ಗಾವಣೆಯಾಗುತ್ತಿರುವುದು ಹಾಗೂ ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿದಾರರಿಗೂ ಸೌಲಭ್ಯ ದೊರೆಯುತ್ತಿರುವ ಪ್ರಕರಣಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ.

ಈ ಬಾರಿ ಅರ್ಜಿ ಪ್ರಕ್ರಿಯೆಯನ್ನು ಜನಸ್ನೇಹಿಯಾಗಿ ರೂಪಿಸಲು ವಿಶೇಷ ವ್ಯವಸ್ಥೆ ಮಾಡಲಾಗಿದೆ. ಗ್ರಾಮೀಣ ಪ್ರದೇಶದ ಅನಕ್ಷರಸ್ಥರು ಹಾಗೂ ತಾಂತ್ರಿಕ ಜ್ಞಾನವಿಲ್ಲದ ಮಹಿಳೆಯರಿಗೆ ನೆರವಾಗಲು ಅಂಗನವಾಡಿ ಕಾರ್ಯಕರ್ತೆಯರನ್ನು ಬಳಸಿಕೊಳ್ಳಲು ಇಲಾಖೆ ತೀರ್ಮಾನಿಸಿದೆ. ಅವರ ಮೊಬೈಲ್‌ಗಳಿಗೆ ವಿಶೇಷ ಆಪ್ ಅಳವಡಿಸಲಾಗುತ್ತಿದ್ದು, ಅರ್ಹ ಮಹಿಳೆಯರ ಮನೆಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಲು ಸಹಾಯ ಮಾಡಲಿದ್ದಾರೆ.

ಮರು ಅರ್ಜಿ ಸಲ್ಲಿಸುವ ವೇಳೆ ಅರ್ಜಿದಾರರು ತಮ್ಮ ಹೆಸರು, ವಿಳಾಸ, ಆಧಾರ್ ಸಂಖ್ಯೆ ಹಾಗೂ ಕರ್ನಾಟಕದಲ್ಲಿರುವ ಸಕ್ರಿಯ ಬ್ಯಾಂಕ್ ಖಾತೆಯ ವಿವರಗಳನ್ನು ಕಡ್ಡಾಯವಾಗಿ ನೀಡಬೇಕಾಗುತ್ತದೆ. ಜಾತಿ ಪ್ರಮಾಣ ಪತ್ರ ಇಲ್ಲದಿದ್ದರೆ ಸ್ವಘೋಷಿತ ಜಾತಿ ಮಾಹಿತಿಯನ್ನು ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ.

ಆದಾಯ ತೆರಿಗೆ ಪಾವತಿಸುವವರು ಹಾಗೂ ಜಿಎಸ್‌ಟಿ ಸಲ್ಲಿಸುವ ಕುಟುಂಬಗಳ ಮಹಿಳೆಯರು ಗೃಹಲಕ್ಷ್ಮಿ ಯೋಜನೆಗೆ ಅರ್ಹರಾಗಿರುವುದಿಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ. ಯೋಜನೆಯ ಸೌಲಭ್ಯಗಳು ಕೇವಲ ಆರ್ಥಿಕವಾಗಿ ಹಿಂದುಳಿದ ಮತ್ತು ಅರ್ಹ ಕುಟುಂಬಗಳಿಗೆ ಮಾತ್ರ ತಲುಪುವಂತೆ ಸರ್ಕಾರ ಹೊಸ ವ್ಯವಸ್ಥೆಯನ್ನು ರೂಪಿಸುತ್ತಿದೆ.

25/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com





ಬೆಂ, ಸಂಪಾಜೆ ರಂಗ ಸಂಗಮ ಬೆಂಗಳೂರು ರವರ ವತಿಯಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ನಯನ ಸಭಾಂಗಣದಲ್ಲಿ ನಡೆದ ಸಾಂಸ್ಕೃತಿಕ ಹಾಗೂ ಕಲಾ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಸಂಪಾಜೆ ರಂಗ ಸಂಗಮದ ವತಿಯಿಂದ "ಸಂಪಾಜೆ ನೃತ್ಯೋತ್ಸವ-2026" ಕಾರ್ಯಕ್ರಮವನ್ನು ಹಿರಿಯ ಕಲಾವಿದ ಶಂಕರ್ ಭಟ್, ನಟ, ನಿರ್ಮಾಪಕ,ಹೋರಾಟಗಾರ ಗಂಡಸಿ ಸದಾನಂದ ಸ್ವಾಮಿ ಉದ್ಘಾಟಿಸಿದರು ವೇದಿಕೆಗೆ ವಿಶೇಷ ಆಹ್ವಾನಿತರಾಗಿ ಪದ್ಮನಾಭ ಜತ್ತಿಲ್ಲ, ಪುರುಷೋತ್ತಮ್, ಡಾ.ಗಣಪತಿ ಹೆಗಡೆ, ಹಿರಿಯ ಪತ್ರಕರ್ತ ರಮೇಶ್ ಸುರ್ವೆ, ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು . ಕಾರ್ಯಕ್ರಮದಲ್ಲಿ ಮಕ್ಕಳಿಗೆ ನೃತ್ಯ ಪ್ರದರ್ಶನ, ಅದ್ದೂರಿಯಾಗಿ ಪ್ರದರ್ಶನಗೊಂಡಿತು ಕಾರ್ಯಕ್ರಮದಲ್ಲಿ ಆದರ್ಶ ದಂಪತಿಗಳಾದ ಶ್ರೀಮತಿ ಲೀಲಾವತಿ, ಟಿಎಸ್ ನಾಗರಾಜ್, ಮತ್ತು ಶ್ರೀಮತಿ ಸರೋಜಾ, ಶ್ರೀ ಪರಮೇಶ್ ರವರಿಗೆ ಆದರ್ಶ ದಂಪತಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಮಹಿಳೆಯರಿಗೆ ಆರೋಗ್ಯ ಮತ್ತು ಪೌಷ್ಠಿಕ ಆಹಾರ ಜಾಗೃತಿ

ಚಿಕ್ಕಬಳ್ಳಾಪುರ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಕರ್ನಾಟಕ ಹಾಲು ಮಹಾಮಂಡಳಿ ಹಾಗೂ ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಪಾತೂರು ಗ್ರಾಮದಲ್ಲಿ ಮಹಿಳೆಯರಿಗೆ ಆರೋಗ್ಯ ಮತ್ತು ಪೌಷ್ಠಿಕ ಆಹಾರ ಕುರಿತು ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಕ್ಷೀರ ಸಂಜೀವಿನಿ ಯೋಜನೆಯ ಹಂತ–5ರಡಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘವನ್ನು ಯೋಜನೆಗೆ ಅಳವಡಿಸಿ ಮಹಿಳೆಯರಲ್ಲಿ ಆರೋಗ್ಯಕರ ಜೀವನಶೈಲಿ, ಪೌಷ್ಠಿಕ ಆಹಾರದ ಮಹತ್ವ ಹಾಗೂ ಕುಟುಂಬದ ಆರೋಗ್ಯ ಕಾಪಾಡುವ ಕುರಿತು ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳು ಆರೋಗ್ಯಕರ ಆಹಾರ ಪದ್ಧತಿ, ತಾಯಿ ಮತ್ತು ಮಕ್ಕಳ ಪೌಷ್ಠಿಕತೆ, ಸಮತೋಲನ ಆಹಾರದ ಅಗತ್ಯತೆ ಹಾಗೂ ಮಹಿಳೆಯರ ಆರೋಗ್ಯ ರಕ್ಷಣೆಗೆ ಸಂಬಂಧಿಸಿದ ಮಾಹಿತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಮಹಿಳಾ ನಿರ್ದೇಶಕಿ ಸುಧಾ, ಉಪ ವ್ಯವಸ್ಥಾಪಕ ಡಾ. ಮನೋರಂಜನ್ ರೆಡ್ಡಿ, ಕರ್ನಾಟಕ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆಯ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಬೀರ್‌ದಾರ್, ವಿಸ್ತರಣಾಧಿಕಾರಿ ಶುಭ, ಪಾಪಣ್ಣ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಮತ್ತೆ ಬಾಲ ಬಿಚ್ಚಿದ ಎಂಇಎಸ್

ಮುಖಪುಟದಿಂದ...

ಅಷ್ಟೇ ಅಲ್ಲದೆ, ಕರ್ನಾಟಕ ಸರ್ಕಾರದ ದಾದಾಗಿರಿ ನಡೆಯುವುದಿಲ್ಲ. ಬೆಳಗಾವಿ, ಖಾನಾಪುರ, ನಿಪ್ಪಾಣಿ, ಕಾರವಾರ, ಬೀದರ್ ಹಾಗೂ ಭಾಲ್ಕಿ ಸಂಯುಕ್ತ ಮಹಾರಾಷ್ಟ್ರ ಅಂತಾ ಘೋಷಣೆ ಕೂಗಿದ್ದಾರೆ.

ಇನ್ನು ಎಂಇಎಸ್ ಪುಂಡಾಟಿಕೆ ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪ್ರತಿಭಟಿಸಿದರು.

ಎಂಇಎಸ್ ಪುಂಡರನ್ನ ಬಂಧಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣ ಗೌಡರಿಂದ ನಗರದ ಎಸ್‌ಪಿ ಕಚೇರಿಯಿಂದ ಡಿಸಿ ಕಚೇರಿವರೆಗೂ ಪ್ರತಿಭಟನಾ ರ್‍ಯಾಲಿ ಮಾಡಿದ್ದಾರೆ.

ಸಂಗೊಳ್ಳಿ ರಾಯಣ್ಣ ವೃತ್ತದಲ್ಲೇ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರನ್ನು ಪೊಲೀಸರು ತಡೆದಿದ್ದಾರೆ. ಡಿಸಿ ಕಚೇರಿ ಆವರಣದಲ್ಲೇ ಸರ್ಕಾರದ ಆದೇಶ ಹರಿದು ಹಾಕುತ್ತಾರೆ. ಇದು ಕನ್ನಡಿಗರಿಗೆ ಮಾಡಿದ ಅವಮಾನ ಎಂದು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪುಂಡರ ವಿರುದ್ಧ ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಬೇಕು. ನಾಡದ್ರೋಹಿ ಎಂಇಎಸ್ ಮತ್ತು ಶಿವಸೇನೆಯನ್ನು ನಿಷೇಧಿಸಲು ಆಗ್ರಹಿಸಿದ್ದಾರೆ. ಜಿಲ್ಲಾಡಳಿತ ಪರವಾಗಿ ಬೆಳಗಾವಿ ಎಸಿಗೆ ಮನವಿ ಸಲ್ಲಿಸಿದ್ದಾರೆ.

# ಕೊಲೆ ಪ್ರಕರಣ: ಆರೋಪಿಗಳ ಬಂಧನ

ಬೆಂಗಳೂರು

ಭೀಮಾತೀರದಲ್ಲಿ 7 ಮಂದಿಯ ಭೀಕರ ಕೊಲೆಯ ಭಯಾನಕ ಘಟನೆ ಸಂಬಂಧ ಪ್ರಕರಣದ ಆರೋಪಿಗೆ ಜಿಲ್ಲಾ ಪೊಲೀಸರು ಗುಂಡು ಹೊಡೆದು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪೊಲೀಸರ ಗುಂಡೇಟು ಬಲಗಾಲಿಗೆ ತಗುಲಿ ಗಾಯಗೊಂಡಿರುವ ಪ್ರಕರಣದ ಪ್ರಮುಖ ಆರೋಪಿ ಮಹೇಶ್ ತಳವಾರ್ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಇಟ್ಟಂಗಿಹಾಳ ಗ್ರಾಮದ ಸುಮಾರು 1 ಕಿಮೀ ದೂರದಲ್ಲಿ ಇಂದು ಮುಂಜಾನೆ 5.30 ರ ವೇಳೆ ಆರೋಪಿ ಮಹೇಶ್ ಅಡಗಿರುವ ಸಂಬಂಧ ಬಗ್ಗೆ ಚಡಚಣ ವೃತ್ತ ಸರ್ಕಲ್ ಇನ್ಸ್ ಪೆಕ್ಟರ್ ಪರಶುರಾಮ್ ಮನಗೂಳಿ ಅವರಿಗೆ ಮಾಹಿತಿ ಲಭಿಸಿದೆ.

ಈ ಬಗ್ಗೆ ಖಚಿತ ಮಾಹಿತಿ ಮೇರೆಗೆ ಆರೋಪಿಯನ್ನು ಬಂಧಿಸಲು ಇನ್ಸ್ ಸ್ಪೆಕ್ಟರ್ ಮತ್ತು ಅವರ ಸಿಬ್ಬಂದಿಗಳಾದ ಶೇಖರ್ ಪವಾರ್, ವಿಜಯಕುಮಾರ್ ಬನಸೋಡೆ ಹಾಗೂ ಇನ್ನಿತರರೊಂದಿಗೆ ಸ್ಥಳಕ್ಕೆ ತೆರಳಿದ್ದಾರೆ.

ಆ ಸಂದರ್ಭದಲ್ಲಿ ಪೊಲೀಸರನ್ನು ನೋಡಿದ ಆರೋಪಿ ಮಹೇಶ್ ಚಂದ್ರಕಾಂತ್ ಏಕಾಏಕಿ ಸಿಬ್ಬಂದಿಗಳ ಮೇಲೆ ಕಲ್ಲಿನಿಂದ ದಾಳಿ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ.

ಈ ವೇಳೆ ಎರಡು ಬಾರಿ ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಸಿದರೂ ಬಗ್ಗದ ಮಹೇಶ್ ಕಲ್ಲಿನ ದಾಳಿ ಮುಂದುವರೆಸಿದಾಗ ಆತ್ಮರಕ್ಷಣೆಗೆ ಚಡಚಣ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಪರಶುರಾಮ್ ಮನಗೂಳಿ ಮತ್ತೊಂದು ಗುಂಡು ಹಾರಿಸಿದ್ದು,ಅದು ಬಲಗಾಲಿಗೆ ತಗುಲಿ ಕುಸಿದು ಬಿದ್ದ ಮಹೇಶ್ ನನ್ನು ಬಂಧಿಸಿ

# ಸ್ಟಡಿ ಯುಕೆ ಪ್ರೀ–ಡಿಪಾರ್ಚರ್ ಬ್ರೀಫಿಂಗ್ ಆಯೋಜನೆ

ಬೆಂಗಳೂರು

ಯುನೈಟೆಡ್ ಕಿಂಗ್‌ಡಮ್ (ಯುಕೆ) ನಲ್ಲಿ ಉನ್ನತ ಶಿಕ್ಷಣ ಪಡೆಯಲು ಸಿದ್ಧರಾಗಿರುವ ಭಾರತೀಯ ವಿದ್ಯಾರ್ಥಿಗಳಿಗಾಗಿ ಬ್ರಿಟಿಷ್ ಕೌನ್ಸಿಲ್ 'ಸ್ಟಡಿ ಯುಕೆ ಪ್ರೀ–ಡಿಪಾರ್ಚರ್ ಬ್ರೀಫಿಂಗ್' ಕಾರ್ಯಕ್ರಮವನ್ನು ಆಯೋಜಿಸಿದೆ.

ಜುಲೈ 16, 2026 ರಂದು ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ (ಭಾರತೀಯ ಕಾಲಮಾನ) ಆನ್‌ಲೈನ್ ಮೂಲಕ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ವಿದ್ಯಾರ್ಥಿಗಳನ್ನು ಆಹ್ವಾನಿಸಲಾಗಿದೆ.

2026ರ ಆಟಮ್/ವಿಂಟರ್ ದಾಖಲಾತಿಗಾಗಿ ಯುಕೆ ಉನ್ನತ ಶಿಕ್ಷಣ ಸಂಸ್ಥೆಗಳಿಂದ ಷರತ್ತುಬದ್ಧ ಅಥವಾ ಅಂತಿಮ ಪ್ರವೇಶಾತಿ ಆಫರ್ ಪಡೆದಿರುವ ವಿದ್ಯಾರ್ಥಿಗಳಿಗಾಗಿ ಈ ವಿಶೇಷ ವರ್ಚುವಲ್




ಅಧಿವೇಶನವನ್ನು ರೂಪಿಸಲಾಗಿದೆ.

ವಿದ್ಯಾರ್ಥಿಗಳು ಯುಕೆಯಲ್ಲಿ ಹೊಸ ಪರಿಸರಕ್ಕೆ ಸುಗಮವಾಗಿ ಹೊಂದಿಕೊಳ್ಳಲು ಅಗತ್ಯವಾದ ಮಾಹಿತಿ, ಮಾರ್ಗದರ್ಶನ ಮತ್ತು ಅನುಭವಗಳನ್ನು ಈ ಕಾರ್ಯಕ್ರಮದ ಮೂಲಕ ಪಡೆಯಲಿದ್ದಾರೆ. ವೀಸಾ ಅರ್ಜಿ ಪ್ರಕ್ರಿಯೆ, ವಸತಿ ವ್ಯವಸ್ಥೆ, ಪ್ರಯಾಣ ಸಿದ್ಧತೆ, ಆರೋಗ್ಯ ಮತ್ತು ಸ್ವಾಸ್ಥ್ಯ, ವಿದ್ಯಾರ್ಥಿ ಜೀವನ ಸೇರಿದಂತೆ ಹಲವು ವಿಷಯಗಳ ಕುರಿತು ತಜ್ಞರಿಂದ ಮಾಹಿತಿ ನೀಡಲಾಗುತ್ತದೆ.

ಕಾರ್ಯಕ್ರಮದಲ್ಲಿ ಯುಕೆ ವೀಸಾ ಮತ್ತು ಇಮಿಗ್ರೇಶನ್ (ಯುಕೆವಿಐ), ಬ್ರಿಟಿಷ್ ಯೂನಿವರ್ಸಿಟೀಸ್ ಇಂಟರ್‌ನ್ಯಾಷನಲ್ ಲೈಸನ್ ಅಸೋಸಿಯೇಷನ್ (ಬ್ಯುಯಿಲಾ) ಪ್ರತಿನಿಧಿಗಳು, ಯುಕೆ ಮಾಜಿ ವಿದ್ಯಾರ್ಥಿಗಳು ಹಾಗೂ ಪ್ರಸ್ತುತ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

ವಿದೇಶದಲ್ಲಿ ಶಿಕ್ಷಣ ಮುಂದುವರಿಸಲು ಸಿದ್ಧರಾಗಿರುವ ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮ ಉಪಯುಕ್ತ ಮಾಹಿತಿಯನ್ನು ಒದಗಿಸುವ ಮಹತ್ವದ ವೇದಿಕೆಯಾಗಲಿದೆ ಎಂದು ಬ್ರಿಟಿಷ್ ಕೌನ್ಸಿಲ್ ತಿಳಿಸಿದೆ.

# ಐದು ವರ್ಷಗಳಲ್ಲಿ ಪ್ರತಿದಿನ 324 ಕೋಟಿ ಮೌಲ್ಯವೃದ್ಧಿ

ಬೆಂಗಳೂರು

2025ರ ಬರ್ಗಂಡಿ ಪ್ರೈವೇಟ್ ಹುರುನ್ ಇಂಡಿಯಾ 500 ಪಟ್ಟಿಯಲ್ಲಿ ಕರ್ನಾಟಕದ 59 ಕಂಪನಿಗಳು ಸ್ಥಾನ ಪಡೆದಿದ್ದು, ರಾಜ್ಯದ ಕಾರ್ಪೊರೇಟ್ ಮತ್ತು ಸ್ಟಾರ್ಟ್‌ಅಪ್ ಕ್ಷೇತ್ರದ ಬೆಳವಣಿಗೆಗೆ ಮತ್ತೊಂದು ಸಾಕ್ಷಿಯಾಗಿದೆ. ಆಕ್ಸಿಸ್ ಬ್ಯಾಂಕ್‌ನ ಪ್ರೈವೇಟ್ ಬ್ಯಾಂಕಿಂಗ್ ವಿಭಾಗವಾದ ಬರ್ಗಂಡಿ ಪ್ರೈವೇಟ್ ಹಾಗೂ ಹುರುನ್ ಇಂಡಿಯಾ ಬಿಡುಗಡೆ ಮಾಡಿರುವ ವರದಿಯ ಪ್ರಕಾರ, ಕರ್ನಾಟಕದ ಕಂಪನಿಗಳು ಕಳೆದ ಐದು ವರ್ಷಗಳಲ್ಲಿ ಪ್ರತಿದಿನ ಸರಾಸರಿ 324 ಕೋಟಿ ಮೌಲ್ಯವನ್ನು ಹೆಚ್ಚಿಸಿಕೊಂಡಿವೆ.

ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಕರ್ನಾಟಕದ 59 ಕಂಪನಿಗಳಲ್ಲಿ 20 ಸ್ಟಾರ್ಟ್‌ಅಪ್‌ಗಳಿದ್ದು, ರಾಜ್ಯದ ಬಲಿಷ್ಠ ಉದ್ಯಮಶೀಲ ಪರಿಸರವನ್ನು ಪ್ರತಿಬಿಂಬಿಸುತ್ತವೆ. 2021ರಲ್ಲಿ ಪಟ್ಟಿ ಆರಂಭವಾದಾಗಿನಿಂದ ರಾಜ್ಯದ ಕಂಪನಿಗಳ ಒಟ್ಟು ಮೌಲ್ಯ ಡಿಗ.22.6 ಲಕ್ಷ ಕೋಟಿಯಿಂದ ಡಿಗ.28.6 ಲಕ್ಷ ಕೋಟಿಗೆ ಏರಿಕೆಯಾಗಿದ್ದು, ಡಿಗ.6 ಲಕ್ಷ ಕೋಟಿ ಅಥವಾ ಶೇ.26ರಷ್ಟು ಬೆಳವಣಿಗೆ ದಾಖಲಿಸಿದೆ.

ರಾಜ್ಯದ ಅತ್ಯಂತ ಮೌಲ್ಯಯುತ ಕಂಪನಿಯಾಗಿ ಇನ್ಫೋಸಿಸ್ ಡಿಗ.4.8 ಲಕ್ಷ ಕೋಟಿ ಮೌಲ್ಯದೊಂದಿಗೆ ಮೊದಲ ಸ್ಥಾನದಲ್ಲಿದೆ. ಟೈಟನ್ ಕಂಪನಿ ಡಿಗ.3.9 ಲಕ್ಷ ಕೋಟಿ ಹಾಗೂ ವಿಪ್ರೋ ಡಿಗ.2.1 ಲಕ್ಷ ಕೋಟಿ ಮೌಲ್ಯದೊಂದಿಗೆ ನಂತರದ ಸ್ಥಾನಗಳಲ್ಲಿ ಕಾಣಿಸಿಕೊಂಡಿವೆ.

ಸ್ಟಾರ್ಟ್‌ಅಪ್ ವಿಭಾಗದಲ್ಲಿ ಝೆರೋಧಾ86,660 ಕೋಟಿ ಮೌಲ್ಯಮಾಪನದೊಂದಿಗೆ ಮುಂಚೂಣಿಯಲ್ಲಿದ್ದು, ರೇಜರ್‌ಪೇ ಡಿಗ.71,100 ಕೋಟಿ ಹಾಗೂ ಜೆಪ್ಟೊ 66,360 ಕೋಟಿ ಮೌಲ್ಯಮಾಪನದೊಂದಿಗೆ ಕ್ರಮವಾಗಿ ಎರಡನೇ ಮತ್ತು ಮೂರನೇ ಸ್ಥಾನ ಪಡೆದಿವೆ.


# ಬೆಂಗಳೂರು ಮತ್ತು ಗೋವಾದಲ್ಲಿ ಸ್ಪಾರ್ಕ್ ಬೈ ಹಿಲ್ಟನ್‌ಗೆ ಚಾಲನೆ

ನವದೆಹಲಿ

ಜಾಗತಿಕ ಆತಿಥ್ಯ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ಹಿಲ್ಟನ್, ಬೆಂಗಳೂರು ಮತ್ತು ಗೋವಾದಲ್ಲಿ 'ಸ್ಪಾರ್ಕ್ ಬೈ ಹಿಲ್ಟನ್' ಹೋಟೆಲ್‌ಗಳನ್ನು ಆರಂಭಿಸುವ ಮೂಲಕ ಏಷ್ಯಾ ಪೆಸಿಫಿಕ್ ಪ್ರದೇಶದಲ್ಲಿ ಈ ಬ್ರ್ಯಾಂಡ್‌ನ ಚೊಚ್ಚಲ ಪ್ರವೇಶವನ್ನು ಘೋಷಿಸಿದೆ.

ಭಾರತದಲ್ಲಿ ಮುಂದಿನ ಕೆಲವು ವರ್ಷಗಳಲ್ಲಿ 150 'ಸ್ಪಾರ್ಕ್ ಬೈ ಹಿಲ್ಟನ್' ಹೋಟೆಲ್‌ಗಳನ್ನು ಆರಂಭಿಸುವ ಉದ್ದೇಶದೊಂದಿಗೆ ಆಲಿವ್ ಹಾಸ್ಪಿಟಾಲಿಟಿಯೊಂದಿಗೆ ಮಾಡಿಕೊಂಡಿರುವ ಕಾರ್ಯತಂತ್ರದ ಒಪ್ಪಂದದ ಭಾಗವಾಗಿ ಈ ಎರಡು ಹೋಟೆಲ್‌ಗಳು ಆರಂಭಗೊಂಡಿವೆ.

2023ರಲ್ಲಿ ಆರಂಭಗೊಂಡ 'ಸ್ಪಾರ್ಕ್ ಬೈ ಹಿಲ್ಟನ್' ಬ್ರ್ಯಾಂಡ್, ಹಿಲ್ಟನ್‌ನ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಬ್ರ್ಯಾಂಡ್‌ಗಳಲ್ಲಿ ಒಂದಾಗಿದೆ. ಕೈಗೆಟುಕುವ ದರದಲ್ಲಿ ಗುಣಮಟ್ಟದ, ವಿಶ್ವಾಸಾರ್ಹ




ಮತ್ತು ಆರಾಮದಾಯಕ ವಾಸ್ತವ್ಯವನ್ನು ಒದಗಿಸುವ ಉದ್ದೇಶದಿಂದ ಈ ಬ್ರ್ಯಾಂಡ್ ರೂಪುಗೊಂಡಿದೆ.

ಪ್ರಸ್ತುತ ಅಮೆರಿಕ, ಯುನೈಟೆಡ್ ಕಿಂಗ್‌ಡಮ್, ಕೆನಡಾ ಸೇರಿದಂತೆ ಹಲವು ದೇಶಗಳಲ್ಲಿ 240ಕ್ಕೂ ಹೆಚ್ಚು ಹೋಟೆಲ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಇನ್ನೂ ಸುಮಾರು 230 ಹೋಟೆಲ್‌ಗಳು ಅಭಿವೃದ್ಧಿ ಹಂತದಲ್ಲಿವೆ.

'ಸ್ಪಾರ್ಕ್ ಬೈ ಹಿಲ್ಟನ್ ಬೆಂಗಳೂರು ಮಾರತಹಳ್ಳಿ ಔಟರ್ ರಿಂಗ್ ರೋಡ್' 82 ಕೊಠಡಿಗಳನ್ನು ಹೊಂದಿದ್ದು, ನಗರದ ಪ್ರಮುಖ ತಂತ್ರಜ್ಞಾನ ಮತ್ತು ವಾಣಿಜ್ಯ ಕೇಂದ್ರಗಳಲ್ಲಿ ಒಂದಾದ ಮಾರತಹಳ್ಳಿಯಲ್ಲಿ ಸ್ಥಾಪಿಸಲಾಗಿದೆ.

ರಫ್ತು ಪ್ರೋತ್ಸಾಹ ಕೈಗಾರಿಕಾ ಉದ್ಯಾನ, ಎಂಬಸಿ ಟೆಕ್ ವಿಲೇಜ್, ಇಕೋ ವರ್ಲ್ಡ್, ಸಲಾರ್‌ಪುರಿಯಾ ಸಾಫ್ಟ್‌ಝೋನ್ ಹಾಗೂ ಹೆಲಿಯೊಸ್ ಟೆಕ್ ಪಾರ್ಕ್‌ಗಳಿಗೆ ಸಮೀಪದಲ್ಲಿರುವ ಈ ಹೋಟೆಲ್, ಕಾರ್ಪೊರೇಟ್ ಹಾಗೂ ಎಂಐಸಿಇ (ಸಭೆಗಳು, ಪ್ರೋತ್ಸಾಹಕ ಕಾರ್ಯಕ್ರಮಗಳು, ಸಮ್ಮೇಳನಗಳು ಮತ್ತು ಪ್ರದರ್ಶನಗಳು) ವಿಭಾಗದ ಅತಿಥಿಗಳನ್ನು ಗುರಿಯಾಗಿಸಿಕೊಂಡಿದೆ.

# ಸುಪ್ರಾ ಪೆಸಿಫಿಕ್‌ನಿಂದ ದೇಶಾದ್ಯಂತ ವಿಸ್ತರಣೆ

ಬೆಂಗಳೂರು

ಬಿಎಸ್‌ಇ ಪಟ್ಟಿಯಲ್ಲಿರುವ ಪ್ರಮುಖ ಬ್ಯಾಂಕಿಂಗೇತರ ಹಣಕಾಸು ಸಂಸ್ಥೆಯಾದ ಸುಪ್ರಾ ಪೆಸಿಫಿಕ್ ಫೈನಾನ್ಶಿಯಲ್ ಸರ್ವಿಸಸ್ ಲಿಮಿಟೆಡ್ ದೇಶಾದ್ಯಂತ ತನ್ನ ವ್ಯಾಪ್ತಿಯನ್ನು ವಿಸ್ತರಿಸುವ ಮಹತ್ವಾಕಾಂಕ್ಷಿ ಯೋಜನೆಯನ್ನು ಘೋಷಿಸಿದೆ. ಮುಂದಿನ ಮೂರು ವರ್ಷಗಳಲ್ಲಿ 15 ರಾಜ್ಯಗಳಲ್ಲಿ 500 ಹೊಸ ಶಾಖೆಗಳನ್ನು ಆರಂಭಿಸುವ ಗುರಿಯನ್ನು ಕಂಪನಿ ಹೊಂದಿದ್ದು, ರೂ.2,500 ಕೋಟಿ ಆಸ್ತಿ ಮೂಲವನ್ನು ನಿರ್ಮಿಸುವ ಉದ್ದೇಶ ಹೊಂದಿದೆ.

ಕಂಪನಿಯು 2025–26ನೇ ಆರ್ಥಿಕ ವರ್ಷದಲ್ಲಿ ಗಮನಾರ್ಹ ಬೆಳವಣಿಗೆ ಸಾಧಿಸಿದ್ದು, ಒಟ್ಟು ಆಸ್ತಿ ಮೌಲ್ಯ ರೂ.290 ಕೋಟಿಯಿಂದ ರೂ.499 ಕೋಟಿಗೆ ಏರಿಕೆಯಾಗಿದೆ. ಇದು ಶೇ. 64.39ರಷ್ಟು ವೃದ್ಧಿಯನ್ನು ದಾಖಲಿಸಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಈ ಮೊತ್ತವನ್ನು ರೂ.750 ಕೋಟಿಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ.

ಪ್ರಸ್ತುತ ಚಿನ್ನದ ಸಾಲ, ಕಿರುಹಣಕಾಸು, ವಾಹನ ಸಾಲ ಹಾಗೂ ಉದ್ಯಮ ಸಾಲ ಸೇವೆಗಳನ್ನು ನೀಡುತ್ತಿರುವ ಸಂಸ್ಥೆ, ಇದೀಗ ಸಣ್ಣ ವ್ಯಾಪಾರಿಗಳು ಹಾಗೂ ಎಂಎಸ್‌ಎಂಇ ವಲಯಕ್ಕೆ ರೂ.10 ಲಕ್ಷದಿಂದ ರೂ.1 ಕೋಟಿ ವರೆಗಿನ ದುಡಿಯುವ ಬಂಡವಾಳ ಸಾಲ ಯೋಜನೆಗಳನ್ನು ಪರಿಚಯಿಸುತ್ತಿದೆ. ಗ್ರಾಹಕರಿಗೆ ಸುಲಭ ಮತ್ತು ವೇಗದ ಸೇವೆ ಒದಗಿಸುವ ಉದ್ದೇಶದಿಂದ ನೂತನ ಮೊಬೈಲ್ ಅಪ್ಲಿಕೇಶನ್‌ನ್ನೂ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ.

ಈ ಕುರಿತು ಮಾತನಾಡಿದ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮನೋಜ್ ರವಿ, "ಭಾರತದ ಆರ್ಥಿಕ ಬೆಳವಣಿಗೆಯು ಗ್ರಾಮೀಣ ಪ್ರದೇಶಗಳು ಹಾಗೂ ಶ್ರೇಣಿ–2, 3 ಮತ್ತು 4 ನಗರಗಳಲ್ಲಿ ಸಾಲದ ಸೌಲಭ್ಯಗಳನ್ನು ವಿಸ್ತರಿಸಲು ಉತ್ತಮ ಅವಕಾಶ ಒದಗಿಸಿದೆ. ಹಲವೆಡೆ ಅಧಿಕೃತ ಚಿನ್ನದ ಸಾಲ ಮತ್ತು ಸಣ್ಣ ಉದ್ಯಮ ಸಾಲಗಳ ಲಭ್ಯತೆ ಇನ್ನೂ ಸೀಮಿತವಾಗಿದೆ. ನಮ್ಮ ಶಾಖೆಗಳ ಜಾಲವನ್ನು ವಿಸ್ತರಿಸುವ ಮೂಲಕ ಹಣಕಾಸು ಸೇರ್ಪಡೆಗೆ ಉತ್ತೇಜನ ನೀಡುವುದರ ಜೊತೆಗೆ 'ವಿಕಸಿತ ಭಾರತ 2047' ಕನಸಿನ ಸಾಕಾರಕ್ಕೆ ಸಹಕರಿಸಲಿದ್ದೇವೆ" ಎಂದು ಹೇಳಿದರು.

# ವಚನ ಗಾಯನ, ಪ್ರಬಂಧ ಸ್ಪರ್ಧೆ: ನೋಂದಾಯಿಸಲು ಸೂಚನೆ

ತುಮಕೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತುಮಕೂರು ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಸಮಸ್ತ ವೀರಶೈವ–ಲಿಂಗಾಯಿತ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜುಲೈ 2ರಂದು ನಡೆಯುವ ಡಾ: ಫ.ಗು.ಹಳಕಟ್ಟಿ ಜನ್ಮ ದಿನದ ಪ್ರಯುಕ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ಅಂಗವಾಗಿ ಜೂನ್ 30ರಂದು ಮಧ್ಯಾಹ್ನ 3 ಗಂಟೆಗೆ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ವಚನ ಗಾಯನ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಲಾಗುವುದು. ಸ್ಪರ್ಧೆಯಲ್ಲಿ ವಿಜೇತರಾದ ಪ್ರಥಮ ಮೂರು ವಿಜೇತರಿಗೆ "ಡಾ: ಫ.ಗು.ಹಳಕಟ್ಟಿ ಜನ್ಮ ದಿನ ಪ್ರಯುಕ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ" ಕಾರ್ಯಕ್ರಮದಂದು ಸನ್ಮಾನಿಸಲಾಗುವುದು.

ಸ್ಪರ್ಧೆಯನ್ನು ಮೂರು ವಿಭಾಗದಲ್ಲಿ ಏರ್ಪಡಿಸಿದ್ದು, 1ನೇ ಹಂತದಲ್ಲಿ ಪಿಯುಸಿ ಹಂತದಲ್ಲಿ (ಪ್ರಥಮ /ದ್ವಿತೀಯ ಪಿ.ಯು.ಸಿ ಅಥವಾ ಸಮನಾಂತರದಲ್ಲಿ) ಹಾಗೂ 2ನೇ ಹಂತದಲ್ಲಿ ಸ್ನಾತಕ/ ಸ್ನಾತಕೋತ್ತರ ವಿಭಾಗದಲ್ಲಿ ಹಾಗೂ 3ನೇ ಹಂತದಲ್ಲಿ ಸಾರ್ವಜನಿಕರಿಗೆ (23ನೇ ವಯಸ್ಸಿನ ಮೇಲ್ಪಟ್ಟು) ಅವಕಾಶ ನೀಡಲಾಗುವುದು. ಎಲ್ಲಾ ಸ್ಪರ್ಧೆಗಳಲ್ಲೂ ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿದ್ದು, ಸ್ಪರ್ಧೆಯ ಅವಧಿ 30 ನಿಮಿಷಗಳು ಮಾತ್ರ. ವಚನ ಗಾಯನ ಸ್ಪರ್ಧೆಯಲ್ಲಿ 12ನೇ ಶತಮಾನದಲ್ಲಿ ಶರಣ/ ಶರಣೆಯರು ರಚಿಸಿದ ವಚನಗಳಿಗೆ ಮಾತ್ರ ಅವಕಾಶ ನೀಡಲಾಗುವುದು.

ಪ್ರಬಂಧ ಸ್ಪರ್ಧೆಯಲ್ಲಿ ವಚನ ಸಾಹಿತ್ಯಕ್ಕೆ ಡಾ: ಫ. ಗು.ಹಳಕಟ್ಟಿ ಅವರ ಕೊಡುಗೆ ಕುರಿತಂತೆ ಸ್ಪರ್ಧೆಯನ್ನು ಏರ್ಪಡಿಸಲಾಗುವುದು. ಸ್ಪರ್ಧಾರ್ಥಿಗಳು ಜೂನ್ 30ಕ್ಕೂ ಪೂರ್ವದಲ್ಲಿ ಸಂಘಟಕರ ಬಳಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ವಿದ್ವಾನ್ ಎಂ.ಜಿ. ಸಿದ್ದರಾಮಯ್ಯ (ಮೊ:9449472092), ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ರಾಜಶೇಖರಯ್ಯ(ಮೊ:9448253225), ಬಸವ ಕೇಂದ್ರದ ಕಲ್ಪನ(ಮೊ:9448479405) ಅವರನ್ನು ಸಂಪರ್ಕಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು. ಮಿರ್ಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಂಗಾ ಕಲ್ಯಾಣ ಯೋಜನೆ: ಸಾರ್ವಜನಿಕರ ಜಾಗೃತಿಗಾಗಿ ಮನವಿ

ತುಮಕೂರು

ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಗಂಗಾಕಲ್ಯಾಣ ಯೋಜನೆಯು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, 2024–25 ಹಾಗೂ 2025–26ನೇ ಸಾಲಿನಲ್ಲಿ ನಿಗಮದಿಂದ ವಿವಿಧ ವಿಧಾನಸಭಾ ಕ್ಷೇತ್ರರ್ಗಳಲ್ಲಿ ಕೊಳವೆ ಬಾವಿ ಕೊರೆಯುವ ಕಾರ್ಯ ಪ್ರಾರಂಭಿಸಲಾಗಿದೆ.

ಸದರಿ ಕೊಳವೆ ಬಾವಿ ಕೊರೆಯುವ ವಿಷಯಕ್ಕೆ ಅಥವಾ ನಿಗಮದ ಯಾವುದೇ ಯೋಜನೆಗೆ ಸಂಬಂಧಿಸಿದಂತೆ ಬೋರ್‌ವೆಲ್ ಏಜೆನ್ಸಿಯ ಸಿಬ್ಬಂದಿಗಳಾಗಲಿ ಹಾಗೂ ಯಾವುದೇ ಮಧ್ಯವರ್ತಿಗಳಾಗಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ ನಿಗಮದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕೆಂದು ಸಾರ್ವಜನಿಕರು/ಫಲಾನುಭವಿಗಳಲ್ಲಿ ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ.ವಾ.ಸಂ. 0816–2200069, ಮೊ.ಸಂ. 9480300400ಯನ್ನು ಸಂಪರ್ಕಿಸಬೇಕೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಮಹೇಂದ್ರ ಅವರು ತಿಳಿಸಿದ್ದಾರೆ.

ಸದರಿ ಕೊಳವೆ ಬಾವಿ ಕೊರೆಯುವ ವಿಷಯಕ್ಕೆ ಅಥವಾ ನಿಗಮದ ಯಾವುದೇ ಯೋಜನೆಗೆ ಸಂಬಂಧಿಸಿದಂತೆ ಬೋರ್‌ವೆಲ್ ಏಜೆನ್ಸಿಯ ಸಿಬ್ಬಂದಿಗಳಾಗಲಿ ಹಾಗೂ ಯಾವುದೇ ಮಧ್ಯವರ್ತಿಗಳಾಗಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ ನಿಗಮದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕೆಂದು ಸಾರ್ವಜನಿಕರು/ಫಲಾನುಭವಿಗಳಲ್ಲಿ ಮನವಿ ಮಾಡಲಾಗಿದೆ.

# ಯೋಗ ದಿನ ಆಚರಣೆ

ತುಮಕೂರು

ಜಿಲ್ಲಾ ನ್ಯಾಯಾಂಗ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಬೆಂಗಳೂರು ಜೀವನ್ಮುಕ್ತಿ ಫೌಂಡೇಶನ್ ಟ್ರಸ್ಟ್ ವತಿಯಿಂದ ಭಾನುವಾರ ಬೆಳಿಗ್ಗೆ 6.30 ಗಂಟೆಗೆ ತುಮಕೂರು ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ 'ಆರೋಗ್ಯಕರ ವಯಸ್ಸಿಗೆ ಯೋಗ' ಎಂಬ ಘೋಷವಾಕ್ಯದೊಂದಿಗೆ ಯೋಗಾ ದಿನಾಚರಣೆಯನ್ನು ಆಚರಿಸಲಾಯಿತು.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಜಯಂತ ಕುಮಾರ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಬೆಂಗಳೂರು ಜೀವನ್ಮುಕ್ತಿ ಫೌಂಡೇಶನ್ ಟ್ರಸ್ಟ್‌ನ ಯೋಗ ಮಾಸ್ಟರ್ ಗಿರೀಶ್ ಪುತ್ತೂರು ಅಧ್ಯಕ್ಷತೆವಹಿಸಿದ್ದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ದ ಸದಸ್ಯ ಕಾರ್ಯದರ್ಶಿಗಳಾದ ಲೋಕೇಶ ಧನಪಾಲ ಹವಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಈ ಸಂದರ್ಭದಲ್ಲಿ ಎಲ್ಲಾ ನ್ಯಾಯಾಧೀಶರು ಮತ್ತು ಸಿಬ್ಬಂದಿ

# ಕನಕಧಾರ ಸೀಡ್ಸ್‌ನ ಸಿಂಧೂರ ಎಫ್-1 ಕರುಬೂಜ ತಳಿ ಉತ್ತಮ ಇಳುವರಿ

ಪಾವಗಡ

ಹೈದರಾಬಾದ್ ಮೂಲದ ಕನಕಧಾರ ಸೀಡ್ಸ್ ಸಂಸ್ಥೆಯ ಸಿಂಧೂರ ಎಫ್–1 ಕರುಬೂಜ ತಳಿ ಉತ್ತಮ ಇಳುವರಿ ನೀಡಿದ್ದು, ಮಳೆ, ಬಿಸಿಲು ಹಾಗೂ ಒಣಹವೆಯನ್ನು ಸಹಿಸಿಕೊಳ್ಳುವ ಸಾಮರ್ಥ್ಯ ಹೊಂದಿರುವ ಈ ತಳಿಯಿಂದ ಉತ್ತಮ ಆದಾಯ ಗಳಿಸುವ ನಿರೀಕ್ಷೆ ಮೂಡಿದೆ ಎಂದು ಶ್ರೀರಂಗಪುರ ತಾಂಡದ ರೈತ ಶ್ರೀನಿವಾಸ್ ನಾಯ್ಕ್ ಸಂತಸ ವ್ಯಕ್ತಪಡಿಸಿದರು.

ನಾಗಲಮಡಿಕೆ ಹೋಬಳಿಯ ಶ್ರೀರಂಗಪುರ ತಾಂಡದಲ್ಲಿ ಸಿಂಧೂರ ಎಫ್–1 ಕರುಬೂಜ ತಳಿಯನ್ನು ಯಶಸ್ವಿಯಾಗಿ ಬೆಳೆದು ಉತ್ತಮ ಫಲಿತಾಂಶ ಪಡೆದ ಹಿನ್ನೆಲೆಯಲ್ಲಿ ಕನಕಧಾರ ಸೀಡ್ಸ್ ಸಂಸ್ಥೆಯ ಅಧಿಕಾರಿಗಳು ರೈತ ಶ್ರೀನಿವಾಸ್ ನಾಯ್ಕ್ ಅವರನ್ನು ಸನ್ಮಾನಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ಶ್ರೀನಿವಾಸ್ ನಾಯ್ಕ್, ಕಳೆದ ಹತ್ತು ವರ್ಷಗಳಿಂದ ವಿವಿಧ ಬೆಳೆಗಳು ಹಾಗೂ ವಿವಿಧ ತಳಿಗಳ ಬೀಜಗಳನ್ನು ಬಳಸಿ ಕೃಷಿ ಮಾಡುತ್ತಿರುವುದಾಗಿ ತಿಳಿಸಿದರು. ಸಿಂಧೂರ ತಳಿಯ ಕುರಿತು ಸಲಹೆ ಪಡೆದು ಮೂರು ಎಕರೆ ಪ್ರದೇಶದಲ್ಲಿ ಕರುಬೂಜ ಬೆಳೆದಿದ್ದು, ಸುಮಾರು ರೂ.1.50 ಲಕ್ಷ ವೆಚ್ಚದಲ್ಲಿ ಬೆಳೆ ಬೆಳೆಸಲಾಗಿದೆ ಎಂದು ಹೇಳಿದರು.

ಪ್ರತಿ ಎಕರೆಗೆ ಸುಮಾರು 15 ಟನ್‌ಗಳಷ್ಟು ಇಳುವರಿ ನಿರೀಕ್ಷೆಯಿದ್ದು, ಒಟ್ಟು 40ರಿಂದ 50 ಟನ್‌ಗಳಷ್ಟು ಉತ್ಪಾದನೆ ಸಾಧ್ಯವಾಗುವ ನಿರೀಕ್ಷೆಯಿದೆ. ಈಗಾಗಲೇ ವ್ಯಾಪಾರಿಗಳಿಂದ ಮುಂಗಡ ಹಣವೂ ದೊರೆತಿದ್ದು, ಈ ತಳಿ ಲಾಭದಾಯಕವಾಗಿದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನಿಗಳು ಇನ್ನಷ್ಟು ಉತ್ತಮ ಗುಣಮಟ್ಟದ ತಳಿಗಳನ್ನು ಅಭಿವೃದ್ಧಿಪಡಿಸಿದರೆ ರೈತರ ಬದುಕು ಮತ್ತಷ್ಟು ಸುಧಾರಿಸಲಿದೆ

3S ಭಾರತ ಸಾರಥಿ
BHARATHA SARATHI KANNADA DAILY NEWS PAPER
25/06/2026



# ಭೂ ವಿವಾದ ಪ್ರಕರಣದಲ್ಲಿ ರೈತನಿಗೆ ನ್ಯಾಯ ಒದಗಿಸಲು ಒತ್ತಾಯ

ಬೂದಿಕೋಟೆ

ರೈತನೊಬ್ಬರ ಮೇಲೆ ದೌರ್ಜನ್ಯ ನಡೆಯುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು ಎಂದು ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಜೈ ಭೀಮ್ ಶ್ರೀನಿವಾಸ್ ಒತ್ತಾಯಿಸಿದರು.

ಹೋಬಳಿಯ ದೆಬ್ಬನಹಳ್ಳಿ ಗ್ರಾಮದ ಜಮೀನಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮದ ಸರ್ವೆ ನಂ. 27ರಲ್ಲಿ ಎಸ್. ಮುನಿಯಪ್ಪ ಬಿನ್ ಶಂಕರಪ್ಪ ಅವರಿಗೆ ಸರ್ಕಾರವು 1991–92ನೇ ಸಾಲಿನಲ್ಲಿ ದರ್ಖಾಸ್ತು ಮೂಲಕ 1 ಎಕರೆ 30 ಗುಂಟೆ ಜಮೀನು ಮಂಜೂರು ಮಾಡಿದ್ದು, ಇದಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳು ಅವರ ಬಳಿ



ಇವೆ ಎಂದು ತಿಳಿಸಿದರು.

ಎರಡು ವರ್ಷಗಳ ಹಿಂದೆ ಇದೇ ಗ್ರಾಮದ ಕೃಷ್ಣಪ್ಪ ಎಂಬುವವರಿಗೆ ಪರಸ್ಪರ ವಿಶ್ವಾಸದ ಆಧಾರದ ಮೇಲೆ ಒಂದು ಎಕರೆ ಜಮೀನನ್ನು ಉಳುಮೆ ಮಾಡಲು ನೀಡಲಾಗಿತ್ತು. ಆದರೆ ಯಾವುದೇ ರೀತಿಯ ಲಿಖಿತ ಒಪ್ಪಂದ ಅಥವಾ ಅಗ್ರಿಮೆಂಟ್ ಮಾಡಿಕೊಳ್ಳಲಾಗಿಲ್ಲ. ಇದೀಗ ಕೃಷ್ಣಪ್ಪ ಅವರು ಕೆಲವರೊಂದಿಗೆ ಸೇರಿಕೊಂಡು ಎಸ್. ಮುನಿಯಪ್ಪ ಅವರ ಮೇಲೆ ದೌರ್ಜನ್ಯ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಎಸ್. ಮುನಿಯಪ್ಪ ಅವರು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವರಾಗಿದ್ದು, ಅವರಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಬೂದಿಕೋಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರೂ ಇದುವರೆಗೆ ನ್ಯಾಯ ದೊರೆತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಪ್ರಕರಣದ ಸಾಧಕ–ಬಾಧಕಗಳನ್ನು ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ ಸಂಘಟನೆ ಪರಿಶೀಲಿಸಿದ್ದು, ಸಂತ್ರಸ್ತ ರೈತನಿಗೆ ರಕ್ಷಣೆ ಒದಗಿಸಿ ಭೂ ವಿವಾದವನ್ನು ಕಾನೂನುಬದ್ಧವಾಗಿ ಬಗೆಹರಿಸಬೇಕು ಎಂದು ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರು.

ಪ್ರಕರಣಕ್ಕೆ ಸೂಕ್ತ ನ್ಯಾಯ ದೊರೆಯದಿದ್ದಲ್ಲಿ ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ ಸಂಘಟನೆಯ ವತಿಯಿಂದ ಮುಂದಿನ ದಿನಗಳಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಜೈ ಭೀಮ್ ಶ್ರೀನಿವಾಸ್ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಸಂಜು, ಅಂಬೇಡ್ಕರ್ ವೀರ ಸೇನೆ ಸಂಸ್ಥಾಪಕ ಅಧ್ಯಕ್ಷ ಭಟ್ಟರಕುಪ್ಪೆ ಅರುಣ್, ಕಾರಮಾನಹಳ್ಳಿ ಅಶೋಕ್, ಅಮರೀಶ್, ಮುನೆಂಗಟಪ್ಪ, ಶಿವಶಂಕರ್, ಸಂತೋಷ್, ವೆಂಕಟಮ್ಮ, ಸರಿತಾ, ಸ್ವಾತಿ, ನಾಗೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೋನಿಗೆ ಬಿದ್ದ ಚಿರತೆ



ತಿಪಟೂರು

ತಾಲ್ಲೂಕಿನ ಕಸಬಾ ಹೋಬಳಿಯ ಮತ್ತಿಹಳ್ಳಿ ಗ್ರಾಮದಲ್ಲಿ ಹಲವು ದಿನಗಳಿಂದ ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದ್ದ ಚಿರತೆ ಅರಣ್ಯ ಇಲಾಖೆಯವರು ಅಳವಡಿಸಿದ್ದ ಬೋನಿಗೆ ಬಿದ್ದಿದ್ದು, ಗ್ರಾಮಸ್ಥರು ನಿಟ್ಟುಸಿರು ಬಿಟ್ಟಿದ್ದಾರೆ.

ಕಳೆದ ಕೆಲವು ದಿನಗಳಿಂದ ಗ್ರಾಮದ ಸುತ್ತಮುತ್ತ ಚಿರತೆ ಕಾಣಿಸಿಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ ಗ್ರಾಮಸ್ಥರಲ್ಲಿ ಭಯದ ವಾತಾವರಣ ನಿರ್ಮಾಣವಾಗಿತ್ತು. ಕೃಷಿ ಚಟುವಟಿಕೆಗಳಿಗಾಗಿ ತೋಟ ಹಾಗೂ ಹೊಲಗಳಿಗೆ ತೆರಳಲು ರೈತರು ಆತಂಕ ಅನುಭವಿಸುತ್ತಿದ್ದರು. ಮಹಿಳೆಯರು ಮತ್ತು ಸಾರ್ವಜನಿಕರು ರಾತ್ರಿ ಹಾಗೂ ಹಗಲು ವೇಳೆಯಲ್ಲೂ ಸಂಚರಿಸಲು ಭಯಪಡುತ್ತಿದ್ದರು.

ಚಿರತೆಯ ಸಂಚಾರದಿಂದ ಚಿಕ್ಕ ಮಕ್ಕಳು ಮನೆಯಿಂದ ಹೊರಬರಲು ಹೆದರುವ ಪರಿಸ್ಥಿತಿ ಉಂಟಾಗಿದ್ದು, ಗ್ರಾಮಸ್ಥರ ದೈನಂದಿನ ಜೀವನದ ಮೇಲೂ ಪರಿಣಾಮ ಬೀರಿತ್ತು. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಮುನ್ನೆಚ್ಚರಿಕಾ ಕ್ರಮವಾಗಿ ಗ್ರಾಮ ಸಮೀಪ ಬೋನು ಅಳವಡಿಸಿತ್ತು.

ಭಾನುವಾರ ರಾತ್ರಿ ಚಿರತೆ ಬೋನಿಗೆ ಬಿದ್ದಿರುವುದು ಪತ್ತೆಯಾಗಿದ್ದು, ವಿಷಯ ತಿಳಿಯುತ್ತಿದ್ದಂತೆಯೇ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಚಿರತೆ ಸೆರೆ ಸಿಕ್ಕಿರುವ ಸುದ್ದಿ ಹರಡುತ್ತಿದ್ದಂತೆಯೇ ಮತ್ತಿಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಜನರು ಸ್ಥಳಕ್ಕೆ ಆಗಮಿಸಿ ಚಿರತೆಯನ್ನು ವೀಕ್ಷಿಸಿದರು.

ಚಿರತೆ ಸೆರೆ ಸಿಕ್ಕಿರುವುದರಿಂದ ಗ್ರಾಮಸ್ಥರಲ್ಲಿ ನೆಮ್ಮದಿ ಮೂಡಿದ್ದು, ಅರಣ್ಯ ಇಲಾಖೆಯ ಕ್ರಮಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಚಿರತೆಯನ್ನು ಸುರಕ್ಷಿತವಾಗಿ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸುವ ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿದುಬಂದಿದೆ.

# ಬಸ್ ದರ ಏರಿಕೆಗೆ ಪ್ರಸ್ತಾವನೆ

ಬೆಂಗಳೂರು

ಈಗಾಗಲೇ ಅಗತ್ಯ ವಸ್ತುಗಳ ದರ ಏರಿಕೆಯಿಂದ ಬಸವಳಿದಿರುವ ಶ್ರೀಸಾಮಾನ್ಯನಿಗೆ ಶೀಘ್ರದಲ್ಲೇ ಕೆಎಸ್ಆರ್‌ಟಿಸಿ ಮತ್ತು ಬಿಎಂಟಿಸಿ ಟಿಕೆಟ್ ದರ ಏರಿಕೆ ಬಿಸಿ ತಟ್ಟಲಿದೆ. ಡೀಸೆಲ್ ದರ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಕೆಎಸ್ಆರ್‌ಟಿಸಿ ಶೇ. 33 ರಷ್ಟು ಹಾಗೂ ಬಿಎಂಟಿಸಿ ಟಿಕೆಟ್ ದರವನ್ನು ಶೇ. 44ರಷ್ಟು ಏರಿಕೆ ಮಾಡುವಂತೆ ಸರ್ಕಾರಕ್ಕೆ ಅಧಿಕೃತವಾಗಿ ಪ್ರಸ್ತಾವನೆ ಸಲ್ಲಿಸಿವೆ.

ತೀವ್ರ ಆರ್ಥಿಕ ನಷ್ಟ ಹಾಗೂ ಡೀಸೆಲ್ ದರ ಏರಿಕೆಯಿಂದ ರಾಜ್ಯ ಸಾರಿಗೆ ಸಂಸ್ಥೆ ನಷ್ಟ ಅನುಭವಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೆಎಸ್ಆರ್‌ಟಿಸಿಯಿಂದ ನಾಲ್ಕು ನಿಗಮಗಳು ಹಾಗೂ ಬಿಎಂಟಿಸಿ ಟಿಕೆಟ್ ದರ ಏರಿಕೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪ್ರಸ್ತಾವನೆ ಸಲ್ಲಿಸಿದೆ.

ಇತ್ತೀಚೆಗಷ್ಟೇ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೆಎಸ್ಆರ್‌ಟಿಸಿ ಮತ್ತು ಬಿಎಂಟಿಸಿ ಬಸ್ ಟಿಕೆಟ್ ದರ ಏರಿಕೆ ಮಾಡುವ ಕುರಿತು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದರು. ಇದರ ಬೆನ್ನಲ್ಲೇ ಕೆಎಸ್ ಆರ್ ಟಿಸಿ ಮತ್ತು ಬಿಎಂಟಿಸಿ ಟಿಕೆಟ್ ದರ ಏರಿಕೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸರ್ಕಾರ ದರ ಏರಿಕೆಗೆ ಒಪ್ಪಿಗೆ ಸೂಚಿಸಿದರೆ, ಬಸ್ ಪ್ರಯಾಣದರ ಏರಿಕೆಯಾಗುವುದು ನಿಶ್ಚಿತವಾಗಲಿದೆ.

ರಾಜ್ಯ ಸರ್ಕಾರ ಈ ಹಿಂದೆ 2025ರ ಜನವರಿ 5ರಿಂದ ಜಾರಿಗೆ ಬರುವಂತೆ ಸರ್ಕಾರಿ ಬಸ್‌ಗಳ ಟಿಕೆಟ್ ದರವನ್ನು ಶೇ. 15ರಷ್ಟು ಹೆಚ್ಚಳ ಮಾಡಿ ಆದೇಶ ಹೊರಡಿಸಿತ್ತು. ಈಗ ಸಾರಿಗೆ ಸಂಸ್ಥೆಗಳು ಮತ್ತೊಮ್ಮೆ ದರ ಪರಿಷ್ಕರಣೆಗಾಗಿ ಸರ್ಕಾರಕ್ಕೆ ಹೊಸ ಪ್ರಸ್ತಾವನೆಯನ್ನು ಸಲ್ಲಿಸಿವೆ. ಸಾರಿಗೆ ನಿಗಮಗಳು ದರ ಏರಿಕೆಯನ್ನು ಸಮರ್ಥಿಸಿಕೊಳ್ಳುತ್ತಿದ್ದು, ತಕ್ಷಣವೇ ಈ ಕ್ರಮ ಕೈಗೊಳ್ಳದಿದ್ದರೆ ಸಂಸ್ಥೆಗಳು ಸಂಪೂರ್ಣ ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿವೆ ಎಂದು ಸಿಎಂಗೆ ಮನವರಿಕೆ ಮಾಡಿಕೊಟ್ಟಿವೆ.

ಮೇ 25ರವರೆಗಿನ ಇಂಧನ ದರ ಏರಿಕೆಯು ನಿಗಮಗಳ ಸೊರಗುವಿಕೆಗೆ ಪ್ರಮುಖ ಕಾರಣವಾಗಿದೆ. ಕೇವಲ ಹತ್ತು ದಿನಗಳ ಅವಧಿಯಲ್ಲಿ ನಾಲ್ಕು ಬಾರಿ ಡೀಸೆಲ್ ದರ ಏರಿಕೆಯಾಗಿದೆ. ಇದರಿಂದಾಗಿ ಪ್ರತಿ ಲೀಟರ್ ಡೀಸೆಲ್ ಬೆಲೆಯಲ್ಲಿ ಬರೋಬ್ಬರಿ 7.81 ರೂ. ಏರಿಕೆಯಾಗಿದೆ.

ಪ್ರತಿ ನಿತ್ಯ ನಾಲ್ಕೂ ನಿಗಮಗಳ ಬಸ್‌ಗಳಿಗೆ 13 ಲಕ್ಷ ಲೀಟರ್‌ಗೂ ಹೆಚ್ಚು ಡೀಸೆಲ್ ಬಳಕೆಯಾಗುತ್ತಿದೆ. ಈ ಇಂಧನ ದರ ಏರಿಕೆಯಿಂದಾಗಿ ಸಾರಿಗೆ ನಿಗಮಗಳಿಗೆ ತಿಂಗಳಿಗೆ 40 ಕೋಟಿ ರೂ. ಹಾಗೂ ವರ್ಷಕ್ಕೆ ಬರೋಬ್ಬರಿ 480 ಕೋಟಿ ರೂ.ಗಳ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ.

ಸರ್ಕಾರದ ಮಹತ್ವಾಕಾಂಕ್ಷಿ 'ಶಕ್ತಿ' ಉಚಿತ ಬಸ್ ಪ್ರಯಾಣ ಯೋಜನೆ, ಇನ್ನೊಂದೆಡೆ ದಿನೇ ದಿನೇ ಗಗನಕ್ಕೇರುತ್ತಿರುವ ನಿರ್ವಹಣಾ ವೆಚ್ಚ ಹಾಗೂ ಸಾರಿಗೆ ನೌಕರರ ವೇತನ ಪರಿಷ್ಕರಣೆ ಈ ತ್ರಿವಳಿ ಸವಾಲುಗಳಿಂದಾಗಿ ಸಾರಿಗೆ ನಿಗಮಗಳ ಮೇಲಿನ ಆರ್ಥಿಕ ಹೊರೆ ಮತ್ತು ಆಡಳಿತಾತ್ಮಕ ಜವಾಬ್ದಾರಿ ಈಗ ಹಿಂದೆಂದಿಗಿಂತಲೂ ದುಪ್ಪಟ್ಟಾಗಿದೆ.

# ವಿದ್ಯುತ್ ಖಾಸಗೀಕರಣ ವಿರೋಧಿಸಿ ಬೃಹತ್ ಪ್ರತಿಭಟನೆ

ಕೋಲಾರ

ವಿದ್ಯುತ್ ಕ್ಷೇತ್ರದ ಖಾಸಗೀಕರಣವನ್ನು ವಿರೋಧಿಸಿ ಹಾಗೂ ಟಾಟಾ ಪವರ್ ಕಂಪನಿಗೆ ಸಮಾನಾಂತರ ವಿದ್ಯುತ್ ವಿತರಣಾ ಪರವಾನಗಿ ನೀಡುವ ಪ್ರಸ್ತಾವನೆಯನ್ನು ತಿರಸ್ಕರಿಸಬೇಕೆಂದು ಆಗ್ರಹಿಸಿ ವಿದ್ಯುತ್ ಖಾಸಗೀಕರಣ ವಿರೋಧಿ ಹೋರಾಟ ಸಮಿತಿ ನೇತೃತ್ವದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಯಿತು.

ನಗರದ ನಚಿಕೇತನ ನಿಲಯದ ಬಳಿಯ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಪ್ರತಿಭಟನಾಕಾರರು ಅಲ್ಲಿಂದ ಮೆಕ್ಕೆ ವೃತ್ತದವರೆಗೆ ಕಾಲ್ನಡಿಗೆ ಜಾಥಾ ನಡೆಸಿದರು. ಬಳಿಕ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಶ್ರೀನಿವಾಸ್ ಅವರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಹೋರಾಟ ಸಮಿತಿಯ ಸಹ ಸಂಚಾಲಕ ಹಾಗೂ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್, ರಾಜ್ಯ ಸರ್ಕಾರ ಬಂಡವಾಳಶಾಹಿಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ಮುಂದಾಗಿದೆ ಎಂದು ಆರೋಪಿಸಿದರು. ಬೆಸ್ಕಾಂ ವ್ಯಾಪ್ತಿಯಲ್ಲಿ ಟಾಟಾ ಪವರ್ ಕಂಪನಿಗೆ ಸಮಾನಾಂತರ ವಿದ್ಯುತ್ ವಿತರಣಾ ಪರವಾನಗಿ ನೀಡುವ ಪ್ರಸ್ತಾವನೆಯನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ಕೂಡಲೇ ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು.

ಖಾಸಗೀಕರಣದಿಂದ ಸಾಮಾನ್ಯ ಗ್ರಾಹಕರು ಹಾಗೂ ರೈತರು ತೊಂದರೆ ಅನುಭವಿಸುವ ಸಾಧ್ಯತೆ ಇದ್ದು, ರೈತರ ಹಿತಾಸಕ್ತಿ ಹಾಗೂ ಸಾರ್ವಜನಿಕ ವಿದ್ಯುತ್ ಸೇವೆಗಳ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

ಹೋರಾಟ ಸಮಿತಿಯ ಸಂಚಾಲಕ ಗಾಂಧಿನಗರ



ನಾರಾಯಣಸ್ವಾಮಿ ಮಾತನಾಡಿ, ಖಾಸಗಿ ಕಂಪನಿಗಳಿಗೆ ವಿದ್ಯುತ್ ವಿತರಣೆಗೆ ಅವಕಾಶ ನೀಡಿದರೆ ಸರ್ಕಾರಿ ಸ್ವಾಮ್ಯದ ಬೆಸ್ಕಾಂ ಸಂಸ್ಥೆಯ ಆರ್ಥಿಕ ಸ್ಥಿತಿ ಹದಗೆಡುವ ಸಾಧ್ಯತೆ ಇದೆ ಎಂದು ಹೇಳಿದರು. ಅಲ್ಲದೆ, ಸಂಸ್ಥೆಯ ಅಧಿಕಾರಿಗಳು ಮತ್ತು ನೌಕರರ ಭವಿಷ್ಯಕ್ಕೂ ಧಕ್ಕೆಯಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು. ಈ ಸಂಬಂಧ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಿದ್ದು, ವಿವಿಧ ಸಂಘಟನೆಗಳು ತಮ್ಮ ವಿರೋಧ ವ್ಯಕ್ತಪಡಿಸಿ ಆಕ್ಷೇಪಣೆ ಸಲ್ಲಿಸಿವೆ. ಅವುಗಳನ್ನು ಪರಿಗಣಿಸಿ ಸರ್ಕಾರ ತನ್ನ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ದೆಹಲಿ ಹಾಗೂ ಒಡಿಶಾ ರಾಜ್ಯಗಳಲ್ಲಿ ವಿದ್ಯುತ್ ವಿತರಣೆಯನ್ನು ಖಾಸಗಿ ವಲಯಕ್ಕೆ ನೀಡಿದ ಬಳಿಕ ವಿದ್ಯುತ್ ದರ ಏರಿಕೆಯಾಗಿದೆ ಎಂದು ಆರೋಪಿಸಿದ ಅವರು, ಈ ಅನುಭವಗಳನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಹೋರಾಟ ಸಮಿತಿಯ ಸಹ ಸಂಚಾಲಕರಾದ ವಕ್ಕಲೇರಿ ರಾಜಪ್ಪ, ಎನ್.ಎನ್. ಶ್ರೀರಾಮ್, ಅಬ್ಬಣಿ ಶಿವಪ್ಪ, ವಿ. ಗೀತಾ, ಕೆ. ನಾರಾಯಣಗೌಡ, ವರದೇನಹಳ್ಳಿ ವೆಂಕಟೇಶ್, ರಾಮು ಶಿವಣ್ಣ, ವಡಗೂರು ರಾಮು, ಮಾರ್ಜೇನಹಳ್ಳಿ ಬಾಬು, ಟಿ. ವಿಜಯಕುಮಾರ್, ಭೀಮರಾಜ್, ನಾರಾಯಣರೆಡ್ಡಿ, ಕವಿಪ್ರ ನಿಗಮ ನೌಕರರ ಸಂಘದ ಕೇಂದ್ರ ಸಮಿತಿ ಸದಸ್ಯ ವೆಂಕಟೇಶ್, ಸ್ಥಳೀಯ ನೌಕರರ ಸಂಘದ ಅಧ್ಯಕ್ಷ ಗಾಂಧಿನಗರ ಸುಬ್ರಮಣಿ, ಕಾರ್ಯದರ್ಶಿ ಮಲ್ಲಿಕಾರ್ಜುನ್, ಪದಾಧಿಕಾರಿಗಳಾದ ಶ್ರೀನಾಥ್, ವಿಜಿಕುಮಾರ್, ಫೈರೋಜ್ ಖಾನ್ ಸೇರಿದಂತೆ ವಿವಿಧ ಜನಪರ ಸಂಘಟನೆಗಳ ಮುಖಂಡರು, ಬೆಸ್ಕಾಂ ನೌಕರರು, ರೈತರು ಹಾಗೂ ಸಾರ್ವಜನಿಕರು ಹೆಚ್ಚಿನ

# ಬನಶಂಕರಿ ದೇವಿ ಜಾತ್ರಾ ಮಹೋತ್ಸವ

ತಿಪಟೂರು

ತಾಲೂಕಿನ ಗಡಿಭಾಗದ ಸಾಸಲು ಗ್ರಾಮದಲ್ಲಿ ಆರಾಧ್ಯ ದೇವತೆ ಶ್ರೀ ಬನಶಂಕರಿ ದೇವಿ ಹಾಗೂ ಜಗದ್ಗುರು ಶ್ರೀ ಮರುಳಸಿದ್ದೇಶ್ವರ ಸ್ವಾಮಿಯವರ ಜಾತ್ರಾ ಮಹೋತ್ಸವ ಜೂನ್ 27ರಿಂದ ಜುಲೈ 2ರವರೆಗೆ ವಿಜೃಂಭಣೆಯಿಂದ ನಡೆಯಲಿದ್ದು, ಜಾತ್ರೆಯ ಯಶಸ್ಸಿಗೆ ಹಿಂಡಿಸ್ಕೆರೆ ದೇವಾಂಗ ಸಂಘ ಸಂಪೂರ್ಣ ಸಹಕಾರ ನೀಡಲು ತೀರ್ಮಾನಿಸಿದೆ ಎಂದು ಸಂಘದ ಕಾರ್ಯದರ್ಶಿ ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಪ್ರಕಾಶ್ ತಿಳಿಸಿದ್ದಾರೆ.

ನಗರದ ಕೌಸ್ತುಭ ಹೋಟೆಲ್ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರಾ ಮಹೋತ್ಸವದ ಅಂಗವಾಗಿ ಜೂನ್ 30ರಿಂದ ಜುಲೈ 2ರವರೆಗೆ ಹಿಂಡಿಸ್ಕೆರೆ ದೇವಾಂಗ ಸಂಘದ ವತಿಯಿಂದ ದೇವಿಗೆ ವಿಶೇಷ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಸಮುದಾಯದ ಎಲ್ಲ ಸದಸ್ಯರು ಒಗ್ಗಟ್ಟಿನಿಂದ ಜಾತ್ರೆಯನ್ನು ಯಶಸ್ವಿಗೊಳಿಸಲು ಕೈಜೋಡಿಸಬೇಕು. ಜಾತ್ರೆಯ ಸಂದರ್ಭದಲ್ಲಿ ಯಾವುದೇ ರೀತಿಯ ಅಡಚಣೆ ಉಂಟಾಗದಂತೆ ಚಿಕ್ಕನಾಯಕನಹಳ್ಳಿ ದೇವಾಂಗ ಸಂಘ ಮತ್ತು ಹಿಂಡಿಸ್ಕೆರೆ ದೇವಾಂಗ ಸಂಘದವರು ಒಗ್ಗೂಡಿ ಸೇವಾ ಕಾರ್ಯಗಳಲ್ಲಿ ಭಾಗವಹಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ದೇವಾಂಗ ಸಂಘದ ಅಧ್ಯಕ್ಷ ಹೆಚ್.ಕೆ. ಕೃಷ್ಣಶೆಟ್ಟಿ ಮಾತನಾಡಿ, ಜಾತ್ರಾ ಮಹೋತ್ಸವದ ಅಂಗವಾಗಿ ಹಿಂಡಿಸ್ಕೆರೆ ದೇವಾಂಗ ಮಂಡಳಿಯ ವತಿಯಿಂದ ಶ್ರೀ ಬನಶಂಕರಿ ದೇವಿಗೆ ವೀರಗಾರಿಕೆ ಸೇವೆ ಹಾಗೂ ಗಂಡುಗಾದ್ರಿ ಸೇವೆ ಸಲ್ಲಿಸಲಾಗುವುದು ಎಂದು ಹೇಳಿದರು.

ಇದೇ ವೇಳೆ ಚಿಕ್ಕ ರಥೋತ್ಸವ, ಮದ್ದಿನ ಪ್ರದರ್ಶನ, ಬಲಿಶಾಂತಿ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ದೇವಾಂಗ ಸಮಾಜದ ಮುಖಂಡರಾದ ಗವಿರಂಗಯ್ಯ, ಚಂದ್ರಶೇಖರ್, ಕೃಷ್ಣಮೂರ್ತಿ, ಹರೀಶ್, ಗಿರೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬದುಕಿನ ವಿಕಾಸಕ್ಕೆ ಧರ್ಮವೇ ಅಡಿಪಾಯ: ಶ್ರೀರಂಭಾಪುರಿ ಜಗದ್ಗುರು

ಕೊರಟಗೆರೆ

ಮನುಷ್ಯನ ಬದುಕಿನಲ್ಲಿ ಧರ್ಮ, ಸಂಸ್ಕೃತಿ ಮತ್ತು ಸಂಸ್ಕಾರಗಳು ಅತ್ಯಂತ ಪ್ರಮುಖವಾದವು. ಬದುಕಿನ ನಿಜವಾದ ಆಸ್ತಿ ಇವುಗಳೇ ಆಗಿದ್ದು, ಬದುಕಿನ ವಿಕಾಸಕ್ಕೆ ಧರ್ಮವೇ ಅಡಿಪಾಯ ಎಂದು ಬಾಳೆಹೊನ್ನೂರಿನ ಶ್ರೀರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಚನ್ನರಾಯನದುರ್ಗ ಹೋಬಳಿಯ ಸಿದ್ದರಬೆಟ್ಟದ ಶ್ರೀಬಾಳೆಹೊನ್ನೂರು ಖಾಸಾ ಶಾಖಾ ಮಠದಲ್ಲಿ ಭಾನುವಾರ ನಡೆದ 20ನೇ ವಾರ್ಷಿಕೋತ್ಸವ ಹಾಗೂ ಜನಜಾಗೃತಿ ಧರ್ಮ ಸಮಾರಂಭವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಸುಂದರ ಉಡುಗೆಯಿಂದ ವ್ಯಕ್ತಿತ್ವದಲ್ಲಿ ಬದಲಾವಣೆ ಕಾಣಬಹುದಾದರೂ, ಬದುಕಿನ ನಿಜವಾದ ಪರಿವರ್ತನೆ ಸಂಸ್ಕಾರ ಮತ್ತು ಸರಳತೆಯಿಂದ ಮಾತ್ರ ಸಾಧ್ಯ. ಆಧುನಿಕತೆಯ ಭರಾಟೆಯಲ್ಲಿ ನಮ್ಮ ಸಂಸ್ಕೃತಿ ಮರೆಯಾಗುತ್ತಿರುವುದು ವಿಷಾದನೀಯ. ಶ್ರೀವೀರಭದ್ರ ಶಿವಾಚಾರ್ಯ ಸ್ವಾಮೀಜಿಗಳು ಅಲ್ಪಾವಧಿಯಲ್ಲೇ ಸಮಾಜಮುಖಿ ಕಾರ್ಯಗಳ ಮೂಲಕ ಭಕ್ತರ ಮನಸ್ಸಿನಲ್ಲಿ ವಿಶೇಷ ಸ್ಥಾನ ಗಳಿಸಿದ್ದಾರೆ ಎಂದು ಪ್ರಶಂಸಿಸಿದರು.

ಸಿದ್ದರಬೆಟ್ಟ ಶ್ರೀಬಾಳೆಹೊನ್ನೂರು ಖಾಸಾ ಶಾಖಾ ಮಠದ ಪೀಠಾಧ್ಯಕ್ಷ ಶ್ರೀವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸಾಮೂಹಿಕ ವಿವಾಹಗಳು ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು. ಶ್ರೀಮಠಕ್ಕೆ ಸೇವೆ ಸಲ್ಲಿಸಿದ ಭಕ್ತರಿಗೆ ಪ್ರತಿವರ್ಷ "ಗುರುಸೇವಾ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದರು.

ತುಮಕೂರು ನಗರ ಶಾಸಕ ಜ್ಯೋತಿ ಗಣೇಶ್ ಮಾತನಾಡಿ, ಸಿದ್ದರಬೆಟ್ಟ ಶ್ರೀಮಠದ 20ನೇ ವರ್ಷದ ವಾರ್ಷಿಕೋತ್ಸವ ಇತಿಹಾಸದ ಪುಟ ಸೇರಿದೆ. ಶ್ರೀಕ್ಷೇತ್ರದ



ಪರಿಸರ ಸಂರಕ್ಷಣೆ ಹಾಗೂ ಜನಪರ ಕಾರ್ಯಕ್ರಮಗಳಿಗೆ ಸದಾ ಬೆಂಬಲ ನೀಡುವುದಾಗಿ ತಿಳಿಸಿದರು.

ವಾರ್ಷಿಕೋತ್ಸವದ ಅಂಗವಾಗಿ 20 ಯುವ ಜೋಡಿಗಳ ಉಚಿತ ಸಾಮೂಹಿಕ ವಿವಾಹವನ್ನು ಶ್ರೀಗಳ ನೇತೃತ್ವದಲ್ಲಿ ನೆರವೇರಿಸಲಾಯಿತು. ಇದೇ ಸಂದರ್ಭದಲ್ಲಿ 20 ಭಕ್ತರಿಗೆ ಗುರುರಕ್ಷೆ ನೀಡಿ ಸನ್ಮಾನಿಸಲಾಯಿತು. ಅನಾರೋಗ್ಯದ ಕಾರಣ ಕಾರ್ಯಕ್ರಮಕ್ಕೆ ಗೈರಾಗಿದ್ದ ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆ ಅವರಿಗೆ "ಸಿದ್ದಶ್ರೀ" ಪ್ರಶಸ್ತಿಯನ್ನು ಧರ್ಮಸ್ಥಳಕ್ಕೆ ತೆರಳಿ ನೀಡಲಾಗುವುದು ಎಂದು ಸ್ವಾಮೀಜಿಗಳು ತಿಳಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ 10 ಸಾವಿರ ಪುಸ್ತಕಗಳ ದಾಸೋಹಕ್ಕೆ ಚಾಲನೆ ನೀಡಲಾಯಿತು. ಒಂದು ಪುಸ್ತಕ ನೀಡಿದ ಭಕ್ತರಿಗೆ ಎರಡು ಪುಸ್ತಕಗಳನ್ನು ನೀಡುವ ವಿಶೇಷ ವ್ಯವಸ್ಥೆ ಮಾಡಲಾಗಿತ್ತು. ಜೊತೆಗೆ ಪರಿಸರ ಸಂರಕ್ಷಣೆಗಾಗಿ 5 ಸಾವಿರ ಗಿಡಗಳನ್ನು ಉಚಿತವಾಗಿ ವಿತರಿಸಲಾಯಿತು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ವತಿಯಿಂದ ಅಷ್ಟಲಕ್ಷ್ಮೀ ಪೂಜೆ, 120ಕ್ಕೂ ಹೆಚ್ಚು ಯುವ ಭಕ್ತರಿಗೆ ಸಾಮೂಹಿಕ ದೀಕ್ಷೆ, ಸಿದ್ದೇಶ್ವರ ಸ್ವಾಮಿಗೆ ಮಹಾರುದ್ರಾಭಿಷೇಕ ಹಾಗೂ ಬಿಲ್ವಾರ್ಚನೆ, ಜಗದ್ಗುರು ರೇಣುಕಾಚಾರ್ಯರು ಮತ್ತು ಸಿದ್ದೇಶ್ವರ ಸ್ವಾಮಿಗೆ ಬೆಳ್ಳಿ ಪಲ್ಲಕ್ಕಿ ಉತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಯೋಗವು ಭಾರತೀಯ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದ್ದು, ದೇಹ, ಮನಸ್ಸು ಮತ್ತು ಭಾವನೆಗಳನ್ನು ಆರೋಗ್ಯಕರವಾಗಿರಿಸುವ ಶಕ್ತಿ ಹೊಂದಿದೆ. ಹಣ ಮತ್ತು ಆಸ್ತಿಗಿಂತ ಆರೋಗ್ಯವೇ ದೊಡ್ಡ ಸಂಪತ್ತು ಎಂದು ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು, ಮಧುಗಿರಿ ಶಾಸಕ ಕೆ.ಎನ್. ರಾಜಣ್ಣ, ನಿವೃತ್ತ ಐಎಎಸ್ ಅಧಿಕಾರಿ ದಯಾಶಂಕರ್, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸಮಾಜಸೇವಕರು, ರೈತರು ಹಾಗೂ ಸಾವಿರಾರು ಭಕ್ತರು ಭಾಗವಹಿಸಿದ್ದರು. ಸಿದ್ದರಬೆಟ್ಟ ಶ್ರೀಮಠದ ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಸೇವೆಗಳನ್ನು ಹಲವು ಗಣ್ಯರು ಇದೇ ಸಂದರ್ಭದಲ್ಲಿ

# ವ್ಯಾಪಕ ಮಳೆ ಎಚ್ಚರಿಕೆ

ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮತ್ತೆ ಚುರುಕುಗೊಂಡಿದ್ದು, ಮುಂದಿನ ಏಳು ದಿನಗಳ ಕಾಲ ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. ಹವಾಮಾನ ಇಲಾಖೆ ಜೂನ್ 21ರಿಂದ 27ರವರೆಗೆ ಹಲವು ಜಿಲ್ಲೆಗಳಿಗೆ ಭಾರೀ ಮಳೆಯ ಮುನ್ಸೂಚನೆ ನೀಡಿದ್ದು, ಜನರು ಎಚ್ಚರಿಕೆಯಿಂದ ಇರುವಂತೆ ಸೂಚಿಸಿದೆ.

ಕರಾವಳಿ ಭಾಗದಲ್ಲಿ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಜೂನ್ 21ರಿಂದಲೇ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಅದರಲ್ಲೂ ಜೂನ್ 24ರಿಂದ 27ರವರೆಗೆ ಮಳೆಯ ತೀವ್ರತೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದ್ದು, ನದಿ–ಹಳ್ಳಗಳು ಉಕ್ಕುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕೆ ವಹಿಸಲು ಸೂಚಿಸಲಾಗಿದೆ.

ಮಲೆನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಹಾಗೂ ಕೊಡಗು ಜಿಲ್ಲೆಗಳಲ್ಲಿ ಜೂನ್ 22 ಮತ್ತು 23ರಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ. ನಿರಂತರ ಮಳೆಯಿಂದ ಗುಡ್ಡ ಕುಸಿತ, ರಸ್ತೆ ಸಂಚಾರದಲ್ಲಿ ವ್ಯತ್ಯಯ ಹಾಗೂ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸಾಧ್ಯತೆ ಇದೆ ಎಂದು ಇಲಾಖೆ ಎಚ್ಚರಿಕೆ ನೀಡಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಮೈಸೂರು, ಮಂಡ್ಯ, ತುಮಕೂರು, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಸೇರಿದಂತೆ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಮುಂದಿನ ಏಳು ದಿನಗಳ ಕಾಲ ಗುಡುಗು ಸಹಿತ ಸಾಧಾರಣದಿಂದ ಮಧ್ಯಮ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ. ಜೂನ್ 22, 23 ಹಾಗೂ 25ರಂದು ಕೆಲವು ಭಾಗಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ.

ಇನ್ನೊಂದೆಡೆ, ಜೂನ್ 21ರಂದು ಒಳನಾಡಿನ ಕೆಲ ಜಿಲ್ಲೆಗಳಲ್ಲಿ ಗಂಟೆಗೆ 30ರಿಂದ 40 ಕಿ.ಮೀ ವೇಗದ ಗಾಳಿ ಸಹಿತ ಗುಡುಗು–ಬಿರುಗಾಳಿಯೊಂದಿಗೆ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಉತ್ತರ ಒಳನಾಡಿನಲ್ಲಿ ಜೂನ್ 22ರಂದು ಭಾರೀ ಮಳೆಯ ಜೊತೆಗೆ ಬಿರುಗಾಳಿ ಬೀಸುವ ಸಾಧ್ಯತೆಯೂ ಇದೆ.

ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮುಂದಿನ ಎರಡು ದಿನ ಬಿಸಿ ಹಾಗೂ ಉಮಸಿನ ವಾತಾವರಣ ಮುಂದುವರಿಯಲಿದ್ದು, ನಂತರ ಮಳೆಯ ಚಟುವಟಿಕೆ ಹೆಚ್ಚಾಗುವ ನಿರೀಕ್ಷೆ ಇದೆ.

ರಾಜಧಾನಿ ಬೆಂಗಳೂರಿನಲ್ಲಿ ಮುಂದಿನ 24ರಿಂದ 48 ಗಂಟೆಗಳ ಕಾಲ ಮೋಡ ಕವಿದ ವಾತಾವರಣ ಇರಲಿದ್ದು, ನಗರದ ಕೆಲವೆಡೆ ಸಾಧಾರಣದಿಂದ ಮಧ್ಯಮ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ. ಗರಿಷ್ಠ ತಾಪಮಾನ 29 ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ 21 ಡಿಗ್ರಿ ಸೆಲ್ಸಿಯಸ್ ದಾಖಲಾಗುವ ನಿರೀಕ್ಷೆ ಇದೆ.

ಭಾರೀ ಮಳೆಯ ಸಾಧ್ಯತೆ ಹಿನ್ನೆಲೆಯಲ್ಲಿ ತಗ್ಗು ಪ್ರದೇಶದ ನಿವಾಸಿಗಳು, ಪ್ರವಾಸಿಗರು ಹಾಗೂ ವಾಹನ ಸವಾರರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಹವಾಮಾನ ಇಲಾಖೆ ಸಲಹೆ ನೀಡಿದೆ. ವಿಶೇಷವಾಗಿ ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿ ಗುಡ್ಡ ಕುಸಿತ ಹಾಗೂ ಜಲಾವೃತದ ಸಾಧ್ಯತೆ ಇರುವುದರಿಂದ ಸ್ಥಳೀಯ ಆಡಳಿತದ ಸೂಚನೆಗಳನ್ನು ಪಾಲಿಸುವಂತೆ ಮನವಿ ಮಾಡಲಾಗಿದೆ.

# ತಿಪಟೂರನ್ನು ಜಿಲ್ಲಾ ಕೇಂದ್ರವಾಗಿಸಲು ಅಗತ್ಯ ಕ್ರಮ

ತಿಪಟೂರು

ತಿಪಟೂರು ನಗರ ಹಾಗೂ ತಾಲೂಕಿನ ಸಮಗ್ರ ಅಭಿವೃದ್ಧಿಯನ್ನು ಸವಾಲಾಗಿ ಸ್ವೀಕರಿಸಿದ್ದು, ಮುಂದಿನ ಒಂದು ವರ್ಷದೊಳಗೆ ಅಭಿವೃದ್ಧಿಯ ಹೊಸ ಚಿತ್ರಣ ನಿರ್ಮಿಸಲಾಗುವುದು. ಜಿಲ್ಲಾ ಕೇಂದ್ರಕ್ಕೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಹಂತ ಹಂತವಾಗಿ ಒದಗಿಸಿ ತಿಪಟೂರನ್ನು ಜಿಲ್ಲಾ ಕೇಂದ್ರವಾಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಕೆ. ಷಡಕ್ಷರಿ ಹೇಳಿದರು.

ನಗರದ ದೊಡ್ಡಪೇಟೆ ರಸ್ತೆಯ ಅರಳಿಕಟ್ಟೆ ಬಳಿ ಸುಮಾರು ರೂ.20 ಕೋಟಿ ವೆಚ್ಚದ ವಿದ್ಯುತ್ ಭೂಗತ ಕೇಬಲ್ (ಯುಜಿ ಕೇಬಲ್) ಹಾಗೂ ಎಲ್‌ಟಿಎಬಿ ಕೇಬಲ್ ಅಳವಡಿಕೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ವಿದ್ಯುತ್ ಸೋರಿಕೆ ತಡೆಗಟ್ಟುವ ಹಾಗೂ ಮಳೆ–ಗಾಳಿಯಿಂದ ಉಂಟಾಗುವ ವಿದ್ಯುತ್ ಅವಘಡಗಳನ್ನು ತಪ್ಪಿಸುವ ಉದ್ದೇಶದಿಂದ ರೂ.7 ಕೋಟಿ ವೆಚ್ಚದಲ್ಲಿ 11 ಕೆ.ವಿ. ಭೂಗತ ಕೇಬಲ್ ಹಾಗೂ ರೂ.13 ಕೋಟಿ ವೆಚ್ಚದಲ್ಲಿ ಎಲ್‌ಟಿಎಬಿ ಕೇಬಲ್ ಅಳವಡಿಕೆ



ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದರು.

ತಮ್ಮ ಮೊದಲ ಅವಧಿಯಲ್ಲಿ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಿದ್ದೇನೆ. ಈಗ ನೀರಾವರಿ ಹಾಗೂ ವಿದ್ಯುತ್ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಮುಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ಸಿಗುವ ನಿರೀಕ್ಷೆಯಿದ್ದು, ತಾವು ಸ್ವಾಭಿಮಾನಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಯಾರ ಮೇಲೂ ಒತ್ತಡ ಹೇರುವುದಿಲ್ಲ ಎಂದು ಹೇಳಿದರು.

ಬೆಸ್ಕಾಂ ವಿಭಾಗೀಯ ಕಾರ್ಯನಿರ್ವಾಹಕ ಇಂಜಿನಿಯರ್ ಸೋಮಶೇಖರ್ ಗೌಡ ಮಾತನಾಡಿ, ಶಾಸಕರ ವಿಶೇಷ ಆಸಕ್ತಿಯಿಂದ ರಾಜ್ಯದಲ್ಲೇ ಪ್ರಥಮ ಬಾರಿಗೆ ರೂ.20 ಕೋಟಿ ವೆಚ್ಚದ ಭೂಗತ ವಿದ್ಯುತ್ ಕೇಬಲ್ ಯೋಜನೆಗೆ ಚಾಲನೆ ದೊರೆತಿದೆ ಎಂದರು.

ಈ ಯೋಜನೆಯಿಂದ ಮಳೆ ಹಾಗೂ ಗಾಳಿಯ ಸಂದರ್ಭದಲ್ಲೂ ಸೋರಿಕೆ ರಹಿತ ಮತ್ತು ನಿರಂತರ ವಿದ್ಯುತ್ ಸರಬರಾಜು ಸಾಧ್ಯವಾಗಲಿದ್ದು, ನಗರದ ವಿದ್ಯುತ್ ಸಂಬಂಧಿತ ಹಲವು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆಯಲಿದೆ. ಜೊತೆಗೆ ನಗರದ ಸೌಂದರ್ಯವೂ ಹೆಚ್ಚಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಸ್ಕಾಂ ಜಿಲ್ಲಾ ಅಧೀಕ್ಷಕ ಎನ್. ನರಸಿಂಹಮೂರ್ತಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಡೇನೂರು ಕಾಂತರಾಜು, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನೋಹರ್, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುದರ್ಶನ್, ನಗರಸಭೆ ಪೌರಾಯುಕ್ತ ವಿಶ್ವೇಶ್ವರ ಬದರಗಡೆ, ಮುಖಂಡರಾದ ಸುರೇಶ್, ಲೋಕನಾಥ್ ಸಿಂಗ್, ಲೆಕ್ಕಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಬೆಸ್ಕಾಂ ನೌಕರರ ಸಂಘದ ನರಸಿಂಹಮೂರ್ತಿ, ವಿನಯ್ ಸೇರಿದಂತೆ ಬೆಸ್ಕಾಂ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

25/06/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕನ್ನಡ ಕಡೆಗಣನೆಗೆ ಕರವೇ ಕಿಡಿ: ಹೋರಾಟದ ಎಚ್ಚರಿಕೆ

ತುಮಕೂರು

ರೈಲ್ವೆ ಇಲಾಖೆಯ ಕನ್ನಡ ಕಡೆಗಣನೆ ಮುಂದುವರೆದಿದೆ. ಈ ತಿಂಗಳ 25ರಂದು ಕರ್ನಾಟಕದಲ್ಲಿಯೇ ನಡೆಯುವ ನೈರುತ್ಯ ರೈಲ್ವೆಯ ಗೂಡ್ಸ್ ಟ್ರೇನ್ ಮ್ಯಾನೇಜರ್ ಹುದ್ದೆ ಪದೋನ್ನತಿ ಪರೀಕ್ಷೆಯನ್ನು ಕನ್ನಡಕ್ಕೆ ಅವಕಾಶ ನೀಡದೆ, ಹಿಂದಿ, ಇಂಗ್ಲೀಷ್ ಭಾಷೆಗೆ ಮಾನ್ಯತೆ ನೀಡಿದೆ. ರೈಲ್ವೆ ಇಲಾಖೆ ಈ ಮೂಲಕ ಕನ್ನಡಗರಿಗೆ ದ್ರೋಹ ಮಾಡಲು ಹೊರಟಿದೆ ಎಂದು ಟೀಕಿಸಿದ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡರ ಬಣ) ಜಿಲ್ಲಾಧ್ಯಕ್ಷ ಅರುಣ್ ಕೃಷ್ಣಯ್ಯ, ಇಲಾಖೆ ಧೋರಣೆ ವಿರುದ್ಧ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದರು.

ಸೋಮವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈಲ್ವೆ ಇಲಾಖೆಯ ರಾಜ್ಯ ಸಚಿವರಾಗಿರುವ ತುಮಕೂರು ಸಂಸದ ವಿ. ಸೋಮಣ್ಣ ಅವರಿಗೆ ಈ ವಿಚಾರ ಗಮನಕ್ಕೆ ತಂದರೂ ಅವರು ಇಲಾಖೆ ಕ್ರಮವನ್ನು ಸಮರ್ಥಿಸಿಕೊಂಡಿರುವುದು ದುರಾದೃಷ್ಟಕರ. ಕೇಂದ್ರ ಸರ್ಕಾರದ ಇಲಾಖೆಗಳ ಕನ್ನಡ ನಿರ್ಲಕ್ಷದ ಬಗ್ಗೆ ಸಂಘಟನೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರು ರಾಜ್ಯದ ಎಲ್ಲಾ ಸಂಸದರು, ಸಂಬಂಧಿಸಿದ ಸಚಿವರಿಗೆ ಪತ್ರ ಬರೆದು ಒತ್ತಾಯಿಸಿದರೂ ಕೇಂದ್ರ ಸರ್ಕಾರ ತನ್ನ ಕನ್ನಡ ವಿರೋಧಿ ಚಾಳಿ ಮುಂದುವರೆಸಿದೆ ಎಂದು ಆರೋಪಿಸಿದರು.

ನೈರುತ್ಯ ರೈಲ್ವೆಯು ಮತ್ತೊಮ್ಮೆ ಕನ್ನಡಿಗರ ಬೆನ್ನಿಗೆ ಚೂರಿ ಹಾಕುವ ಕೆಲಸಕ್ಕೆ ಮುಂದಾಗಿದೆ. ಕರ್ನಾಟಕದಲ್ಲೇ ನಡೆಯುತ್ತಿರುವ ಗೂಡ್ಸ್ ಟ್ರೇನ್ ಮ್ಯಾನೇಜರ್ ಹುದ್ದೆಯ ಪದೋನ್ನತಿ ಪರೀಕ್ಷೆಯನ್ನು ಕೇವಲ ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ನಡೆಸಲು ನಿರ್ಧರಿಸಿರುವುದು ಕನ್ನಡಿಗರ ವಿರುದ್ಧ ನಡೆಸುತ್ತಿರುವ ವ್ಯವಸ್ಥಿತ ದಾಳಿಯಾಗಿದೆ. ಇದು ಕನ್ನಡಿಗರ ಉದ್ಯೋಗ ಹಕ್ಕು, ಬಡ್ತಿಯ ಹಕ್ಕು ಮತ್ತು ಭಾಷಾ ಸ್ವಾಭಿಮಾನದ ಮೇಲೆ ನಡೆಸುತ್ತಿರುವ ಬಹಿರಂಗ ಯುದ್ಧವಾಗಿದೆ. 25ರಂದು ನೈರುತ್ಯ ರೈಲ್ವೆಯ ಹುಬ್ಬಳ್ಳಿ, ಬೆಂಗಳೂರು ಹಾಗೂ ಮೈಸೂರು ವಿಭಾಗಗಳಲ್ಲಿ ಗೂಡ್ಸ್ ಟ್ರೇನ್ ಮ್ಯಾನೇಜರ್ ಹುದ್ದೆಗಳಿಗಾಗಿ ಕಂಪ್ಯೂಟರ್ ಆಧಾರಿತ ಪದೋನ್ನತಿ ಪರೀಕ್ಷೆ ನಡೆಸಲು ರೈಲ್ವೆ ಇಲಾಖೆ ಸಿದ್ಧತೆ ನಡೆಸಿದೆ. ರೈಲ್ವೆಯ ಅಧಿಕೃತ ದಾಖಲೆಗಳ ಪ್ರಕಾರ ಹುಬ್ಬಳ್ಳಿಯಲ್ಲಿ 179, ಬೆಂಗಳೂರಿನಲ್ಲಿ 112 ಹಾಗೂ ಮೈಸೂರಿನಲ್ಲಿ 139 ಹುದ್ದೆಗಳಿಗೆ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಆದರೆ ಕನ್ನಡಿಗ ನೌಕರರಿಗೆ ಕನ್ನಡದಲ್ಲಿ ಪರೀಕ್ಷೆ ಬರೆಯುವ ಅವಕಾಶವನ್ನು ಉದ್ದೇಶಪೂರ್ವಕವಾಗಿ ನಿರಾಕರಿಸಲಾಗಿದೆ. ಇದು ಕನ್ನಡಿಗರನ್ನು ಎರಡನೇ ದರ್ಜೆಯ ಪ್ರಜೆಗಳಂತೆ ಕಾಣುವ ಮನೋಭಾವವಾಗಿದೆ ಎಂದು ದೂರಿದರು.

ಹಿಂದಿ ಬಾರದ ಕನ್ನಡಿಗರು ಅನಗತ್ಯ ಭಾಷಾ ಅಡೆತಡೆ ಎದುರಿಸಬೇಕಾಗುತ್ತಿದೆ. ಇದು ಸಮಾನ ಅವಕಾಶದ ತತ್ವಕ್ಕೆ ವಿರುದ್ಧವಾಗಿರುವ ಅನ್ಯಾಯ. ಉದ್ದೇಶಪೂರ್ವಕವಾಗಿ ಕನ್ನಡವನ್ನು ಕಡೆಗಣಿಸುವ ಮತ್ತು ಕನ್ನಡಿಗರ ಅವಕಾಶಗಳನ್ನು ಸೀಮಿತಗೊಳಿಸುವ ಷಡ್ಯಂತ್ರವಾಗಿದೆ. ದೇಶದ ಹಲವು ಭಾಗಗಳಲ್ಲಿ ಅಲ್ಲಿನ ಪ್ರಾದೇಶಿಕ ಭಾಷೆಗಳಿಗೆ ಮಾನ್ಯತೆ ನೀಡುವ ಕೇಂದ್ರ ಸಂಸ್ಥೆಗಳು, ಕರ್ನಾಟಕಕ್ಕೆ ಬಂದಾಗ ಮಾತ್ರ ಕನ್ನಡವನ್ನು ನಿರ್ಲಕ್ಷಿಸುವುದು ಯಾವ ನ್ಯಾಯ? ಕರ್ನಾಟಕದ ನೆಲ ಬೇಕು. ಕರ್ನಾಟಕದ ತೆರಿಗೆ ಬೇಕು. ಕನ್ನಡ ಮಾತ್ರ ಬೇಡ ಎಂಬ ಧೋರಣೆಯನ್ನು ಕನ್ನಡಿಗರು ಸಹಿಸಿಕೊಳ್ಳುವುದಿಲ್ಲ ಎಂದರು.

ರೈಲ್ವೆ ಇಲಾಖೆ ತಕ್ಷಣವೇ ತನ್ನ ನಿರ್ಧಾರವನ್ನು ಹಿಂಪಡೆದು ಪರೀಕ್ಷೆಯನ್ನು ಕನ್ನಡದಲ್ಲೂ ನಡೆಸುವ ಕುರಿತು ಆದೇಶ ಹೊರಡಿಸಬೇಕು. ಇಲ್ಲವಾದಲ್ಲಿ 25ರಂದು ನಡೆಯುವ ಪರೀಕ್ಷೆಯನ್ನು ವಿರೋಧಿಸಿ ರಾಜ್ಯದಾದ್ಯಂತ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಪರೀಕ್ಷೆಯನ್ನು ತಕ್ಷಣವೇ ಮುಂದೂಡಬೇಕು. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಸೇರಿಸಿ ಹೊಸ ವೇಳಾಪಟ್ಟಿ ಪ್ರಕಟಿಸಬೇಕು. ಕರ್ನಾಟಕದಲ್ಲಿ ನಡೆಯುವ ಎಲ್ಲಾ ರೈಲ್ವೆ ನೇಮಕಾತಿ ಮತ್ತು ಪದೋನ್ನತಿ ಪರೀಕ್ಷೆಗಳಲ್ಲಿ ಕನ್ನಡವನ್ನು ಕಡ್ಡಾಯ ಆಯ್ಕೆಯಾಗಿ ಸೇರಿಸಬೇಕು ಎಂದು ಅರುಣ್ ಕೃಷ್ಣಯ್ಯ ಒತ್ತಾಯಿಸಿದರು.

ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಚೆನ್ನಬಸಪ್ಪ, ಪ್ರಧಾನ ಕಾರ್ಯದರ್ಶಿ ಅಂಬರೀಷ್, ತಾಲ್ಲೂಕು ಅಧ್ಯಕ್ಷ ಲಿಂಗರಾಜು, ಸಂಘಟನಾ ಕಾರ್ಯದರ್ಶಿ ಮಿಸ್ಬಾ ಬಾರಿ, ಯುವ ಘಟಕ ಅಧ್ಯಕ್ಷ ಪವನ್, ಕಾರ್ಯದರ್ಶಿ ಗಿರೀಶ್, ಮುಖಂಡರಾದ ದಿಲೀಪ್, ನವೀನ್, ಜುನೈದ್, ದಿಲೀಪ್. ಅಫ್ಜಲ್ ಮೊದಲಾದವರು ಹಾಜರಿದ್ದರು.

## ಹುಳಿಯಾರು ಪೊಲೀಸ್ ಠಾಣೆ: 3 ಪ್ರತ್ಯೇಕ ಕಾಣೆ ಪ್ರಕರಣ ದಾಖಲು

ತುಮಕೂರು

ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಪೊಲೀಸ್ ಠಾಣೆಯಲ್ಲಿ 3 ಪ್ರತ್ಯೇಕ ಕಾಣೆ ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಪ್ರಕರಣ–1: ಹುಳಿಯಾರು ಹೋಬಳಿ ಕೆಂಕೆರೆಗೊಲ್ಲರಹಟ್ಟಿ ಗ್ರಾಮದ ಸುಮಾರು 47 ವರ್ಷದ ಮಲ್ಲಿಕಾರ್ಜುನಯ್ಯ ಎಂಬ ವ್ಯಕ್ತಿಯು 2026ರ ಜನವರಿ 26ರಂದು ಮನೆಯಿಂದ ಕಾಣೆಯಾಗಿದ್ದಾರೆ. ಈತನು 5.3 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ.

ಪ್ರಕರಣ–2: ಹುಳಿಯಾರು ಹೋಬಳಿ ಕೆಂಕೆರೆ ಗ್ರಾಮದ ಸುಮಾರು 44 ವರ್ಷದ ಶ್ರೀನಿವಾಸ ಎಂಬ ವ್ಯಕ್ತಿಯು 2025ರ ಸೆಪ್ಟೆಂಬರ್ 24ರಂದು ಕಾಣೆಯಾಗಿದ್ದಾನೆ. ಈತನು 5.4 ಅಡಿ ಎತ್ತರ, ದುಂಡು ಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕನ್ನಡ ಮತ್ತು ಹಿಂದಿ ಭಾಷೆ ಮಾತನಾಡುತ್ತಾನೆ.

ಪ್ರಕರಣ–3: ಹುಳಿಯಾರು ಹೋಬಳಿ ಬರಕನಾಳ್ ಗ್ರಾಮದ ಸುಮಾರು 62 ವರ್ಷದ ನಿಂಗರಾಜು ಎಂಬ ವ್ಯಕ್ತಿಯು ಸುಮಾರು 19 ವರ್ಷಗಳ ಹಿಂದೆ ಕಾಣೆಯಾಗಿದ್ದಾನೆ ಎಂದು ದೂರು ದಾಖಲಾಗಿದೆ. ಈತನು ಕೋಲು ಮುಖ, ಸಾಧಾರಣ ಮೈಕಟ್ಟು, ಕಪ್ಪು ಮೈಬಣ್ಣ ಹೊಂದಿದ್ದು, 5.5 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಕಪ್ಪು ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ.

ಕಾಣೆಯಾದವರ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ವಾ.ಸಂ. 08133–256150, 0816–2278000, ಮೊ.ಸಂ. 9480802939–00ಯನ್ನು ಸಂಪರ್ಕಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

## ಚಿಕಿತ್ಸೆ ಫಲಕಾರಿಯಾಗದೆ ಅಪರಿಚಿತ ಸಾವು

ತುಮಕೂರು

ಕುಣಿಗಲ್ ಟೌನ್ ಮದ್ದೂರು ರಸ್ತೆಯಲ್ಲಿರುವ ಅಕ್ಸ ಮಸೀದಿ ಪಕ್ಕದ ಸ್ಮಶಾನದ ಮರದ ಕೆಳಗೆ ನಿಶಕ್ತನಾಗಿ ಬಿದ್ದಿದ್ದ ಸುಮಾರು 22 ವರ್ಷದ ಅಪರಿಚಿತ ಹುಡುಗನನ್ನು ಹೆಚ್ಚಿನ ಚಿಕಿತ್ಸೆಗಾಗಿ ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ ಎಂದು ಕುಣಿಗಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.


ಮೃತ ವ್ಯಕ್ತಿಯು 155 ಸೆಂ.ಮೀ. ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಎದೆಯ ಮೇಲೆ "ಅಮ್ಮ" ಎಂದು ಬಲಗಡೆ ಹಚ್ಚೆ ಇರುತ್ತದೆ.

ಮೃತರ ವಾರಸುದಾರರು ಯಾರಾದರೂ ಇದ್ದಲ್ಲಿ ದೂ.ವಾ.ಸಂ. 08132–220229, 0816–2272451ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

## ಬಿಎಂಟಿಸಿ ಬಸ್‌ಗಳ ದೈನಂದಿನ ಬಸ್‌ಪಾಸ್ ದರ ಇಳಿಕೆಗೆ ಒತ್ತಾಯ

ವಿಜಯಪುರ

ಬಿ.ಎಂ.ಟಿ.ಸಿ.ಬಸ್ ಗಳಲ್ಲಿ ಪ್ರತಿನಿತ್ಯ ಪ್ರಯಾಣಿಸುವ ಪ್ರಯಾಣಿಕರು ಪಡೆಯುವ ದೈನಂದಿನ ಪಾಸ್ ನ ಜೊತೆಗೆ ಹೆಚ್ಚುವರಿಯಾಗಿ 40 ರೂಪಾಯಿ ಕೊಟ್ಟು ಬಸ್ ಪಾಸ್ ಪಡೆಯಬೇಕಾಗಿರುವುದು, ಪ್ರಯಾಣಿಕರಿಗೆ ಹೆಚ್ಚು ಹೊರೆಯಾಗುತ್ತಿದ್ದು, ಹೆಚ್ಚುವರಿ ಹಣದ ಹೊರೆಯನ್ನು ಸರಕಾರ ತಪ್ಪಿಸಬೇಕು ಎಂದು ಹೊಸಹುಡ್ಯದ ಉದ್ಯೋಗಿ ನರಸಿಂಹಭಾಷಾ ಒತ್ತಾಯಿಸಿದ್ದಾರೆ.




ಪ್ರತಿನಿತ್ಯ ಹೊಟ್ಟೆಪಾಡಿಗಾಗಿ, ಕೂಲಿಗಾಗಿ ಬೇರೆ ಬೇರೆ ಕಡೆಗಳಿಗೆ ಬಿ.ಎಂ.ಟಿ.ಸಿ ಬಸ್ ಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರು, ಟಿಕೆಟ್ ನ ರೂಪದಲ್ಲಿ, ದೈನಂದಿನ ಪಾಸ್ ತೆಗೆದುಕೊಂಡು ಪ್ರಯಾಣಿಸುತ್ತಾರೆ. ಆದರೆ, ಇತ್ತಿಚೆಗೆ ದೈನಂದಿನ ಬಸ್ ಪಾಸ್ ದರ 80 ರೂಪಾಯಿ ಜೊತೆಗೆ ಹೆಚ್ಚುವರಿಯಾಗಿ 40 ರೂಪಾಯಿ ಟಿಕೆಟ್ ಪಡೆಯಬೇಕು, ಇಲ್ಲವಾದರೆ, ಪಾಸ್ ಕೊಡಲ್ಲ.

ಪ್ರತಿನಿತ್ಯ 500 ರೂಪಾಯಿ ಕೂಲಿಗಾಗಿ ಬಸ್ಸಿನಲ್ಲಿ ಪ್ರಯಾಣ ಮಾಡುವವರು, ಬಸ್ಸಿಗಾಗಿ 120 ರೂಪಾಯಿ ಖರ್ಚು ಮಾಡಬೇಕಾಗಿದ್ದು, ಉಳಿದ 380 ರೂಪಾಯಿಯಲ್ಲಿ ಮನೆಗಳ ನಿರ್ವಹಣೆ, ಮಕ್ಕಳ ಶಿಕ್ಷಣ, ಆರೋಗ್ಯ ರಕ್ಷಣೆ ಹೀಗೆ ಹಲವಾರು ರೀತಿಯಲ್ಲಿ ಅವಶ್ಯಕತೆಗಳನ್ನು ಪೂರೈಕೆ ಮಾಡಬೇಕಾಗಿದ್ದು, ತುಂಬಾ ಕಷ್ಟವಾಗುತ್ತಿದೆ.

ದಿನಗೂಲಿಗಾಗಿ ಹೋಗುವ ಕಾರ್ಮಿಕರಿಗೆ ಬಸ್ ಪಾಸ್‌ನ ದರದಲ್ಲಿ ಕಡ್ಡಾಯವಾಗಿ ರಿಯಾಯಿತಿ ನೀಡಬೇಕು. ಕೆಲವೊಂದು ಮನೆಗಳಲ್ಲಿ ಒಬ್ಬರೇ ದುಡಿಮೆ ಮಾಡುತ್ತಿರುತ್ತಾರೆ. ಕೆಲವೊಮ್ಮೆ ಬಸ್ ಪ್ರಯಾಣದರ ಭರಿಸಿಕೊಂಡು, ಹೋದರೂ, ಕೂಲಿ ಸಿಗದೆ ವಾಪಸ್ಸು ಬರುವಂತಹ ಪರಿಸ್ಥಿತಿಗಳು ಇವೆ. ಇಂತಹ ಸಮಯದಲ್ಲಿ, ಕಾರ್ಮಿಕರು ತುಂಬಾ ಸಂಕಷ್ಟಕ್ಕೆ ಸಿಲುಕುತ್ತಿದ್ದು, ಬಿ.ಎಂ.ಟಿ.ಸಿ. ಸಾರಿಗೆ ಇಲಾಖೆಯವರು, ಬಸ್ ಪ್ರಯಾಣ ದರವನ್ನು ಪರಿಷ್ಕರಣೆ ಮಾಡಿ, ಬಡವರಿಗೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.

ದೇವನಹಳ್ಳಿಯವರೆಗೂ ಒಂದು ಬೆಲೆಯಿದೆ. ದೇವನಹಳ್ಳಿಯಿಂದ ಹೊರಗೆ ಹೆಚ್ಚುವರಿ 40 ರೂಪಾಯಿ ಕೊಡಬೇಕಾಗುತ್ತೆ. ಒಂದು ಪಾಸ್ ಜೂ.2 ರಿಂದ 120 ರೂಪಾಯಿ ಆಗಿದೆ. ಹೊಸ ಪಾಸ್ ಮುದ್ರಣವಾಗದ ಕಾರಣ, ಹೆಚ್ಚುವರಿ 40 ರೂಪಾಯಿ ಟಿಕೆಟ್

## ಟಾಟಾ ಪವರ್ ಅರ್ಜಿ ತಿರಸ್ಕರಿಸುವಂತೆ ಮುಖ್ಯಮಂತ್ರಿಗೆ ಮನವಿ

ಬೇತಮಂಗಲ

ಟಾಟಾ ಪವರ್ ಕಂಪನಿ ರಾಜ್ಯ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಸಲ್ಲಿಸಿರುವ ಅರ್ಜಿಯನ್ನು ತಿರಸ್ಕರಿಸುವಂತೆ ಒತ್ತಾಯಿಸಿ ಅನ್ನದಾತ ರೈತರ ಸಂಘದ ವತಿಯಿಂದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಅನ್ನದಾತ ರೈತರ ಸಂಘದ ಸಂಸ್ಥಾಪಕ ಅಧ್ಯಕ್ಷ ಮಂಜುನಾಥ್ ನೇತೃತ್ವದಲ್ಲಿ ಬೆಸ್ಕಾಂ ಕಿರಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ರವಾನಿಸಲಾಯಿತು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮಂಜುನಾಥ್, ಟಾಟಾ ಪವರ್ ಕಂಪನಿಯ ಪ್ರಸ್ತಾವನೆ ಜಾರಿಯಾದರೆ ರೈತರು ಹಾಗೂ ಸಾಮಾನ್ಯ ವಿದ್ಯುತ್ ಬಳಕೆದಾರರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.



ರಾಜ್ಯದ ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈ ಅರ್ಜಿಯನ್ನು ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ರೈತರು ಈಗಾಗಲೇ ಬೆಳೆ ನಷ್ಟ, ಉತ್ಪಾದನಾ ವೆಚ್ಚ ಏರಿಕೆ ಸೇರಿದಂತೆ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ವಿದ್ಯುತ್ ದರ ಹೆಚ್ಚಳಕ್ಕೆ ಕಾರಣವಾಗುವ ಅಥವಾ ಖಾಸಗಿ ಕಂಪನಿಗಳ ಪರವಾದ ಯಾವುದೇ ನಿರ್ಧಾರ ರೈತ ಸಮುದಾಯಕ್ಕೆ ಮತ್ತಷ್ಟು ಸಂಕಷ್ಟ ಉಂಟುಮಾಡಲಿದೆ ಎಂದು ಅವರು ಹೇಳಿದರು.

ಆದ್ದರಿಂದ ಮುಖ್ಯಮಂತ್ರಿ ಹಾಗೂ ರಾಜ್ಯ ಸರ್ಕಾರವು ರೈತರ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಟಾಟಾ ಪವರ್ ಕಂಪನಿ ಸಲ್ಲಿಸಿರುವ ಅರ್ಜಿಯನ್ನು ರಾಜ್ಯ ವಿದ್ಯುತ್ ನಿಯಂತ್ರಣ ಆಯೋಗ ತಿರಸ್ಕರಿಸುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಈ ಸಂದರ್ಭದಲ್ಲಿ ಅನ್ನದಾತ ರೈತರ ಸಂಘದ ಪದಾಧಿಕಾರಿಗಳು, ಬೆಸ್ಕಾಂ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ದೇವಾಲಯಗಳ ವ್ಯವಸ್ಥಾಪನ ಸಮಿತಿ ಸದಸ್ಯತ್ವಕ್ಕೆ ಅರ್ಜಿಆಹ್ವಾನ

ರಾಮನಗರ

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ತಿದ್ದುಪಡಿ ಅಧಿನಿಯಮ 2011ರ ಕಲಂ 25ರ ಅನ್ವಯ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪ್ರವರ್ಗ–ಸಿ ಅಧಿಸೂಚಿತ ದೇವಾಲಯಗಳಿಗೆ ಅರ್ಚಕರು ಸೇರಿದಂತೆ ಒಟ್ಟು 9 ಸದಸ್ಯರ ವ್ಯವಸ್ಥಾಪನ ಸಮಿತಿ ರಚಿಸಲು ಜಿಲ್ಲೆಯ ಆರು ದೇವಾಲಯಗಳ ವ್ಯವಸ್ಥಾಪನ ಸಮಿತಿ ಸದಸ್ಯತ್ವಕ್ಕೆ ಆಸಕ್ತಿ ಹೊಂದಿರುವ ಭಕ್ತಾದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಚನ್ನಪಟ್ಟಣ ತಾಲೂಕಿನ 4 ದೇವಾಲಯಗಳಾದ ಮಾಲೂರು ಹೋಬಳಿಯ ಶ್ರೀ ಚಾಮುಂಡೇಶ್ವರಿ ದೇವಾಲಯ, ಕಿಲ್ಲೇ ಶ್ರೀ ವರದರಾಜಸ್ವಾಮಿ ದೇವಾಲಯ, ಬೇವೂರಿನ ಶ್ರೀ ವೆಂಕಟರಮಣಸ್ವಾಮಿ ದೇವಾಲಯ, ಸುಳ್ಳೇರಿ ಗ್ರಾಮದ ಪಟ್ಟಲದಮ್ಮ ದೇವಾಲಯ, ಹಾರೋಹಳ್ಳಿ ತಾಲೂಕಿನ ಹಾರೋಹಳ್ಳಿಯಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಾಲಯ ಹಾಗೂ ಮಾಗಡಿ ತಾಲ್ಲೂಕಿನ ಮಾಗಡಿ ಟೌನ್‌ನಲ್ಲಿರುವ ಶ್ರೀ ಕಾಶಿ ವಿಶ್ವೇಶ್ವರಸ್ವಾಮಿ ದೇವಾಲಯಗಳಿಗೆ ವ್ಯವಸ್ಥಾಪನ ಸಮಿತಿ ಸದಸ್ಯತ್ವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಭಕ್ತಾದಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಇಲಾಖೆಯ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಅಸಕ್ತ ಭಕ್ತಾದಿಗಳು ನಿಗದಿತ ನಮೂನೆ 1 (ಬಿ) (ನಿಯಮ) 22ರಂತೆ) ಅರ್ಜಿಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ 2026ರ ಜುಲೈ 05ರ ಸಂಜೆ 5–30ರ ಒಳಗಾಗಿ ಬೆಂಗಳೂರು ದಕ್ಷಿಣ ಜಿಲ್ಲೆ, ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸುವುದು. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ನಿಗದಿತ ನಮೂನೆ ಅರ್ಜಿಗಳು ಸಂಬಂಧಿಸಿದ ತಾಲ್ಲೂಕು ಕಚೇರಿ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆ, ಜಿಲ್ಲಾಧಿಕಾರಿಗಳ ಕಚೇರಿ ಮುಜರಾಯಿ ಶಾಖೆಯಲ್ಲಿ ಲಭ್ಯವಿರುತ್ತದೆ.

ದೇವಾಲಯದ ಸಂಬಂಧದಲ್ಲಿ ಪ್ರಧಾನ ಅರ್ಚಕರು/ಅರ್ಚಕ ಒಬ್ಬರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರ ಪೈಕಿ ಕೊನೆಯ ಪಕ್ಷ ಒಬ್ಬರು, ಮಹಿಳೆಯರ ಪೈಕಿ ಇಬ್ಬರು, ಸಂಸ್ಥೆಯು ಇರುವ ಸ್ಥಳದಲ್ಲಿ ವಾಸ ಇರುವವರ ಪೈಕಿ ಕನಿಷ್ಠ ಒಬ್ಬರು, ಇತರೆ ನಾಲ್ಕು ಜನ ಸೇರಿ ವ್ಯವಸ್ಥಾಪನಾ ಸಮಿತಿಗೆ 9 ಜನ ಮೀರದಂತೆ ಸದಸ್ಯರನ್ನು ಮೀಸಲಾತಿಯಂತೆ ನೇಮಕ ಮಾಡಲಾಗುವುದು.

ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು: ಗುರುತಿನ ಚೀಟಿ (ಆಧಾರ್ ಕಾರ್ಡ್/ ಚುನಾವಣಾ ಗುರುತಿನ ಚೀಟಿ), ಪಾಸ್‌ಪೋರ್ಟ್ ಸೈಜ್ ಅಳತೆಯ ಇತ್ತೀಚಿನ ಭಾವಚಿತ್ರ, ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸೇರಿದವರು), ವಯಸ್ಸನ್ನು ದೃಢೀಕರಿಸುವ ದಾಖಲೆಗಳು (ಜನನ ಪ್ರಮಾಣ ಪತ್ರ, ವ್ಯಾಸಂಗ ದೃಢೀಕರಣ ಪತ್ರ) ಹಾಗೂ ವೈದ್ಯಕೀಯ ದೃಢೀಕರಣ ಪತ್ರ.

ವ್ಯವಸ್ಥಾಪನಾ ಸಮಿತಿ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸುವವರು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ–2011 ರ ಕಲಂ 25(2)(13) ಮತ್ತು (4)ರಂತೆ ಅರ್ಹತೆಗಳನ್ನು ಹೊಂದಿರಬೇಕು ಎಂದು ಜಿಲ್ಲಾ ಧಾರ್ಮಿಕ ಪರಿಷತ್‌ನ ಅಧ್ಯಕ್ಷರೂ ಆಗಿರುವ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಹಿತಕ್ಕಾಗಿ ಸಿಐ ರವಿಕುಮಾರ್ ವಿಶೇಷ ಕಾರ್ಯಾಚರಣೆ



ಬಂಗಾರಪೇಟೆ

ನಗರದಲ್ಲಿ ಸಾರ್ವಜನಿಕರು ಮತ್ತು ಪಾದಚಾರಿಗಳು ಎದುರಿಸುತ್ತಿದ್ದ ಸಂಚಾರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸರ್ಕಲ್ ಇನ್ಸ್‌ಪೆಕ್ಟರ್ ರವಿಕುಮಾರ್ ನೇತೃತ್ವದಲ್ಲಿ ವಿಶೇಷ ಕಾರ್ಯಾಚರಣೆ ನಡೆಸಲಾಯಿತು. ನಗರದ ಪ್ರಮುಖ ರಸ್ತೆಗಳಲ್ಲಿ ಅಕ್ರಮ ವಾಹನ ನಿಲುಗಡೆ, ಸಂಚಾರ ದಟ್ಟಣೆ, ಕಿಡಿಗೇಡಿಗಳ ಪುಂಡಾಟಿಕೆ ಹಾಗೂ ಸ್ವಚ್ಛತೆಯ ಕೊರತೆ ಕುರಿತು ಸಾರ್ವಜನಿಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಯಿತು.

ನಗರದ ಪ್ರಮುಖ ರಸ್ತೆಗಳಲ್ಲಿ ವಾಹನಗಳನ್ನು ಅಡ್ಡಾದಿಡ್ಡಿಯಾಗಿ ನಿಲ್ಲಿಸಲಾಗುತ್ತಿದ್ದ ಪರಿಣಾಮ ಪಾದಚಾರಿಗಳ ಸಂಚಾರಕ್ಕೆ ತೊಂದರೆ ಉಂಟಾಗುತ್ತಿತ್ತು. ಕೆಲವೆಡೆ ವಾಹನ ದಟ್ಟಣೆಯಿಂದ ರಸ್ತೆಗಳಲ್ಲಿ ಸಂಚಾರ ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಶಾಲಾ ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಸೇರಿದಂತೆ ಸಾರ್ವಜನಿಕರು ನಿತ್ಯ ಸಮಸ್ಯೆ ಎದುರಿಸುತ್ತಿದ್ದರು.

ಈ ಹಿನ್ನೆಲೆಯಲ್ಲಿ ಸಿಐ ರವಿಕುಮಾರ್ ಸಿಬ್ಬಂದಿಯೊಂದಿಗೆ ಸ್ಥಳ ಪರಿಶೀಲನೆ ನಡೆಸಿ, ಸಂಚಾರ ನಿಯಮ ಉಲ್ಲಂಘಿಸುತ್ತಿದ್ದ ವಾಹನ ಸವಾರರಿಗೆ ಎಚ್ಚರಿಕೆ ನೀಡಿದರು. ರಸ್ತೆ ಬದಿಗಳಲ್ಲಿ ಅಕ್ರಮವಾಗಿ ನಿಲುಗಡೆ ಮಾಡಿದ್ದ ವಾಹನಗಳನ್ನು ತೆರವುಗೊಳಿಸಿ, ವಾಹನ ಮಾಲೀಕರಿಗೆ ಶಿಸ್ತುಬದ್ಧವಾಗಿ ವಾಹನ ನಿಲುಗಡೆ ಮಾಡುವಂತೆ ಸೂಚಿಸಿದರು.

ಕಾರ್ಯಾಚರಣೆಯ ವೇಳೆ ರಸ್ತೆ ಹಾಗೂ ಅಂಗಡಿಗಳ ಮುಂದೆ ಕಸ ಎಸೆಯುತ್ತಿರುವುದನ್ನು ಗಮನಿಸಿದ ಅಧಿಕಾರಿಗಳು ಸಾರ್ವಜನಿಕರು ಮತ್ತು ವ್ಯಾಪಾರಿಗಳಿಗೆ ಸ್ವಚ್ಛತೆಯ ಮಹತ್ವದ ಕುರಿತು ಅರಿವು ಮೂಡಿಸಿದರು. ಪಟ್ಟಣವನ್ನು ಸ್ವಚ್ಛವಾಗಿ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ ಎಂದು ಸಿಐ ರವಿಕುಮಾರ್ ತಿಳಿಸಿದರು.

ಸಾರ್ವಜನಿಕರ ಸುರಕ್ಷತೆ, ಸಂಚಾರ ಶಿಸ್ತು ಮತ್ತು ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಇಂತಹ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಅವರು ಹೇಳಿದರು. ಕಾರ್ಯಾಚರಣೆಯಿಂದ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದ್ದವರಿಗೆ ಎಚ್ಚರಿಕೆಯ ಸಂದೇಶ ರವಾನೆಯಾಗಿದ್ದು, ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಈ ಸಂದರ್ಭದಲ್ಲಿ ಪ್ರೊಬೆಷನರಿ ಪಿಎಸ್‌ಐ ಶರತ್, ಕ್ರೈಂ ವಿಭಾಗದ ವಿಜಿಕುಮಾರ್, ಗುಪ್ತವಾರ್ತೆ ಮುಖ್ಯ ಪೇದೆ ಚಲಪತಿ ಹಾಗೂ

## ಬೀದಿಬದಿ ತೆಂಗಿನಕಾಯಿ ವ್ಯಾಪಾರಿ ಮಹಿಳೆಗೆ ನ್ಯಾಯ

ಬಂಗಾರಪೇಟೆ

ಬೀದಿಬದಿ ತೆಂಗಿನಕಾಯಿ ವ್ಯಾಪಾರ ನಡೆಸುತ್ತಿದ್ದ ಮಹಿಳೆಯೊಬ್ಬರಿಗೆ ಲಕ್ಷಾಂತರ ರೂಪಾಯಿ ವಂಚನೆ ಎಸಗಿದ್ದ ಆರೋಪಿಯನ್ನು ದೋಷಿ ಎಂದು ಘೋಷಿಸಿರುವ ಬಂಗಾರಪೇಟೆಯ ಪ್ರಥಮ ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಹಾಗೂ ಜೆಎಂಎಫ್‌ಸಿ ನ್ಯಾಯಾಲಯ, ರೂ.10.10 ಲಕ್ಷ ದಂಡ ವಿಧಿಸಿ ಮಹತ್ವದ ತೀರ್ಪು ನೀಡಿದೆ.

ತಾಲೂಕಿನ ಕದಿರೇನಹಳ್ಳಿ ಗ್ರಾಮದ ಶಾಂತಮ್ಮ ಎಂಬ ಮಹಿಳೆ ನಗರದ ಬಜಾರ್ ಮುಖ್ಯರಸ್ತೆ ಬದಿಯಲ್ಲಿ ತೆಂಗಿನಕಾಯಿ ವ್ಯಾಪಾರ ನಡೆಸುತ್ತಿದ್ದರು. ಹಲವು ವರ್ಷಗಳ ಕಾಲ ಕಷ್ಟಪಟ್ಟು ದುಡಿದು ಮನೆ ನಿರ್ಮಾಣದ ಕನಸಿಗಾಗಿ ಹಣ ಸಂಗ್ರಹಿಸಿದ್ದರು. ಇದೇ ವೇಳೆ ಪರಿಚಯದ ವ್ಯಕ್ತಿಯೊಬ್ಬ ಹಣಕಾಸಿನ ನೆರವು ಕೋರಿದ ಹಿನ್ನೆಲೆಯಲ್ಲಿ, 2018ರಿಂದ 2023ರ



ಅವಧಿಯಲ್ಲಿ ಹಂತ ಹಂತವಾಗಿ ಒಟ್ಟು ರೂ.10 ಲಕ್ಷ ಹಣವನ್ನು ನೀಡಿದ್ದರು.

ಈ ಹಣವನ್ನು ಒದಗಿಸಲು ಶಾಂತಮ್ಮ ತಮ್ಮ ಚಿನ್ನಾಭರಣಗಳನ್ನು ಅಡವಿಟ್ಟು, ಜೀವನಪೂರ್ತಿ ಮಾಡಿದ ಉಳಿತಾಯವನ್ನು ಬಳಸಿಕೊಂಡಿದ್ದರು. ಬಳಿಕ ಆರೋಪಿಯು ಹಣ ಹಿಂತಿರುಗಿಸುವುದಾಗಿ ಹೇಳಿ ರೂ.10 ಲಕ್ಷ ಮೊತ್ತದ ಚೆಕ್ ನೀಡಿದ್ದನು. ಆದರೆ ಚೆಕ್ ಅನ್ನು ಬ್ಯಾಂಕ್‌ಗೆ ಸಲ್ಲಿಸಿದಾಗ "ಖಾತೆ ಮುಚ್ಚಲಾಗಿದೆ" ಎಂಬ ಕಾರಣದಿಂದ ಅದು ಅಮಾನ್ಯಗೊಂಡಿತ್ತು.

ನಂತರ ಕಾನೂನು ನೋಟಿಸ್ ಕಳುಹಿಸಿದರೂ ಆರೋಪಿಯು ಸ್ವೀಕರಿಸದೆ ತಪ್ಪಿಸಿಕೊಳ್ಳಲು ಯತ್ನಿಸಿದ್ದರಿಂದ ಶಾಂತಮ್ಮ ನ್ಯಾಯಾಲಯದ ಮೊರೆ ಹೋಗಿದ್ದರು.

ವಿಚಾರಣೆ ವೇಳೆ ಚೆಕ್ ತನ್ನದೇ ಹಾಗೂ ಅದರ ಮೇಲಿನ ಸಹಿ ತನ್ನದೇ ಎಂದು ಆರೋಪಿಯು ನ್ಯಾಯಾಲಯದಲ್ಲಿ ಒಪ್ಪಿಕೊಂಡಿದ್ದಾನೆ. ಅಲ್ಲದೆ, ಚೆಕ್ ನೀಡಲಾಗಿದ್ದ ಬ್ಯಾಂಕ್ ಖಾತೆಯನ್ನು ಹಲವು ವರ್ಷಗಳ ಹಿಂದೆಯೇ ಮುಚ್ಚಿರುವುದಾಗಿ ಹೇಳಿಕೆ ನೀಡಿದ್ದಾನೆ. ಇದರಿಂದ ಆರೋಪಿಯ ವಾದ ದುರ್ಬಲಗೊಂಡಿತು.

ಶಾಂತಮ್ಮ ಅವರ ಆರ್ಥಿಕ ಸಾಮರ್ಥ್ಯದ ಬಗ್ಗೆ ಪ್ರಶ್ನೆ ಎತ್ತಲಾಗಿದ್ದರೂ, ಹಲವು ವರ್ಷಗಳ ಉಳಿತಾಯ ಹಾಗೂ ಚಿನ್ನಾಭರಣಗಳನ್ನು ಅಡವಿಟ್ಟು ಹಣ ಸಂಗ್ರಹಿಸಿದ್ದಾಗಿ ಅವರು ನೀಡಿದ ವಿವರಣೆಯನ್ನು ನ್ಯಾಯಾಲಯ ಸಮರ್ಥವಾಗಿ ಪರಿಗಣಿಸಿತು. ಕೇವಲ ಬಡ ಮಹಿಳೆ ಎಂಬ ಕಾರಣಕ್ಕೆ ಆಕೆಗೆ ಹಣ ನೀಡುವ ಸಾಮರ್ಥ್ಯ ಇಲ್ಲ ಎಂದು ಹೇಳಲಾಗುವುದಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತು.

ಪ್ರಕರಣದ ಎಲ್ಲಾ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿದ ನ್ಯಾಯಾಲಯ, ಕಾನೂನುಬದ್ಧ ಸಾಲವನ್ನು ತೀರಿಸುವ ಉದ್ದೇಶದಿಂದ ನೀಡಿದ ಚೆಕ್ ಅನ್ನು ಉದ್ದೇಶಪೂರ್ವಕವಾಗಿ ಅಮಾನ್ಯವಾಗುವಂತೆ ಮಾಡಲಾಗಿದೆ ಎಂದು ತೀರ್ಮಾನಿಸಿತು.

ಈ ಹಿನ್ನೆಲೆಯಲ್ಲಿ ಆರೋಪಿಗೆ ರೂ.10.10 ಲಕ್ಷ ದಂಡ ವಿಧಿಸಲಾಗಿದ್ದು, ಅದರಲ್ಲಿ ರೂ.10 ಲಕ್ಷವನ್ನು ಶಾಂತಮ್ಮ ಅವರಿಗೆ ಪರಿಹಾರವಾಗಿ ಪಾವತಿಸಲು ಹಾಗೂ ಉಳಿದ ರೂ.10 ಸಾವಿರವನ್ನು ಸರ್ಕಾರಕ್ಕೆ ಜಮಾ ಮಾಡಲು ಆದೇಶಿಸಲಾಗಿದೆ. ದಂಡ ಪಾವತಿಸದಿದ್ದಲ್ಲಿ ಆರು ತಿಂಗಳ ಸರಳ ಕಾರಾಗೃಹ ಶಿಕ್ಷೆ ಅನುಭವಿಸುವಂತೆ ನ್ಯಾಯಾಲಯ ನಿರ್ದೇಶನ ನೀಡಿದೆ.

ನ್ಯಾಯಾಧೀಶ ಚಂದ್ರಶೇಖರ್ ಅಲಬೂರ್ ಅವರು ನೀಡಿರುವ ಈ ತೀರ್ಪು ಆರ್ಥಿಕವಾಗಿ ದುರ್ಬಲ ವರ್ಗದ ಜನರಿಗೂ ನ್ಯಾಯ ದೊರೆಯುತ್ತದೆ ಎಂಬ ಸಂದೇಶವನ್ನು ಸಾರಿದ್ದು, ಸಾರ್ವಜನಿಕ ವಲಯದಲ್ಲಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಪ್ರಕರಣದಲ್ಲಿ ಶಾಂತಮ್ಮ ಪರವಾಗಿ ವಕೀಲ ಜಿ. ರವೀಂದ್ರ ವಾದ ಮಂಡಿಸಿದ್ದರು.

## 'ಲಲಿತಕಲೆಗಳು ನಾಡಿನ ಸಾಂಸ್ಕೃತಿಕ ಸಂಪತ್ತು, ಉಳಿಸಿ, ಬೆಳೆಸಿ'

ತುಮಕೂರು

ನಮ್ಮ ಹೆಮ್ಮೆಯ ಕಲೆ, ಸಾಹಿತ್ಯ, ಸಂಗೀತ ಈ ನಾಡಿನ ಸಾಂಸ್ಕೃತಿಕ ಸಂಪತ್ತು. ಇಂತಹ ಲಲಿತಕಲೆಗಳನ್ನು ಉಳಿಸಿ, ಬೆಳೆಸಿ ಅವು ನಮ್ಮೊಂದಿಗೆ ಸದಾ ಜೀವಂತವಾಗಿ ಇರುವಂತೆ ಪ್ರೋತ್ಸಾಹಿಸಿ ಕಾಪಾಡಬೇಕು ಎಂದು ಶಾಸಕ ಜಿ.ಬಿ.ಜ್ಯೋತಿಗಣೇಶ್ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನೇತೃತ್ವದಲ್ಲಿ ಗಾಯಕ ಕೆಂಕೆರೆ ಮಲ್ಲಿಕಾರ್ಜುನ್ ತಂಡದಿಂದ ನಗರದ 26ನೇ ವಾರ್ಡಿನ ಆಜಾದ್ ಪಾರ್ಕಿನಲ್ಲಿ ಭಾನುವಾರ ಸಂಜೆ ನಡೆದ 'ಕಲಾ ನಡಿಗೆ ನಿಮ್ಮ ಬಳಿಗೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕರು, ಮಕ್ಕಳಲ್ಲಿ ಕ್ರಿಯಾಶೀಲತೆ ಬೆಳೆಸಲು ಅವರಲ್ಲಿ ಯಾವುದಾರೂ ಲಲಿತಕಲೆಯಲ್ಲಿ ಆಸಕ್ತಿ ಬೆಳೆಸಬೇಕು. ಆ ಮೂಲಕ ನಮ್ಮ ಶ್ರೀಮಂತ



ಕಲೆಯನ್ನು ಮುಂದಿನ ತಲೆಮಾರಿಗೆ ಕೊಂಡೊಯ್ಯಬೇಕು ಎಂದರು.

ಇಂದು ಗ್ರಾಮಾಂತರ ಪ್ರದೇಶಗಳಲ್ಲೂ ನಮ್ಮ ಕಲೆಗಳು ನಶಿಸಿಹೋಗುತ್ತಿವೆ. ಇಂದಿನ ಯುವಜನರು ಮೋಬೈಲ್ ಮೋಹಿಗಳಾಗಿದ್ದಾರೆ. ಅವರನ್ನು ಮೊಬೈಲ್‌ನಿಂದ ಹೊರಗೆ ತಂದು ಕಲಾಸಕ್ತಿ ಮೂಡಿಸಬೇಕು. ನಮ್ಮ ಕಲೆಗಳ ಮಹತ್ವದ ಬಗ್ಗೆ ಅವರಲ್ಲಿ ಅರಿವು ಮೂಡಿಸಬೇಕು. ಈಗ ಸಂಗೀತ, ನೃತ್ಯ, ನಾಟಕದಂತಹ ಕಲೆಗಳು ಈಗ ಕೆಲವರಿಗಷ್ಟೇ ಸೀಮಿತವಾಗಿವೆ. ಅವುಗಳನ್ನು ಜೀವಂತಿಕೆಗೊಳಿಸಿ ವಿಸ್ತಾರಗೊಳಿಸಬೇಕು. ನಮ್ಮ ಕಲಾಹಿರಿಮೆ ವಿಜೃಂಭಿಸಲು ಎಲ್ಲರೂ ಪ್ರೋತ್ಸಾಹಿಸಬೇಕು ಎಂದು ಶಾಸಕ ಜ್ಯೋತಿಗಣೇಶ್ ಹೇಳಿದರು.

ಕಲೆ, ಸಾಹಿತ್ಯ ಪ್ರೇಮಿಗಳಾಗಿರುವ 26ನೇ ವಾರ್ಡ್ ನಾಗರೀಕರು ಮಾದರಿಯಾಗಿದ್ದಾರೆ. ಇಲ್ಲಿನ ಜನ ನಾಗರೀಕ ಸೌಲಭ್ಯಗಳನ್ನೂ ಸಮರ್ಪಕವಾಗಿ ಬಳಕೆ ಮಾಡಿಕೊಂಡು, ಉಳಿಸಿಕೊಂಡು ಹೋಗುತ್ತಿದ್ದಾರೆ. ಈ ವಾರ್ಡಿನ ನಗರಪಾಲಿಕೆ ಸದಸ್ಯರಾಗಿದ್ದ ಮಲ್ಲಿಕಾರ್ಜುನ್ ಅವರೂ ಜನರೊಂದಿಗೆ ಸ್ಪಂದಿಸಿ ಕೆಲಸ ಮಾಡುತ್ತಿದ್ದಾರೆ ಎಂದು ಶ್ಲಾಘಿಸಿದರು.

ಜ್ಞಾನ ಬುತ್ತಿ ಸತ್ಸಂಗ ಕೇಂದ್ರದ ಅಧ್ಯಕ್ಷ ಟಿ. ಮುರಳಿಕೃಷ್ಣಪ್ಪ ಮಾತನಾಡಿ, ಕಲಾವಿದರು ಈ ನಾಡಿದ ಆಸ್ತಿ. ಅವರನ್ನು ಗೌರವಿಸಿ, ಅವರ ಕಲೆಯನ್ನು ಪ್ರೋತ್ಸಾಹಿಸಬೇಕು. ಮುಖ್ಯವಾಗಿ ಮಕ್ಕಳಿಗೆ ಇಂತಹ ಕಲೆಗಳನ್ನು ಕಲಿಸಬೇಕು ಎಂದು ಸಲಹೆ ಮಾಡಿದರು.

ನಗರಪಾಲಿಕೆ ನಿಕಟಪೂರ್ವ ಸದಸ್ಯ ಹೆಚ್. ಮಲ್ಲಿಕಾರ್ಜುನಯ್ಯ, ಅಶೋಕನಗರ ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಟಿ.ವಿ. ವೆಂಕಟಸ್ವಾಮಿ, ಪ್ರಮೋದ್ ಸೆಕ್ಯೂರಿಟಿಯ ಪ್ರಮೋದ್ ರೆಡ್ಡಿ, ಮಧುಮೇಹ ತಜ್ಞ ಡಾ. ರಾಜಶೇಖರ್, ಮುಖಂಡರಾದ ಡಾ. ದಿನೇಶ್‌ಕುಮಾರ್, ಗುರುಪ್ರಸಾದ್, ರಾಕ್‌ಲೈನ್ ರವಿಕುಮಾರ್, ವಿಶ್ವಮೂರ್ತಿ, ಸುನಿಲ್, ಶ್ರೀನಾಥ್ ರೆಡ್ಡಿ, ಭಾರತೀಶ್, ಸಂತೋಷ್, ಉಮೇಶ್‌ಬಾಬು, ಮಂಜುನಾಥ್ ಮೊದಲಾದವರು ಭಾಗವಹಿಸಿದ್ದರು. ಕೆಂಕೆರೆ ಮಲ್ಲಿಕಾರ್ಜುನ್ ತಂಡದವರು ಸುಗಮ ಸಂಗೀತ ನಡೆಸಿಕೊಟ್ಟರು. ವಿದ್ಯಾರ್ಥಿಗಳಾದ ತೋಶಿ ಹಾಗೂ ಶಾನ್ವಿಯ ಭರತನಾಟ್ಯ ಪ್ರದರ್ಶನ

# 24ರಂದು ಸ್ವಾತಿ ನಕ್ಷತ್ರ ಪೂಜೆ

ಕೆಜಿಎಫ್

ಜೂ.24 ರಂದು ಬುಧವಾರ, ಸ್ವಾತಿ ನಕ್ಷತ್ರ ಪ್ರಯುಕ್ತ ವಿಶೇಷ ಪೂಜೆಯನ್ನು ಕೆಜಿಎಫ್ ನಗರದ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯದಲ್ಲಿ ಶ್ರದ್ಧಾ ಭಕ್ತಿ ಮತ್ತು ಭಾವಪೂರ್ಣ ಸಮ್ಮಿಲನವಾಗಿ ಆಯೋಜಿಸಲಾಗಿದೆ.

ಸ್ವಾಮಿನಾಥ ಪುರಂ, ಕೋರಮಂಡಲ್ ಓಟ್ ಲೈನ್ ಪ್ರದೇಶದಲ್ಲಿರುವ ಸುಪ್ರಸಿದ್ಧ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯದಲ್ಲಿ, ಜೂ.24 ರಂದು ಬೆಳಿಗ್ಗೆ 9 ಗಂಟೆಯಿಂದ, ಲಕ್ಷ್ಮೀನಾರಾಯಣ ಹೋಮ, ಮಹಾ ಅಭಿಷೇಕ, ವೇದಘೋಷದ ನಡುವೆ ಮಹಾ ಮಂಗಳಾರತಿ ಸೇರಿದಂತೆ ಹಲವು ಧಾರ್ಮಿಕ ವಿಧಿವಿಧಾನಗಳು ಜರುಗಲಿವೆ. ಈ ಕಾರ್ಯಕ್ರಮಗಳು ಆಧ್ಯಾತ್ಮಿಕ ಶಾಂತಿ, ಮನಸ್ಸಿನ ಶುದ್ಧತೆ ಹಾಗೂ ದೇವರ ಕೃಪೆ ಪಡೆಯುವ ಉದ್ದೇಶದಿಂದ ಬೃಹತ್ ಮಟ್ಟದಲ್ಲಿ ನಡೆಯಲಿವೆ. ಪೂಜಾ ವಿಧಿವಿಧಾನಗಳನ್ನು ನಿಪುಣ ಋತ್ವೀಕರು ನಿಷ್ಠೆಯಿಂದ ನೆರವೇರಿಸಲಿದ್ದು, ಈ ಪೂಜೆಯನ್ನು ಕೇವಲ ಆಚರಣೆಯಾಗಿ ನೋಡದೆ, ದೇವರ ಸಾನ್ನಿಧ್ಯವನ್ನು ಪಡೆದುಕೊಳ್ಳುವ ಅವಕಾಶವೆಂದು ದೇಗುಲದ ಆಡಳಿತ ಮಂಡಳಿಯವರು ಸೂಚಿಸಿದ್ದಾರೆ. ಭಕ್ತರಿಗಾಗಿ ಮಧ್ಯಾಹ್ನ ಅನ್ನದಾಸೋಹದ ವ್ಯವಸ್ಥೆ ಮಾಡಲಾಗಿದೆ.

ಈ ಮಹಾ ಧಾರ್ಮಿಕ ಕಾರ್ಯಕ್ರಮದ ಯಶಸ್ಸಿಗಾಗಿ ಧರ್ಮಾಧಿಕಾರಿ ಮಹೇಂದ್ರನ್ ಹಾಗೂ ದೇವಾಲಯದ ಆಡಳಿತ ಮಂಡಳಿಯ ಸದಸ್ಯರು ನಿರಂತರ ಶ್ರಮವಹಿಸಿದ್ದಾರೆ. ಸ್ವಾತಿ ನಕ್ಷತ್ರವು ಭಕ್ತ ಪ್ರಹ್ಲಾದ ಹಾಗೂ ನರಸಿಂಹ ಅವತಾರದೊಂದಿಗೆ ನಿಕಟ ಸಂಬಂಧ ಹೊಂದಿರುವುದರಿಂದ, ಈ ದಿನದ ಪೂಜೆ, ಹೋಮ, ಜಪ, ತಪಸ್ಸುಗಳು ಅತ್ಯಂತ ಫಲಪ್ರದವಾಗುತ್ತವೆ ಎನ್ನುವುದು ಆಸ್ತಿಕರ ನಂಬಿಕೆ.

ಈ ನಕ್ಷತ್ರದಲ್ಲಿ ಮಾಡಿದ ಪೂಜೆಗಳು ಕುಲದೋಷ ಪರಿಹಾರ, ದೃಷ್ಟಿ ಶಾಂತಿ ಹಾಗೂ ಸಂಕಟ ನಿವಾರಣೆಗೆ ಶಕ್ತಿಯುತವಾಗಿವೆ. ಪೂಜಾ ಕಾರ್ಯಕ್ರಮದ ಮೂಲಕ ಭಕ್ತರು ದೇವರ ಸ್ಮರಣೆಯಲ್ಲಿ ತೊಡಗಿ, ತಮ್ಮ ಜೀವನದಲ್ಲಿ ಶಾಂತಿ, ಸಮೃದ್ಧಿ ಹಾಗೂ ಕೃಪೆ ಅನುಭವಿಸಬಹುದು ಎಂಬ ನಂಬಿಕೆ ಇದೆ. ಈ ಕಾರ್ಯಕ್ರಮವು ಧಾರ್ಮಿಕ ಸಂಸ್ಕೃತಿಗೆ ಉತ್ತೇಜನ ನೀಡುವ ಜ್ಞಾಪಕವಾಗಲಿದೆ. ಆದುದರಿಂದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಭಗವಂತನ ಕೃಪೆಗೆ ಪಾತ್ರರಾಗಲು ಆಡಳಿತ ಮಂಡಳಿಯ ಸದಸ್ಯರು ಕೋರಿದ್ದಾರೆ.

# ‘ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ’

ಬೂದಿಕೋಟೆ

ರಸ್ತೆ ಸುರಕ್ಷತೆಗಾಗಿ ಪ್ರತಿಯೊಬ್ಬರೂ ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್‌ಐ ಗುರುರಾಜ್ ಚಿಂತಕಲ್ ಕರೆ ನೀಡಿದರು.

ಯಳೇಸಂದ್ರ ಗ್ರಾಮದಲ್ಲಿ ಬೂದಿಕೋಟೆ ಪೊಲೀಸ್ ಠಾಣೆಯ ವತಿಯಿಂದ ಆಯೋಜಿಸಿದ್ದ ಬೀಟ್ ಸಭೆಯಲ್ಲಿ ಸಾರ್ವಜನಿಕರಿಗೆ ವಿವಿಧ ಸಾಮಾಜಿಕ ಹಾಗೂ ಕಾನೂನು ಸಂಬಂಧಿತ ವಿಷಯಗಳ ಕುರಿತು ಅರಿವು ಮೂಡಿಸಿ ಅವರು ಮಾತನಾಡಿದರು.

ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ವಾಹನ ಚಾಲನೆ ವೇಳೆ ಮೊಬೈಲ್ ಬಳಕೆ ಮಾಡಬಾರದು ಹಾಗೂ ಸಂಚಾರ ನಿಯಮಗಳನ್ನು ಉಲ್ಲಂಘಿಸಬಾರದು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳ ಬಗ್ಗೆ ಎಚ್ಚರಿಕೆ ನೀಡಿದ ಅವರು, ಅಪರಿಚಿತ ಕರೆಗಳು, ಸಂದೇಶಗಳು, ಲಿಂಕ್‌ಗಳು ಹಾಗೂ ಆನ್‌ಲೈನ್ ವಂಚನೆಗಳಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದರು. ಯಾವುದೇ ರೀತಿಯ ಸೈಬರ್ ವಂಚನೆ ನಡೆದರೆ ತಕ್ಷಣ ಪೊಲೀಸ್ ಠಾಣೆ ಅಥವಾ ಸೈಬರ್ ಸಹಾಯವಾಣಿಯನ್ನು ಸಂಪರ್ಕಿಸುವಂತೆ ಮನವಿ ಮಾಡಿದರು.

ಬಾಲ್ಯ ವಿವಾಹವು ಕಾನೂನುಬಾಹಿರ ಕೃತ್ಯವಾಗಿದ್ದು, ಮಕ್ಕಳ ಶಿಕ್ಷಣ ಮತ್ತು ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಬಾಲ್ಯ ವಿವಾಹ ನಡೆಯುತ್ತಿರುವ ಬಗ್ಗೆ ಮಾಹಿತಿ ದೊರೆತರೆ ಕೂಡಲೇ ಪೊಲೀಸರಿಗೆ ತಿಳಿಸಬೇಕು ಎಂದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಮಾದಕ ವಸ್ತುಗಳ ಬಳಕೆಯಿಂದ ಯುವ ಜನಾಂಗದ ಆರೋಗ್ಯ ಹಾಗೂ ಭವಿಷ್ಯ ಹಾಳಾಗುವುದರ ಜೊತೆಗೆ ಸಮಾಜದಲ್ಲಿ ಅಪರಾಧ ಚಟುವಟಿಕೆಗಳು ಹೆಚ್ಚಾಗುವ ಸಾಧ್ಯತೆಗಳಿವೆ. ಆದ್ದರಿಂದ ಯುವಕರು ಮಾದಕ ವಸ್ತುಗಳಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಗ್ರಾಮಸ್ಥರು ತಮ್ಮ ಸಮಸ್ಯೆಗಳು ಹಾಗೂ ಸಲಹೆಗಳನ್ನು ಪೊಲೀಸರೊಂದಿಗೆ ಹಂಚಿಕೊಂಡರು. ಸಾರ್ವಜನಿಕರ ಸಹಕಾರದಿಂದ ಮಾತ್ರ ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಅಪರಾಧ ನಿಯಂತ್ರಣ ಸಾಧ್ಯ ಎಂದು ಪೊಲೀಸರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಬೀಟ್ ಸಿಬ್ಬಂದಿ, ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಶಿಕ್ಷಣ ಇಲಾಖೆ, ಪೋಲೀಸ್ ಇಲಾಖೆ ಮತ್ತು ಮಕ್ಕಳ ಸಹಾಯವಾಣಿ ವತಿಯಿಂದ ಸಾರ್ವಜನಿಕರ ದೂರಿನ ಮೇರೆಗೆ ಕೋಲಾರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾಯಾಧೀಶರಾದ ಶ್ರೀ ಪ್ರಭು.ಎನ್ ಬಡಿಗೇರ್ ರವರ ನೇತೃತ್ವದಲ್ಲಿ ಜಂಟಿ ದಾಳಿಯನ್ನು ಕೈಗೊಂಡಿದ್ದು, ಈ ದಾಳಿಯಲ್ಲಿ ರೇಷ್ಮೆ ನೂಲು ತೆಗೆಯುವ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ, 01 ಬಾಲಕಾರ್ಮಿಕ ಮಗು ರಕ್ಷಣೆ ಮಾಡಿ ಸದರಿ ಮಗುವನ್ನು ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆ, ಮೆಹಬೂಬ್ ನಗರದಲ್ಲಿ 3ನೇ ತರಗತಿಗೆ ದಾಖಲಿಸಲಾಗಿರುತ್ತದೆ ಮತ್ತು ಮಾಲೀಕರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗಿರುತ್ತದೆ.

# ‘ವೈಜ್ಞಾನಿಕ ಗೋಡಂಬಿ ಕೃಷಿಯಿಂದ ಸುಸ್ಥಿರ ಆದಾಯ ಸಾಧ್ಯ’



ಚಿಂತಾಮಣಿ

ಸುಧಾರಿತ ತಳಿಗಳ ಬಳಕೆ, ಸರಿಯಾದ ಅಂತರದಲ್ಲಿ ನಾಟಿ, ನಿಯಮಿತ ನಿರ್ವಹಣೆ ಹಾಗೂ ಗೋಡಂಬಿ ಹಣ್ಣಿನ ಮೌಲ್ಯವರ್ಧನೆ ಮೂಲಕ ರೈತರು ತಮ್ಮ ಆದಾಯವನ್ನು ಗಣನೀಯವಾಗಿ ಹೆಚ್ಚಿಸಿಕೊಳ್ಳಬಹುದು ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕೃಷಿ ವಿಸ್ತರಣಾ ನಿರ್ದೇಶಕ ಡಾ. ವೈ.ಎನ್. ಶಿವಲಿಂಗಯ್ಯ ಹೇಳಿದರು.

ತಾಲ್ಲೂಕಿನ ಕುರುಬೂರಿನ ಕೃಷಿ ವಿಜ್ಞಾನ ಕೇಂದ್ರದ ರೇಷ್ಮೆ ಕೃಷಿ ಮಹಾವಿದ್ಯಾಲಯ ಸಭಾಂಗಣದಲ್ಲಿ ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯ (ಕೊಚ್ಚಿ, ಕೇರಳ), ಕೃಷಿ ವಿಜ್ಞಾನ ಕೇಂದ್ರ, ಕೃಷಿ ಸಂಶೋಧನಾ ಕೇಂದ್ರ ಹಾಗೂ ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ “ರೈತರ ಸುಸ್ಥಿರ ಆದಾಯಕ್ಕಾಗಿ ವೈಜ್ಞಾನಿಕ ಗೋಡಂಬಿ ಕೃಷಿ” ಕುರಿತ ಜಿಲ್ಲಾ ಮಟ್ಟದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗೋಡಂಬಿ ಬೆಳೆಗೆ ಕಸಿ ಮಾಡಿದ ಸಸಿಗಳನ್ನು ಬಳಸುವುದು ಉತ್ತಮ. ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ನಾಟಿ ಮಾಡಲು ಸೂಕ್ತ ಕಾಲವಾಗಿದ್ದು, ಗಿಡಗಳ ಬೆಳವಣಿಗೆಗೆ ಅನುಗುಣವಾಗಿ ಕೊಟ್ಟಿಗೆ ಗೊಬ್ಬರ, ಸಾರಜನಕ, ರಂಜಕ ಹಾಗೂ ಪೊಟ್ಯಾಶ್ ಅನ್ನು ನಿಯಮಿತವಾಗಿ ನೀಡಬೇಕು ಎಂದು ತಿಳಿಸಿದರು. ಮೊದಲ ಎರಡು ರಿಂದ ಮೂರು ವರ್ಷಗಳವರೆಗೆ ಬೇಸಿಗೆಯಲ್ಲಿ ನೀರಾವರಿ ಒದಗಿಸಿದರೆ ಗಿಡಗಳು ಉತ್ತಮ ಬೆಳವಣಿಗೆ ಹೊಂದಿ ಹೆಚ್ಚಿನ ಇಳುವರಿ ನೀಡುತ್ತವೆ ಎಂದು ಹೇಳಿದರು.

ಕೃಷಿ ಸಂಶೋಧನಾ ಕೇಂದ್ರದ ಹಿರಿಯ ಕ್ಷೇತ್ರಾಧೀಕ್ಷಕ ಡಾ. ವಿ. ವೆಂಕಟಾಚಲಪತಿ ಮಾತನಾಡಿ, ಚಿಂತಾಮಣಿ–1, ಉಳ್ಳಾಲ ಹಾಗೂ ವೆಂಗೋರ್ಲಾ ಸೇರಿದಂತೆ ವಿವಿಧ ಸುಧಾರಿತ ಗೋಡಂಬಿ ತಳಿಗಳಿಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ಮತ್ತು ಉತ್ತಮ ಬೆಲೆ ಇದೆ ಎಂದು ತಿಳಿಸಿದರು. ಕೇರಳದಲ್ಲಿ ಗೋಡಂಬಿ ಬೆಳೆಗಾರರಿಗೆ ಬೆಂಬಲಿತ ಬೆಲೆ ನಿಗದಿಪಡಿಸಿರುವುದು ಆಶಾದಾಯಕ ಬೆಳವಣಿಗೆಯಾಗಿದ್ದು, ಮುಂದಿನ ದಿನಗಳಲ್ಲಿ ದೇಶದ ಇತರೆ ಭಾಗಗಳ ರೈತರೂ ಇದರ ಪ್ರಯೋಜನ ಪಡೆಯುವ ಸಾಧ್ಯತೆ ಇದೆ ಎಂದು ಹೇಳಿದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಬಾಲಕೃಷ್ಣ ಮಾತನಾಡಿ, ಗೋಡಂಬಿ ಬೆಳೆಗಾರರಿಗೆ ಇಲಾಖೆಯಿಂದ ವಿವಿಧ ಪ್ರೋತ್ಸಾಹಧನ ಮತ್ತು ಸಹಾಯಧನ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಮೊದಲ ವರ್ಷ ರೂ.18 ಸಾವಿರ ಹಾಗೂ ಎರಡನೇ ವರ್ಷ ರೂ.12 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೇಷ್ಮೆ ಕೃಷಿ ಮಹಾವಿದ್ಯಾಲಯದ ಡೀನ್ ಡಾ. ರಾಮಕೃಷ್ಣ ನಾಯ್ಕ ಮಾತನಾಡಿ, ರಾಜ್ಯದ ಕರಾವಳಿ ಭಾಗಗಳಲ್ಲಿ ಸುಮಾರು 2 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಗೋಡಂಬಿ ಬೆಳೆಯಲಾಗುತ್ತಿದೆ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಈ ಬೆಳೆ ಹೆಚ್ಚಾಗಿ ಬೆಳೆಯಲಾಗುತ್ತಿದ್ದು, ದಕ್ಷಿಣ ಕನ್ನಡವನ್ನು ‘ಗೋಡಂಬಿಯ ರಾಜಧಾನಿ’ ಎಂದು ಕರೆಯಲಾಗುತ್ತದೆ ಎಂದರು. ಗೋಡಂಬಿಯಲ್ಲಿ ವಿಟಮಿನ್–ಸಿ ಅಧಿಕ ಪ್ರಮಾಣದಲ್ಲಿದ್ದು, ಮಿತವಾಗಿ ಸೇವಿಸಿದರೆ ಆರೋಗ್ಯಕ್ಕೆ ಉತ್ತಮ ಎಂದು ತಿಳಿಸಿದರು.

ನಿವೃತ್ತ ಪ್ರಾಧ್ಯಾಪಕ ಹಾಗೂ ಸಂಪನ್ಮೂಲ ವ್ಯಕ್ತಿ ಡಾ. ಕೆ.ಎಂ. ರಾಜಣ್ಣ ಅವರು ಗೋಡಂಬಿ ಬೆಳೆಯ ವೈಜ್ಞಾನಿಕ ಉತ್ಪಾದನಾ ತಂತ್ರಜ್ಞಾನಗಳು ಮತ್ತು ಸುಧಾರಿತ ತಳಿಗಳ ಕುರಿತು ದೃಶ್ಯಾವಳಿಗಳ ಮೂಲಕ ಮಾಹಿತಿ ನೀಡಿದರು.

ಕೀಟಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಕೆ.ಎಂ. ಶ್ರೀನಿವಾಸರೆಡ್ಡಿ ಅವರು ಸಸ್ಯ ಸಂರಕ್ಷಣಾ ಕ್ರಮಗಳ ಬಗ್ಗೆ ವಿವರಿಸಿದರು. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ಆರ್. ಪ್ರವೀಣಕುಮಾರ್ ಅವರು ಕೊಯ್ಲೋತ್ತರ ತಂತ್ರಜ್ಞಾನ ಮತ್ತು ಮೌಲ್ಯವರ್ಧನೆ ಕುರಿತು ಮಾಹಿತಿ ನೀಡಿದರೆ, ಉದ್ಯಮಿ ಚಾತರ್ಯ ಗೋಡಂಬಿ ಸಂಸ್ಕರಣೆ ಕುರಿತ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ಸಂಯೋಜಕಿಯಾಗಿದ್ದ ಸಹಾಯಕ ಪ್ರಾಧ್ಯಾಪಕಿ ಡಾ. ಎ.ಬಿ. ಸುನಿತ ಅವರು ಸ್ವಾಗತಿಸಿ ಪ್ರಾಸ್ತಾವಿಕ ನುಡಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ಎಂ. ಪಾಪಿರೆಡ್ಡಿ, ಸಹ ಪ್ರಾಧ್ಯಾಪಕ ಡಾ. ಎಂ.ವಿ. ಶ್ರೀನಿವಾಸರೆಡ್ಡಿ, ಡಾ. ಕೆ.ಎಂ. ಶ್ರೀನಿವಾಸರೆಡ್ಡಿ, ಡಾ. ಕೆ.ಎಂ. ರಾಜಣ್ಣ ಸೇರಿದಂತೆ ಪ್ರಾಧ್ಯಾಪಕರು, ಉಪನ್ಯಾಸಕರು, ರೈತರು, ತರಬೇತಿದಾರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡೈಮ್ಲರ್ ಟ್ರಕ್ ಇನೋವೇಷನ್ ಸೆಂಟರ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ಯುನೈಟೆಡ್ ವೇ ಬೆಂಗಳೂರು ಸಂಸ್ಥೆಗಳ ಸಹಭಾಗಿತ್ವದಲ್ಲಿ ಪೂರ್ವ ಬೆಂಗಳೂರಿನ 25 ಏಕರೆ ವಿಸ್ತೀರ್ಣದ ಕಿತ್ತಗನೂರು ಕೆರೆಯನ್ನು ಯಶಸ್ವಿಯಾಗಿ ಪುನರುಜ್ಜೀವನಗೊಳಿಸಲಾಗಿದ್ದು, ಇದರ ಪ್ರಯೋಜನವನ್ನು 24,000ಕ್ಕೂ ಹೆಚ್ಚು ನಿವಾಸಿಗಳು ಪಡೆಯಲಿದ್ದಾರೆ. ಯುನೈಟೆಡ್ ವೇ ಬೆಂಗಳೂರಿನ ‘ವೇಕ್ ದ ಲೇಕ್’ ಅಭಿಯಾನದಡಿ ಕೈಗೊಂಡ ಈ ಯೋಜನೆಯ ಮೂಲಕ ಕೆರೆಯ ಪುನಶ್ಚೇತನ ಕಾರ್ಯಗಳನ್ನು ಪೂರ್ಣಗೊಳಿಸಿ, ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆಯ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗೆ ಅಧಿಕೃತವಾಗಿ ಹಸ್ತಾಂತರಿಸಲಾಯಿತು.




# ವಿದ್ಯುತ್ ಖಾಸಗೀಕರಣ ವಿರೋಧಿಸಿ ಬೃಹತ್ ಪ್ರತಿಭಟನೆ




ಚಿಂತಾಮಣಿ

ವಿದ್ಯುತ್ ಕ್ಷೇತ್ರದ ಖಾಸಗೀಕರಣ ಹಾಗೂ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಸರ್ಕಾರದ ಕ್ರಮವನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ, ಬೆಸ್ಕಾಂ ನೌಕರರು ಹಾಗೂ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ನೇತೃತ್ವದಲ್ಲಿ ಚಿಂತಾಮಣಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ನಗರದ ಪ್ರವಾಸಿ ಮಂದಿರದ ಆವರಣದಿಂದ ಆರಂಭವಾದ ಪ್ರತಿಭಟನಾ ಜಾಥಾ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ತಾಲೂಕು ಕಚೇರಿವರೆಗೆ ಸಾಗಿತು. ಬಳಿಕ ಪ್ರತಿಭಟನಾಕಾರರು ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ತಹಸೀಲ್ದಾರ್ ಸುದರ್ಶನ್ ಯಾದವ್ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡ ಸೀಕಲ್ ರಮಣಾರೆಡ್ಡಿ, ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಕ್ರಮದಿಂದ ರೈತರು ಹಾಗೂ ಸಾಮಾನ್ಯ ಗ್ರಾಹಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ ಎಂದು ಆರೋಪಿಸಿದರು. ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿರುವ ಈ ಪ್ರಕ್ರಿಯೆಯನ್ನು ಸರ್ಕಾರ ಕೂಡಲೇ ಕೈಬಿಡಬೇಕು ಎಂದು ಆಗ್ರಹಿಸಿದರು.

ಬೆಸ್ಕಾಂ ನೌಕರರ ಪ್ರತಿನಿಧಿಯಾಗಿ ಮಾತನಾಡಿದ ಶಿವಶಂಕರ್, ವಿದ್ಯುತ್ ಕ್ಷೇತ್ರದ ಖಾಸಗೀಕರಣದಿಂದ ಸಾರ್ವಜನಿಕ ಸೇವೆಯ ಗುಣಮಟ್ಟ ಕುಸಿಯುವ ಅಪಾಯವಿದೆ ಎಂದು ಅಭಿಪ್ರಾಯಪಟ್ಟರು. ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಯೋಜನೆ ರೈತರಿಗೆ ಅನಾನುಕೂಲ ಉಂಟುಮಾಡಲಿದ್ದು, ಸರ್ಕಾರ ಈ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ವಿವಿಧ ಪದಾಧಿಕಾರಿಗಳು, ಬೆಸ್ಕಾಂ ನೌಕರರು, ವಿದ್ಯುತ್ ಗುತ್ತಿಗೆದಾರರ ಸಂಘದ ಸದಸ್ಯರು ಹಾಗೂ ನೂರಾರು ರೈತರು ಭಾಗವಹಿಸಿ ಸರ್ಕಾರದ ನೀತಿಗಳ ವಿರುದ್ಧ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿಭಟನೆ ಶಾಂತಿಯುತವಾಗಿ ನಡೆಯಿತು.

# ‘ಜಿಲ್ಲಾ ರಫ್ತು ಹಬ್’ ಉಪಕ್ರಮದಡಿ ಕೋಲಾರ ಜಿಲ್ಲೆ ಆಯ್ಕೆ

ಕೋಲಾರ

‘ಜಿಲ್ಲಾ ರಫ್ತು ಹಬ್’ ಭಾರತ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಈ ಉಪಕ್ರಮದಡಿ ಕರ್ನಾಟಕ 5 ಜಿಲ್ಲೆಗಳ ಪೈಕಿ ಕೋಲಾರ ಜಿಲ್ಲೆ ಸಹ ರಫ್ತು ಕೇಂದ್ರಿತ ಜಿಲ್ಲೆಯಾಗಿ ಅಭಿವೃದ್ಧಿಗೊಳ್ಳಲು ಆಯ್ಕೆಯಾಗಿರುವ ಜಿಲ್ಲೆಗೆ ಒಂದು ಹೆಮ್ಮೆಯ ವಿಷಯವಾಗಿದೆ.

ಇಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಈ ಕುರಿತು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಕೋಲಾರ ಹಾಗೂ ಇತರ ವಾಣಿಜ್ಯ ಸಂಸ್ಥೆಗಳ ಜೊತೆಗೆ ಹಮ್ಮಿಕೊಳ್ಳಲಾದ ವೀಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಚರ್ಚಿಸಲಾಯಿತು.

ಜಿಲ್ಲೆಗಳನ್ನು ರಫ್ತು ಕೇಂದ್ರಿತ ಬೆಳವಣಿಗೆಯಾಗಿ ಪರಿವರ್ತಿಸುವುದು, ಸ್ಥಳೀಯ ಉತ್ಪನ್ನಗಳನ್ನು ಗುರುತಿಸಿ ಅಂತರರಾಷ್ಟ್ರೀಯ ಮಾರುಕಟ್ಟೆಗೆ ಇವನ್ನು ತಲುಪಿಸುವುದು ಮತ್ತು ಕೃಷಿಕರ ಹಾಗೂ ಎಂ.ಎಸ್.ಎಂ.ಇ ಗಳಿಗೆ ಜಾಗತಿಕ ಮಟ್ಟದಲ್ಲಿ ವ್ಯಾಪಾರ ಮಾಡಲು ಬೆಂಬಲ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಕೋಲಾರ ಹಿಂದಿನಿಂದಲೂ ರೇಷ್ಮೆ, ಹಾಲು ಹಾಗೂ ಚಿನ್ನಕ್ಕೆ ಹೆಸರುವಾಸಿಯಾಗಿದೆ. ಇಲ್ಲಿ ಕೃಷಿ, ವಾಣಿಜ್ಯ ಚಟುವಟಿಕೆಗಳು ಸಹ ಎಡಬಿಡದೆ ನಡೆಯುತ್ತಿದೆ. ಜಿಲ್ಲೆಗಳನ್ನು ರಫ್ತು ಹಬ್‌ಗಳನ್ನಾಗಿ ಮಾರ್ಪಾಡು ಮಾಡುವ ಕೇಂದ್ರ ಸರ್ಕಾರದ ಈ ಡಿ.ಇ.ಎಚ್ ಉಪಕ್ರಮದಡಿ 5 ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಕೋಲಾರ, ಬೆಳಗಾವಿ ಹಾಗೂ ಹಾಸನ ಆಯ್ಕೆಯಾಗಿದೆ. ದೇಶಾದ್ಯಂತ ಒಟ್ಟು 120 ಜಿಲ್ಲೆಗಳು ಆಯ್ಕೆಯಾಗಿವೆ. ಇದು ಒಟ್ಟು 90 ದಿನಗಳ ಕಾರ್ಯಕ್ರಮವಾಗಿದ್ದು, ಇದೇ ಜೂನ್ 30 ರಿಂದ ಕಾರ್ಯಾರಂಭಗೊಳ್ಳಲಿದೆ.

ಈ ಉಪಕ್ರಮ ಅಡಿಯಲ್ಲಿ ಲಾಜಿಸ್ಟಿಕ್ಸ್ ಸಂಪರ್ಕ ಹಾಗೂ ಗೋದಾಮು ಸೇರಿವೆ. ಇಲ್ಲಿ ವ್ಯಾಪಾರ ವಹಿವಾಟಿನಲ್ಲಿ ಮೂಲಸೌಕರ್ಯ ಮತ್ತು ಸಾಮರ್ಥ್ಯ ವೃದ್ಧಿಗೆ ಒತ್ತು ನೀಡುವುದರ ಜೊತೆಗೆ ಮಧ್ಯವರ್ತಿಗಳ ಅವಲಂಬನೆ ಕಡಿಮೆ ಮಾಡುವ ಗುರಿ ಹೊಂದಿದೆ. ಸಾಮಾನ್ಯ ಸೌಲಭ್ಯ ಕೇಂದ್ರಗಳು, ಪರೀಕ್ಷಾ ಪ್ರಯೋಗಾಲಯ ತರಬೇತಿ ಮತ್ತು ಮಾರುಕಟ್ಟೆ ಬೆಂಬಲವನ್ನು ಉತ್ತೇಜಿಸುತ್ತದೆ ಎಂದು ವೀಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಮಾಹಿತಿ ನೀಡಿದರು.

ಕೋಲಾರ ಜಿಲ್ಲೆಯ ರಫ್ತು ಅಂಕಿ–ಅಂಶಗಳ ಪ್ರಕಾರ 2024–25ನೇ ಸಾಲಿನಲ್ಲಿ 5.26 ಬಿಲಿಯನ್ ಅಮೆರಿಕನ್ ಡಾಲರ್ ರಫ್ತು 2025–26ನೇ ಸಾಲಿನಲ್ಲಿ 5.53 ಬಿಲಿಯನ್ ಅಮೆರಿಕನ್ ಡಾಲರ್ ರಫ್ತು ಕೈಗೊಳ್ಳಲಾಗಿದೆ. ಕಳೆದ ಸಾಲಿಗೆ ಹೋಲಿಸಿದರು ಈ ಬಾರಿ ಗಣನೀಯ ಏರಿಕೆ ಕಂಡುಬಂದಿದೆ.

ಜಿಲ್ಲೆಯಲ್ಲಿ ವಿದೇಶಿ ರಫ್ತಿಗೆ ಸಹ ವಿಫುಲ ಅವಕಾಶವಿದ್ದು, ಇದರಿಂದ ಆತ್ಮನಿರ್ಭರ ಭಾರತ ಪರಿಕಲ್ಪನೆ ಸಾಕಾರಗೊಳ್ಳುವುದರಲ್ಲಿ ಸಂಶಯವಿಲ್ಲ.

ವೀಡಿಯೋ ಕಾನ್ಫರೆನ್ಸ್‌ನಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕಿ ಮಂಜುಳಾ ಸೇರಿದಂತೆ ವಿವಿಧ ವಾಣಿಜ್ಯ ಸಂಸ್ಥೆಯ ಉದ್ದಿಮೆದಾರರು ಭಾಗವಹಿಸಿದ್ದರು.

# ಭಾರತ್‌ನೆಟ್ ಯೋಜನೆಯಡಿ ಆಕರ್ಷಕ ಪ್ರೋತ್ಸಾಹ ಧನ

ಕೋಲಾರ

ತಿದ್ದುಪಡಿ ಮಾಡಲಾದ ಪ್ರಧಾನಮಂತ್ರಿ ಭಾರತ್‌ನೆಟ್ ಕಾರ್ಯಕ್ರಮದಡಿ ಗ್ರಾಮೀಣ ಭಾಗದ ಉದ್ಯೋಗಾಕಾಂಕ್ಷಿ ಯುವಕರು ಮತ್ತು ಸ್ಥಳೀಯ ಸಣ್ಣ ಉದ್ಯಮಿಗಳಿಗೆ ಭಾರತ್ ಸಂಚಾರ್ ನಿಗಮ ನಿಯಮಿತ ಸಂಸ್ಥೆಯು ಬೃಹತ್ ಆರ್ಥಿಕ ಹಾಗೂ ಉದ್ಯೋಗಾವಕಾಶವನ್ನು ಘೋಷಿಸಿದೆ. ಗ್ರಾಮೀಣ ಭಾಗದ ಯುವಕರು ‘ಬಿಎಸ್‌ಎನ್‌ಎಲ್ ಪಾಲುದಾರರಾಗುವ’ ಮೂಲಕ ಸ್ವಯಂ ಉದ್ಯೋಗದೊಂದಿಗೆ ಆರ್ಥಿಕ ಸ್ವಾವಲಂಬನೆ ಸಾಧಿಸಲು ಇದು ಸೂಕ್ತ ವೇದಿಕೆಯಾಗಿದೆ.

ಡಿಬಿಎನ್ ಒಪ್ಪಂದದ ಅನ್ವಯ ಮುಂದಿನ ಐದು ವರ್ಷಗಳ ಅವಧಿಯಲ್ಲಿ ದೇಶದಾದ್ಯಂತ ಗ್ರಾಮೀಣ ಭಾಗದ ಮನೆ ಮನೆಗೆ ಹಾಗೂ ಸರ್ಕಾರಿ ಸಂಸ್ಥೆಗಳಿಗೆ ಒಟ್ಟು 1.5 ಕೋಟಿ ಸಕ್ರಿಯ ಹೈ–ಸ್ಪೀಡ್ ಇಂಟರ್ನೆಟ್ ಸಂಪರ್ಕಗಳನ್ನು ಕಲ್ಪಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಹೊಂದಲಾಗಿದೆ. ಇದರಲ್ಲಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿಗಳು ಮತ್ತು ಗ್ರಾಮ ಪಂಚಾಯತ್ ಕಚೇರಿಗಳಿಗೆ ಆದ್ಯತೆಯ ಮೇರೆಗೆ ಇಂಟರ್ನೆಟ್ ಸಂಪರ್ಕ ನೀಡಲಾಗುವುದು. ಈ ಯೋಜನೆಗೆ ಡಿಬಿಎನ್ ವತಿಯಿಂದ ಸಂಪೂರ್ಣ ಧನಸಹಾಯ ದೊರೆಯಲಿದ್ದು, ಸ್ಥಳೀಯ ಉದ್ಯಮಶೀಲತೆಯನ್ನು ಉತ್ತೇಜಿಸಲು ಬಿಎನ್‌ಯು ಮಾದರಿಯನ್ನು ಬಳಸಿಕೊಳ್ಳಲಾಗುತ್ತಿದೆ.

ಬಿಎನ್‌ಯು ಮಾದರಿಯಡಿ ಬಿಎಸ್‌ಎನ್‌ಎಲ್ ಪಾಲುದಾರರಾಗಿ ಕಾರ್ಯನಿರ್ವಹಿಸುವ ಯುವಕರಿಗೆ, ಅವರು ಒದಗಿಸುವ ಪ್ರತಿ ಹೊಸ ಕನೆಕ್ಷನ್‌ಗೆ ಗ್ರಾಮದ ಜನಸಂಖ್ಯೆಯ ಆಧಾರದ ಮೇಲೆ ಆಕರ್ಷಕ ಕ್ಯಾಪೆಕ್ಸ್ ಇನ್ಸೆಂಟಿವ್ (ಬಂಡವಾಳ ಪ್ರೋತ್ಸಾಹ ಧನ) ಸಿಗಲಿದೆ. ಇದರ ಸಂಪೂರ್ಣ ವಿವರ ಇಲ್ಲಿದೆ:1000 ಕ್ಕಿಂತ ಕಡಿಮೆ ಜನಸಂಖ್ಯೆಯ ಗ್ರಾಮಗಳು: ಒಟ್ಟು ರೂ. 6,400/– ಪ್ರೋತ್ಸಾಹ ಧನ ಸಿಗಲಿದ್ದು, ಇದರಲ್ಲಿ ರೂ. 4,000/– ಮುಂಗಡವಾಗಿ ಹಾಗೂ ಇನ್ನುಳಿದ ರೂ. 2,400/– ಹಣವನ್ನು ಮುಂದಿನ 10 ತಿಂಗಳುಗಳ ಕಾಲ ಸಮಾನ ಮಾಸಿಕ ಕಂತುಗಳಲ್ಲಿ (ತಿಂಗಳಿಗೆ ರೂ. 240/– ರಂತೆ) ಪಾವತಿಸಲಾಗುತ್ತದೆ.

1000 ದಿಂದ 2000 ಜನಸಂಖ್ಯೆಯ ಗ್ರಾಮಗಳು: ಒಟ್ಟು ರೂ. 5,800/– ಪ್ರೋತ್ಸಾಹ ಧನ ಲಭ್ಯವಿದ್ದು, ರೂ. 3,800/– ಮುಂಗಡ ಹಾಗೂ ರೂ. 2,000/– ಹಣವನ್ನು 10 ತಿಂಗಳ ಕಂತುಗಳಲ್ಲಿ (ತಿಂಗಳಿಗೆ ರೂ. 200/– ರಂತೆ) ನೀಡಲಾಗುತ್ತದೆ.

2000 ದಿಂದ 3000 ಜನಸಂಖ್ಯೆಯ ಗ್ರಾಮಗಳು: ಒಟ್ಟು ರೂ. 5,400/– ಪ್ರೋತ್ಸಾಹ ಧನ ಸಿಗಲಿದ್ದು, ರೂ. 3,600/– ಮುಂಗಡ ಹಾಗೂ ರೂ. 1,800/– ಹಣವನ್ನು 10 ತಿಂಗಳ ಕಂತುಗಳಲ್ಲಿ (ತಿಂಗಳಿಗೆ ರೂ. 180/– ರಂತೆ) ವಿತರಿಸಲಾಗುತ್ತದೆ.

ಈ ಯೋಜನೆಯಡಿ ಬಿಎಸ್‌ಎನ್‌ಎಲ್ ಅಧಿಕೃತ ಪಾಲುದಾರರಾಗಲು ಇಚ್ಛಿಸುವ ಗ್ರಾಮೀಣ ಭಾಗದ ಆಸಕ್ತ ಅರ್ಹ ಯುವಕರು ಮತ್ತು ಉದ್ಯಮಿಗಳು ಹೆಚ್ಚಿನ ತಾಂತ್ರಿಕ ವಿವರ ಹಾಗೂ ನೊಂದಣಿ ಪ್ರಕ್ರಿಯೆಗಾಗಿ ಬಿಎಸ್‌ಎನ್‌ಎಲ್‌ನ ಡಿಜಿಎಂ ಆದ ಬಾಲಾಜಿ ಅವರ ಮೊಬೈಲ್ ಸಂಖ್ಯೆ: 9486104421 ಅನ್ನು ನೇರವಾಗಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# 6 ಸಂಸದರು ಶಿವಸೇನೆಗೆ

ಮುಂಬೈ

ಉದ್ಧವ್ ಠಾಕ್ರೆ ಬಣದ 9 ಲೋಕಸಭಾ ಸಂಸದರ ಪೈಕಿ 6 ಸಂಸದರು ಮುಂಬೈನಲ್ಲಿ ಇಂದು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಗೆ ಸೇರಿದ್ದಾರೆ.

ಓಂರಾಜೆ ನಿಂಬಾಳ್ಕರ್ (ಧಾರಶಿವ್), ಸಂಜಯ್ ದಿನಾ ಪಾಟೀಲ್ (ಮುಂಬೈ ಈಶಾನ್ಯ), ಸಂಜಯ್ ಜಾಧವ್ (ಪರ್ಭಾನಿ), ಸಂಜಯ್ ದೇಶಮುಖ್ (ಯವತ್ಮಾಲ್–ವಾಶಿಂ), ನಾಗೇಶ್ ಪಾಟೀಲ್ ಅಷ್ಟಿಕರ್ (ಹಿಂಗೋಲಿ), ಭೌಸಾಹೇಬ್ ವಕ್ಚೌರೆ (ಶಿರಡಿ) ಬಂಡಾಯ ಎದ್ದು ಶಿಂಧೆ ಬಣಕ್ಕೆ ಸೇರ್ಪಡೆಯಾಗಿದ್ದಾರೆ.

ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್‌ನ 20 ಸಂಸದರು ಮಾತೃ ಪಕ್ಷ ತೊರೆದು, ನ್ಯಾಷನಲಿಸ್ಟ್ ಸಿಟಿಜನ್ಸ್ ಪಾರ್ಟಿಯೊಂದಿಗೆ ವಿಲೀನಗೊಂಡ ವಾರಗಳ ನಂತರ ಈ ಬೆಳವಣಿಗೆ ನಡೆದಿದೆ.

ಆರು ಹುಲಿಗಳು ಇಲ್ಲಿವೆ. ಅವರೆಲ್ಲರೂ ಈಗ ನಿಜವಾದ ಶಿವಸೇನಾ ಕುಟುಂಬವನ್ನು ಸೇರಿಕೊಂಡಿದ್ದಾರೆ. ನಾನು ಅವರನ್ನು ಶಿವಸೇನಾ ಕುಟುಂಬಕ್ಕೆ ಸ್ವಾಗತಿಸುತ್ತೇನೆ ಎಂದು ಶಿವಸೇನೆಯಲ್ಲಿ ವಿಭಜನೆಗೆ ಕಾರಣವಾದ 2022 ರ ದಂಗೆಯನ್ನು ಮುನ್ನಡೆಸಿದ್ದ

# ಸರ್ಕಾರಕ್ಕೆ 143 ಕೋಟಿ ರೂ. ಲಾಭಾಂಶ ಕೊಟ್ಟ ಕೆಎಸ್‌ಐಐಡಿಸಿ: ಎಂ.ಬಿ.ಪಾಟೀಲ

ಬೆಂಗಳೂರು

2024–25ನೇ ಸಾಲಿನಲ್ಲಿ ಕರ್ನಾಟಕ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮವು (ಕೆಎಸ್‌ಐಐಡಿಸಿ) ಗಳಿಸಿದ ನಿವ್ವಳ ಲಾಭದಲ್ಲಿ 143.12 ಕೋಟಿ ರೂ.ಗಳ ಲಾಭಾಂಶವನ್ನು (ಡಿವಿಡೆಂಡ್) ಬೃಹತ್ ಕೈಗಾರಿಕೆ ಮತ್ತು ಮೂಲಸೌಕರ್ಯ ಸಚಿವ ಎಂ ಬಿ ಪಾಟೀಲ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸೋಮವಾರ ಹಸ್ತಾಂತರಿಸಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ 3 ಕೋಟಿ ರೂ.ಗಳ ಚೆಕ್ ಅನ್ನು ಮುಖ್ಯಮಂತ್ರಿಗಳ ಪರಿಹಾರ



ನಿಧಿಗೆ ಕೊಡಲಾಯಿತು.


ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ನಿಗಮವು 2024–25ರಲ್ಲಿ ಒಟ್ಟು ತೆರಿಗೆ ಕಡಿತದ ಬಳಿಕ 188.41 ಕೋಟಿ ರೂ. ಲಾಭ ಗಳಿಸಿತ್ತು. ಜತೆಗೆ 2025–26ನೇ ಸಾಲಿನಲ್ಲಿ ಸಂಸ್ಥೆಗೆ 19.34 ಕೋಟಿ ರೂ.ಗಳಷ್ಟು ಹಣವು ವಿಶೇಷ ಡಿವಿಡೆಂಡ್ ಲಾಭದಲ್ಲಿ ಬಂದಿತ್ತು. ನಿಯಮಾನುಸಾರವಾಗಿ ಲಾಭಾಂಶದ ಪೈಕಿ ಶೇ.30ರಷ್ಟನ್ನು ಈಗ ಸರಕಾರಕ್ಕೆ ಹಸ್ತಾಂತರಿಸಲಾಗಿದೆ ಎಂದಿದ್ದಾರೆ.

ಕೆಎಸ್‌ಐಐಡಿಸಿ ಸಂಸ್ಥೆಗೆ ಕ್ಯಾಮ್ಕೊ, ಕ್ಯಾಟ್ಕೊ, ಎಂಎಸ್‌ಐಎಲ್, ಎಚ್.ಜಿ.ಎಂ.ಎಲ್ ಮುಂತಾದ ಉದ್ದಿಮೆಗಳಿಂದ ಈ ಆದಾಯ ಬಂದಿದೆ. ಸಾರ್ವಜನಿಕ ಉದ್ದಿಮೆಗಳು ಲಾಭದ ಹಳಿಗೆ ಮರಳುತ್ತಿರುವುದು ಮತ್ತು ಕಳೆದ ಮೂರು ವರ್ಷಗಳಿಂದ ಇದು ಸಾರ್ವಕಾಲಿಕ ದಾಖಲೆಯ ಪ್ರಮಾಣದಲ್ಲಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ಅವರು ನುಡಿದಿದ್ದಾರೆ.

ವಿಧಾನಸೌಧದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಖುಷ್ಬೂ ಗೋಯಲ್, ಕಾರ್ಯನಿರ್ವಾಹಕ ನಿರ್ದೇಶಕ ಚಿದಾನಂದ್ ಉಪಸ್ಥಿತರಿದ್ದರು.

25/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಚಿವ ಸಂಪುಟ ವಿಸ್ತರಣೆ ಮಾಡುವುದು ಹೈಕಮಾಂಡ್: ಸಿಎಂ ಡಿ.ಕೆ.ಶಿವಕುಮಾರ್



ಬೆಂಗಳೂರು

"ಸಚಿವ ಸಂಪುಟ ವಿಸ್ತರಣೆ ಮಾಡುವುದು ಹೈಕಮಾಂಡ್. ಅವರು ಕೊಟ್ಟ ಪಟ್ಟಿಯನ್ನು ಅನುಷ್ಠಾನಗೊಳಿಸುವುದು ನನ್ನ ಕೆಲಸ. ನೀವು ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಮನವಿ ಮಾಡಿದ್ದೀರಿ, ನಿಮ್ಮ ಮನವಿಯನ್ನು ಹೈಕಮಾಂಡ್ ನಾಯಕರಿಗೆ ತಲುಪಿಸುತ್ತೇನೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಉತ್ತರ ಕರ್ನಾಟಕ ಭಾಗದ 14 ಜಿಲ್ಲೆಗಳ ವಿವಿಧ ದರ್ಗಾಗಳ ಮುಖಸ್ಥರು ಇಂದು ಶಿವಕುಮಾರ್ ಅವರನ್ನು ಭೇಟಿ ಮಾಡಿ ಎಂಎಲ್ ಸಿ ಸಲೀಂ ಅಹ್ಮದ್ ಅವರನ್ನು ಸಚಿವ ಸಂಪುಟದಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಸೋಮವಾರ ಮನವಿ ಮಾಡಿದರು. ಈ ವೇಳೆ ಅವರನ್ನು ಉದ್ದೇಶಿಸಿ ಶಿವಕುಮಾರ್ ಅವರು ಮಾತನಾಡಿದರು.

"ಈ ನೆಲದ ಎಲ್ಲಾ ಜಾತಿ, ಧರ್ಮಗಳನ್ನು ಒಟ್ಟಾಗಿ ತೆಗೆದುಕೊಂಡು ಹೋಗುವುದೇ ನಮ್ಮ ಸಿದ್ಧಾಂತ. ಸಂವಿಧಾನವನ್ನು ನಂಬಿದ್ದೇವೆ. ಸಂವಿಧಾನದ ಮೇಲೆ ನಡೆಯುತ್ತಿದ್ದೇವೆ. ಅಲ್ಪಸಂಖ್ಯಾತ ಸಮುದಾಯ ಕಾಂಗ್ರೆಸ್ ಪಕ್ಷವನ್ನು ತಬ್ಬಿದ್ದಾರೆ. ನಾವು ನಿಮ್ಮ ಪರವಾಗಿ ಕೆಲಸ ಮಾಡಿದ್ದೇವೆ. ನಿಮ್ಮೆಲ್ಲರ ಆಶೀರ್ವಾದದಿಂದ ಕಾಂಗ್ರೆಸ್ ಪಕ್ಷ 136 ಸ್ಥಾನಗಳನ್ನು ಗೆದ್ದಿದೆ" ಎಂದರು.

"ಪಕ್ಷ ಅಧಿಕಾರಕ್ಕೆ ಬಂದಾಗ ವರಿಷ್ಠರು ನನ್ನನ್ನೇ ಮುಖ್ಯಮಂತ್ರಿ ಮಾಡುತ್ತಾರೆ ಎಂದುಕೊಂಡಿದ್ದೆ. ಆದರೆ ಸಿದ್ದರಾಮಯ್ಯ ಅವರು ಹಾಗೂ ನೀವು ಅಧಿಕಾರ ಹಂಚಿಕೆ ಮಾಡಿಕೊಳ್ಳಿ ಎಂದು ಸೂಚಿಸಿತು. ಈ ಗುಟ್ಟು ಕೆಲವರಿಗೆ ಬಿಟ್ಟು ಯಾರಿಗೂ ತಿಳಿದಿರಲಿಲ್ಲ. ನಂತರ ಪಕ್ಷದ ಈಗ ಈ ಸ್ಥಾನದಲ್ಲಿ ನನ್ನನ್ನು ಕೂರಿಸಿದೆ. ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಬೆಂಬಲಿಸಲು ನೀವು ಬಂದಿದ್ದೀರಿ. ನಾನು, ಸಲೀಂ, ವಿನಯ್ ಕುಮಾರ್ ಸೊರಕೆ ಎಲ್ಲರೂ ವಿದ್ಯಾರ್ಥಿ ನಾಯಕರಾಗಿದ್ದವರು. ನಾವು ಒಟ್ಟಿಗೆ ರಾಜಕಾರಣ ಮಾಡಿದ್ದೇವೆ. ಅವರಿಗೆ ಎಂಎಲ್ ಸಿ ಮಾಡಬಾರದು ಎಂದು ವಿರೋಧವಿತ್ತು. ನಾನೇ ಕರೆದುಕೊಂಡು ಹೋಗಿ ಸ್ಪರ್ಧಿಸುವಂತೆ ಮಾಡಿದೆ. ಅವರು ಬೆಂಗಳೂರಿನಲ್ಲಿ ನಿಂತಿದ್ದರೆ ಯಾವತ್ತೋ ಲೋಕಸಭೆಗೆ ಆಯ್ಕೆಯಾಗಿರುತ್ತಿದ್ದರು. ಕಾರಣಾಂತರದಿಂದ ಅದು ಸಾಧ್ಯವಾಗಲಿಲ್ಲ. ಅವರಿಗೆ ರಾಷ್ಟ್ರ ಮಟ್ಟದಲ್ಲೂ ಅವಕಾಶವಿತ್ತು" ಎಂದರು.

"ಕೃಷ್ಣ ಅವರ ಕಾಲದಲ್ಲಿ ಸಲೀಂ ಅವರನ್ನು ಚೀಫ್ ವಿಪ್ ಮಾಡಿದ್ದೆವು. ಈಗಲೂ ನಮ್ಮ ಸರ್ಕಾರದಲ್ಲಿ ಮುಖ್ಯ ಸಚೇತಕರಾಗಿದ್ದಾರೆ. ನಮಗೆ ಅವರು ಸಹಕಾರ ನೀಡಿದ್ದಾರೆ. ಇತ್ತೀಚಿಗೆ ಸಲೀಂ ಹಾಗೂ ರಿಜ್ವಾನ್ ಸೇರಿ ಉಪಚುನಾವಣೆಯಲ್ಲಿ ಕೆಲಸ ಮಾಡಿದ್ದಾರೆ" ಎಂದರು.

"ರೆಹಮಾನ್ ಅವರ ಪುತ್ರ ಮನ್ಸೂರ್ ಅಲಿ ಖಾನ್ ಅವರನ್ನು ಲೋಕಸಭೆಗೆ ಸ್ಪರ್ಧಿಸುವಂತೆ ಮಾಡಿದೆ. ಆಗ ಎಲ್ಲರೂ ನಗುತ್ತಿದ್ದರು. ಗೆಲುವು ಸೋಲು ಬೇರೆ ವಿಚಾರ, ನಿನಗೆ ಪಕ್ಷ ಗುರುತಿಸುತ್ತಿದೆ ಎಂದು ಭಾವಿಸಿ ಎಂದು ನಾನು ಹೇಳಿದೆ. ಈಗ ರಾಜ್ಯಸಭೆ ಸ್ಥಾನವನ್ನು ಸಿದ್ದರಾಮಯ್ಯ ಅವರಿಗೆ ಅವಕಾಶ ನೀಡಲಾಗಿತ್ತು. ಸಿದ್ದರಾಮಯ್ಯ ಅವರು ಬೇಡ ಎಂದಾಗ. ನಾನು ಸಿದ್ದರಾಮಯ್ಯ ಅವರು, ಹೈಕಮಾಂಡ್ ನಾಯಕರು ಚರ್ಚಿಸಿ ಮನ್ಸೂರ್ ಅಲಿ ಖಾನ್ ಅವರನ್ನು ಆಯ್ಕೆ ಮಾಡಿದೆವು. ಅವರು ಭವಿಷ್ಯದ ಭರವಸೆಯ ನಾಯಕರು. ಹೀಗೆ ನಾವು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಿದ್ದೇವೆ" ಎಂದು ತಿಳಿಸಿದರು.

"ನನಗೂ ಅಧಿಕಾರ ತಡವಾಗಿ ಸಿಕ್ಕಿತು. ನಾನು ಸುಮ್ಮನೆ ಇದ್ದೆ. ಧರಂ ಸಿಂಗ್ ಅವರ ಸರ್ಕಾರದಲ್ಲಿ ನನ್ನನ್ನು, ಪರಮೇಶ್ವರ್ ಅವರನ್ನು ಮಂತ್ರಿ ಮಾಡಲಿಲ್ಲ. ಆಗಲು ತಾಳ್ಮೆಯಿಂದ ಇದ್ದೆವು. ರಾಮನಗರದಲ್ಲಿ ಮಾಜಿ ಮುಖ್ಯಮಂತ್ರಿ ಮಗನ ವಿರುದ್ಧ ಇಕ್ಬಾಲ್ ಹುಸೇನ್ ನಿಲ್ಲಿಸಿ ಗೆಲ್ಲಿಸುವುದು ಸುಲಭದ ಮಾತಲ್ಲ. ಬೊಮ್ಮಾಯಿ ಅವರ ಮಗನ ವಿರುದ್ಧವೂ ಪಠಾಣ್ ಅವರನ್ನು ನಿಲ್ಲಿಸಿ ಗೆಲ್ಲಿಸುವುದು ಸುಲಭವಾಗಿ ಇರಲಿಲ್ಲ. ನಮ್ಮವರ ಅಭಿಪ್ರಾಯ ಬೇರೆ ಇತ್ತು. ಆದರೆ ನಾನು ಸಮೀಕ್ಷೆ ಮಾಡಿಸಿದೆ" ಎಂದು ಹೇಳಿದರು.

"ಯು. ಟಿ ಖಾದರ್ ಕಳೆದ ಬಾರಿಯೇ ಮಂತ್ರಿ ಆಗಬೇಕಿತ್ತು. ಆದರೆ ಅವರು ತ್ಯಾಗ ಮಾಡಿ, ಸ್ಪೀಕರ್ ಆದರು. ಅವರಿಗೆ ನಾವು ನೀವು ಬಯಸಿದ ಖಾತೆ ನೀಡುವುದಾಗಿ ಮಾತು ಕೊಟ್ಟಿದ್ದವು. ಈಗ ಆರೋಗ್ಯ ಇಲಾಖೆ ನೀಡಿದ್ದೇವೆ" ಎಂದರು.

"ಈ ಮಧ್ಯೆ ಅನೇಕ ಗೊಂದಲವಾಗಿದ್ದು, ಕೆಲವು ಸ್ವಾಮೀಜಿಗಳು ಸೇರಿದಂತೆ ಮತ್ತೊಬ್ಬರನ್ನು ಮಂತ್ರಿ ಮಾಡಿ ಎಂದು ಹೇಳುತ್ತಿದ್ದಾರೆ. ನೀವುಗಳು ಸಲೀಂ ಅಹ್ಮದ್ ಅವರನ್ನು ಮಾಡಿ ಎಂದು ಹೇಳುತ್ತಿದ್ದೀರಿ. ಹೀಗೆ ಒಕ್ಕಲಿಗರು, ಲಿಂಗಾಯತರು, ಕ್ರೈಸ್ತ ಸಮುದಾಯದವರು ಒಬ್ಬೊಬ್ಬರ ಹೆಸರು ಹೇಳುತ್ತಿದ್ದಾರೆ. ಈ ಪರಿಸ್ಥಿತಿಯಲ್ಲಿ ರಾಜಕೀಯವಾಗಿ ತೀರ್ಮಾನ ಮಾಡಲು ಕಷ್ಟವಾಗುತ್ತದೆ. ನಾನು ನಮ್ಮ ಕಷ್ಟವನ್ನು ನಿಮ್ಮ ಜೊತೆ ಹಂಚಿಕೊಳ್ಳುತ್ತಿರುವೆ. ಪಕ್ಷದ ಎಲ್ಲಾ ಅಲ್ಪಸಂಖ್ಯಾತ ಮುಖಂಡರು ಚೆನ್ನಾಗಿ ಕೆಲಸ ಮಾಡಿದ್ದಾರೆ. ನಾನು ವರಿಷ್ಠರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ" ಎಂದರು.

"ವಿಧಾನಸಭೆಯಲ್ಲಿ ನಾವು ಹೆಚ್ಚಿನ ಸಂಖ್ಯೆಯಲ್ಲಿ ಗೆದ್ದಿರುವ ಕಾರಣ, ಪರಿಷತ್ ನಿಂದ ಎಷ್ಟು ಜನರಿಗೆ ಮಂತ್ರಿ ಸ್ಥಾನ ನೀಡಬೇಕು ಎಂಬ ಗೊಂದಲ ಇದೆ. ಮುಂದೆ ಏನು ಮಾಡಬೇಕು ಎಂದು ತೀರ್ಮಾನ ಮಾಡುತ್ತೇವೆ. ಐದಾರು ಬಾರಿ ಹಿರಿಯರಿಗೆ ಅಧಿಕಾರ ನೀಡಲು ಆಗಿಲ್ಲ. ಇಲ್ಲಿ ವೈಷಮ್ಯ ಆಗುವುದು ಬೇಡ. ನಾನು, ಜಾರ್ಜ್, ಅಪ್ಪಾಜಿ ನಾಡಗೌಡ, ನಜೀರ್ ಸೇರಿದಂತೆ ಅನೇಕ ನಾಯಕರು ಬಂಗಾರಪ್ಪ ಅವರ ಕಾಲದಲ್ಲಿ ಮೊದಲ ಬಾರಿ ಶಾಸಕರಾದಾಗಲೇ ಮಂತ್ರಿ ಆದೆವು. ಈಗ ಆ ಪರಿಸ್ಥಿತಿ ಇಲ್ಲ. ಹೊಸಬರಿಗೆ ಅವಕಾಶ ನೀಡಬೇಕು ಎಂದು ನಾನು ಹೇಳಿದ್ದೇನೆ. ದೆಹಲಿಯವರು ಆಲೋಚನೆ ಮಾಡುತ್ತಿದ್ದಾರೆ. ನನ್ನ ಜೊತೆ ಇನ್ನು ಚರ್ಚೆ ಮಾಡಿಲ್ಲ" ಎಂದು ಮಾಹಿತಿ ನೀಡಿದರು.

"ನಾನು ಯಾರನ್ನೂ ನೋಯಿಸಲು, ಗುಂಪುಗಾರಿಕೆ ಮಾಡಲು ಬಯಸುವುದಿಲ್ಲ. ನಮ್ಮದು ಒಂದೇ ಗುಂಪು ಕಾಂಗ್ರೆಸ್ ಗುಂಪು. ನಮ್ಮದು ಒಂದೇ ಧರ್ಮ ಕಾಂಗ್ರೆಸ್. ನಮ್ಮ ರಾಜ್ಯದವರೇ ಆದ ಮಲ್ಲಿಕಾರ್ಜುನ ಖರ್ಗೆ ಸಾಹೇಬರು ತಮ್ಮದೇ ಆದ ಆಲೋಚನೆ ಮಾಡುತ್ತಾರೆ. ಅವರಿಗೂ ಅನೇಕ ಇಕ್ಕಟ್ಟಿನ ಪರಿಸ್ಥಿತಿ ಇದೆ. ಕಳೆದ ಬಾರಿ ಅವರೇ ಒತ್ತಾಯ ಮಾಡಿ ರಹೀಮ್ ಖಾನ್ ಅವರಿಗೆ ಮಂತ್ರಿ ಸ್ಥಾನ ನೀಡಿದ್ದರು" ಎಂದರು.

"ನಿಮ್ಮಂತೆ ಲಂಬಾಣಿ ಸಮುದಾಯ, ಮರಾಠಿ ಸಮುದಾಯದವರು ಬಂದು ಮಂತ್ರಿ ಸ್ಥಾನ ಕೇಳಿದರು. ಹಿಂದುಳಿದವರು ಬಂದು ಸಂತೋಷ್ ಲಾಡ್, ಶ್ರೀನಿವಾಸ್ ಮಾನೆಗೆ ನೀಡಿ ಎನ್ನುತ್ತಿದ್ದಾರೆ. ಕುರುಬ ಸಮುದಾಯದವರು ಶಿವಣ್ಣ ಅವರಿಗೆ ನೀಡಿ ಎಂದು ಹೇಳುತ್ತಿದ್ದಾರೆ. ಲಕ್ಷ್ಮಣ ಸವದಿ ಡಿಸಿಎಂ ಆಗಿದ್ದವರು. ಕಷ್ಟ ಕಾಲದಲ್ಲಿ ಪಕ್ಷಕ್ಕೆ ಬಂದರು. ಅವರಿಗೆ ಮಾತು ಕೊಟ್ಟಿದ್ದೆವು. ಅವರು ಕೇಳುತ್ತಿದ್ದಾರೆ" ಎಂದು ವಿವರಿಸಿದರು.

"ಮಹೇಶ್ ಕೌಜಲಗಿ, ಅಪ್ಪಾಜಿ ನಾಡಗೌಡ, ಶಿವಾನಂದ ಪಾಟೀಲ್, ಯಶವಂತ ಪಾಟೀಲ್, ಜೆ.ಎಸ್ ಪಾಟೀಲ್ ಎಲ್ಲರೂ ಕೇಳುತ್ತಿದ್ದಾರೆ. ನಮ್ಮ ಪರಿಸ್ಥಿತಿಯನ್ನು ನೀವು ಅರ್ಥ ಮಾಡಿಕೊಳ್ಳುತ್ತೀರಿ ಎಂದು ಭಾವಿಸಿರುವೆ. ಪಕ್ಷ ಹಾಗೂ ಸರ್ಕಾರದಲ್ಲಿ ಯಾರನ್ನು ಯಾವ ರೀತಿ ಬಳಸಿಕೊಳ್ಳಬೇಕು, ಕೆಲವೊಮ್ಮೆ ಕೆಲವರು ತ್ಯಾಗ ಮಾಡಬೇಕಾಗುತ್ತದೆ" ಎಂದು ಹೇಳಿದರು.

"ನೀವೆಲ್ಲರೂ ಬಂದು ಭೇಟಿ ಮಾಡಿರುವುದು ಸಂತೋಷ. ಅಲ್ಪಸಂಖ್ಯಾತರ ಅಭಿವೃದ್ಧಿಗೆ ನನ್ನದೇ ಆದ ಹೊಸ ಚಿಂತನೆ ಇದೆ. ಹಿಂದುಳಿದವರು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯಗಳಿಗೆ ಶಕ್ತಿ ತುಂಬಲು ತಿದ್ದುಪಡಿ ತರಲು ತೀರ್ಮಾನಿಸಿದ್ದೇವೆ. ಈ ಎಲ್ಲಾ ವಿಚಾರ ಮುಂದಕ್ಕೆ ತಿಳಿಸುತ್ತೇವೆ" ಎಂದು ಹೇಳಿದರು.

"ನಾನು ಯಾರ ಅವಕಾಶವನ್ನು ತಡೆಯಲು ಬಯಸುವುದಿಲ್ಲ. ಈ ವಿಚಾರದಲ್ಲಿ ನಾನು ಮುಕ್ತ ಮನಸ್ಸಿನಿಂದ ಇದ್ದೇನೆ. ಅವರು ಬೇರೆಯವರಿಗೆ ಹತ್ತಿರವಾಗಿದ್ದಾರೆ ಎಂಬ ಆಲೋಚನೆ ನನ್ನಲ್ಲಿ ಇಲ್ಲ. ಪಕ್ಷಕ್ಕೆ ದುಡಿಯುವವರು, ಪಕ್ಷಕ್ಕೆ ಆಸ್ತಿಯಾಗುವವರು, ರಾಜ್ಯದ ಪ್ರವಾಸ ಮಾಡುವವರು ನನಗೆ ಬೇಕು. ವೈಯಕ್ತಿಕ ಹಿತಾಸಕ್ತಿ ಇಲ್ಲ. ಜನ ಬೆಂಬಲ ಇರುವವರು ಬೇಕು. ನಿಮ್ಮ ಸಮುದಾಯದ ಅಭಿವೃದ್ಧಿಗೆ ಏನಾದರೂ ಸಲಹೆ ಇದ್ದರೆ ಕೊಡಿ. ಸರ್ಕಾರದ ವ್ಯಾಪ್ತಿಯಲ್ಲಿ, ಆರ್ಥಿಕ ಪರಿಸ್ಥಿತಿಯಲ್ಲಿ ಮಾಡುತ್ತೇವೆ.

ನಿಮ್ಮೆಲ್ಲರಿಗೂ ಮೊದಲು ಶಾಂತಿ ಬೇಕು. ಹುಬ್ಬಳ್ಳಿ ಗಲಾಟೆ ಪ್ರಕರಣ ಹಿಂಪಡೆದಿದ್ದಕ್ಕೆ ನಮಗೆ ಟೀಕೆ ಬರುತ್ತಿವೆ. ನಾವು ಅದನ್ನು ಎದುರಿಸುತ್ತೇವೆ" ಎಂದು ತಿಳಿಸಿದರು.

## ಮಳೆಗಾಲದಲ್ಲಿ ಸುರಕ್ಷಿತ ರೈಲು ಸಂಚಾರಕ್ಕೆ ನೈಋತ್ಯ ರೈಲ್ವೆಯ ಸಮಗ್ರ ಸಿದ್ಧತೆ



ಹುಬ್ಬಳ್ಳಿ

ಪ್ರಯಾಣಿಕರ ಸುರಕ್ಷತೆ ಮತ್ತು ಅಡೆತಡೆಯಿಲ್ಲದ ರೈಲು ಸಂಚಾರವನ್ನು ಅತ್ಯುನ್ನತ ಆದ್ಯತೆಯಾಗಿ ಪರಿಗಣಿಸಿರುವ ನೈಋತ್ಯ ರೈಲ್ವೆ, 2026ರ ಮಳೆಗಾಲವನ್ನು ಎದುರಿಸಲು ವ್ಯಾಪಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದೆ.

ಸಾಮಾನ್ಯವಾಗಿ ಜೂನ್ 1ರಿಂದ ಅಕ್ಟೋಬರ್ 31ರವರೆಗೆ ಮಳೆಗಾಲದ ಅವಧಿ ಜಾರಿಯಲ್ಲಿರುತ್ತದೆ. ಆದರೆ ಬೆಂಗಳೂರು ಮತ್ತು ಮೈಸೂರು ವಿಭಾಗಗಳ ಕೆಲವು ಮಾರ್ಗಗಳಲ್ಲಿ ಸ್ಥಳೀಯ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಈ ಅವಧಿಯನ್ನು ನವೆಂಬರ್ ಮಧ್ಯಭಾಗದವರೆಗೆ ವಿಸ್ತರಿಸಲಾಗಿದೆ.

ಮಳೆಗಾಲದ ವೇಳೆ ಸೇತುವೆಗಳ ಸುರಕ್ಷತೆ ಹೆಚ್ಚಿಸಲು ಹಿಂದಿನ ಪ್ರವಾಹದ ಇತಿಹಾಸ ಆಧರಿಸಿ ಗುರುತಿಸಲಾದ 15 ಪ್ರಮುಖ ಸೇತುವೆಗಳಲ್ಲಿ ನೀರಿನ ಮಟ್ಟ ಮೇಲ್ವಿಚಾರಣಾ ಸಾಧನಗಳನ್ನು ಅಳವಡಿಸಲಾಗಿದೆ. ಇವು ನೀರಿನ ಮಟ್ಟದ ಬಗ್ಗೆ ನೈಜ–ಸಮಯದ ಮಾಹಿತಿ ನೀಡುವುದರ ಜೊತೆಗೆ ಅಧಿಕಾರಿಗಳಿಗೆ ಸ್ವಯಂಚಾಲಿತ ಎಚ್ಚರಿಕೆ ಸಂದೇಶಗಳನ್ನು ರವಾನಿಸುತ್ತವೆ.

ನೀರು ನಿಲ್ಲುವ ಅಪಾಯವಿರುವ 48 ರಸ್ತೆ ಕೆಳಸೇತುವೆಗಳಲ್ಲಿ ಹೂಳು ತೆರವು, ಎಚ್ಚರಿಕೆ ಫಲಕಗಳ ಅಳವಡಿಕೆ, ಪ್ರವಾಹ ಮಟ್ಟ ಸೂಚಕಗಳ ಸ್ಥಾಪನೆ ಹಾಗೂ ನಿರಂತರ ಮೇಲ್ವಿಚಾರಣೆಯ ವ್ಯವಸ್ಥೆ ಮಾಡಲಾಗಿದೆ. ಕೆಲವು ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಸೇತುವೆ ನಿರ್ವಹಣಾ ವ್ಯವಸ್ಥೆಯ ಮೂಲಕ ನಿಗಾ ವಹಿಸಲಾಗುತ್ತಿದೆ.

ಹವಾಮಾನ ವೈಪರೀತ್ಯಗಳ ಬಗ್ಗೆ ತ್ವರಿತ ಮಾಹಿತಿ ಪಡೆಯಲು ಭಾರತ ಹವಾಮಾನ ಇಲಾಖೆಯ ಎಚ್ಚರಿಕೆಗಳನ್ನು ಹುಬ್ಬಳ್ಳಿಯ ಕೇಂದ್ರ ನಿಯಂತ್ರಣ ಕಚೇರಿ ಮೂಲಕ ಸಂಬಂಧಿತ ಅಧಿಕಾರಿಗಳಿಗೆ ತಲುಪಿಸಲಾಗುತ್ತಿದೆ. ಜೊತೆಗೆ 52 ಮಳೆ ಮಾಪನ ಕೇಂದ್ರಗಳಿಂದ ದೊರೆಯುವ ಮಾಹಿತಿಯನ್ನು ನಿರಂತರವಾಗಿ ಪರಿಶೀಲಿಸಲಾಗುತ್ತಿದೆ.

ತುರ್ತು ಸಂದರ್ಭಗಳಲ್ಲಿ ತಕ್ಷಣ ಸ್ಪಂದಿಸಲು ಕಲ್ಲು, ಮರಳು ಚೀಲಗಳು ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ಹುಬ್ಬಳ್ಳಿ ಮತ್ತು ಮೈಸೂರು ವಿಭಾಗಗಳ ಪ್ರಮುಖ ಸ್ಥಳಗಳಲ್ಲಿ ಸಂಗ್ರಹಿಸಲಾಗಿದೆ. ಅಗೆಯುವ ಯಂತ್ರಗಳು, ಕಂಪ್ರೆಸರ್‌ಗಳು ಸೇರಿದಂತೆ ಅಗತ್ಯ ಉಪಕರಣಗಳನ್ನೂ ಸಿದ್ಧವಾಗಿರಿಸಲಾಗಿದೆ.

ಇಳಿಜಾರು ಪ್ರದೇಶಗಳಲ್ಲಿ ಮಣ್ಣಿನ ನೈಲಿಂಗ್, ರಕ್ಷಣಾತ್ಮಕ ಗೋಡೆಗಳ ನಿರ್ಮಾಣ, ಬಂಡೆಗಳ ತಡೆಗೋಡೆ ಅಳವಡಿಕೆ, ಮರದ ಕೊಂಬೆಗಳ ತೆರವು ಹಾಗೂ ಚರಂಡಿಗಳ ಸ್ವಚ್ಛತಾ ಕಾರ್ಯಗಳನ್ನು ಪೂರ್ಣಗೊಳಿಸಲಾಗಿದೆ. ದುರ್ಬಲ ಘಾಟ್ ಪ್ರದೇಶಗಳಲ್ಲಿ ಸುರಂಗ ಪ್ರವೇಶ ಭಾಗಗಳನ್ನು ವಿಸ್ತರಿಸಿ ಬಂಡೆಗಳು ಹಳಿಗೆ ಉರುಳುವ ಅಪಾಯವನ್ನು ತಗ್ಗಿಸಲಾಗಿದೆ. ಮಳೆಗಾಲದಲ್ಲಿ ಹಳಿ ಮೇಲ್ವಿಚಾರಣೆಯನ್ನು ತೀವ್ರಗೊಳಿಸಲಾಗಿದ್ದು, ಅಪಾಯದ ಪ್ರದೇಶಗಳಲ್ಲಿ ವಿಶೇಷ ಕಾವಲುಗಾರರನ್ನು ನಿಯೋಜಿಸಲಾಗಿದೆ. ನೀರಿನ ಮೂಲಗಳ ಅಚಾನಕ್ ಒಡೆತ ಅಥವಾ ಹೆಚ್ಚುವರಿ ನೀರಿನ ಬಿಡುಗಡೆಗಳಿಂದ ಉಂಟಾಗುವ ಅಪಾಯಗಳನ್ನು ತಡೆಯಲು ಸ್ಥಳೀಯ ಆಡಳಿತದೊಂದಿಗೆ ಜಂಟಿ ಪರಿಶೀಲನೆಗಳನ್ನೂ ನಡೆಸಲಾಗಿದೆ.

ತುರ್ತು ವೈದ್ಯಕೀಯ ನೆರವು ಒದಗಿಸಲು ಎಲ್ಲಾ ವಿಭಾಗಗಳಲ್ಲಿ ಸಂಪೂರ್ಣ ಸಜ್ಜಿತ ವೈದ್ಯಕೀಯ ಪರಿಹಾರ ರೈಲುಗಳು ಮತ್ತು ಅಪಘಾತ ಪರಿಹಾರ ರೈಲುಗಳನ್ನು ಕಾರ್ಯತಂತ್ರದ ರೀತಿಯಲ್ಲಿ ನಿಯೋಜಿಸಲಾಗಿದೆ.

ಈ ಎಲ್ಲ ಪೂರ್ವಸಿದ್ಧತಾ ಕ್ರಮಗಳು ಮಳೆಗಾಲದುದ್ದಕ್ಕೂ ಪ್ರಯಾಣಿಕರ ಸುರಕ್ಷತೆ, ರೈಲು ಮೂಲಸೌಕರ್ಯದ ರಕ್ಷಣೆ ಹಾಗೂ ನಿರಂತರ ಮತ್ತು ಸುಗಮ ರೈಲು ಸಂಚಾರವನ್ನು ಖಚಿತಪಡಿಸುವ ನೈಋತ್ಯ ರೈಲ್ವೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ.

## ಎಸ್ಐಆರ್: ಕೆ.ಎಚ್.ಮುನಿಯಪ್ಪ ಬೆಂಬಲಿಗರಿಂದ ಸಭೆ ಬಹಿಷ್ಕಾರ

ಕೋಲಾರ

ಮತದಾರರ ಪಟ್ಟಿ ಸಮಗ್ರ ಪರಿಶೀಲನೆ (ಎಸ್ಐಆರ್) ಕುರಿತು ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಜಾಗೃತಿ ಸಭೆಯಲ್ಲಿ ಪಕ್ಷದ ಒಳಜಗಳ ಬಹಿರಂಗಗೊಂಡ ಘಟನೆ ಸೋಮವಾರ ನಡೆಯಿತು. ಸಚಿವ ಕೆ.ಎಚ್. ಮುನಿಯಪ್ಪ ಬೆಂಬಲಿಗರನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಲಾಗಿದೆ ಎಂದು ಆರೋಪಿಸಿ ಅವರ ಬೆಂಬಲಿಗರು ಪ್ರತಿಭಟನೆ ನಡೆಸಿ ಸಭೆಯನ್ನು ಬಹಿಷ್ಕರಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪದ ಖಾಸಗಿ ರೆಸಾರ್ಟ್‌ನಲ್ಲಿ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್ ನೇತೃತ್ವದಲ್ಲಿ ಎಸ್ಐಆರ್ ಕುರಿತು ಜಾಗೃತಿ ಸಭೆ ಆಯೋಜಿಸಲಾಗಿತ್ತು. ಸಭೆಗೆ ಕಾಂಗ್ರೆಸ್ ಪಕ್ಷದ ಬೂತ್ ಮಟ್ಟದ ಕಾರ್ಯಕರ್ತರು ಹಾಗೂ ಬಿಎಲ್ಎ ಪ್ರತಿನಿಧಿಗಳನ್ನು ಆಹ್ವಾನಿಸಲಾಗಿತ್ತು.



ಆದರೆ, ಸಚಿವ ಕೆ.ಎಚ್. ಮುನಿಯಪ್ಪ ಅವರ ಬೆಂಬಲಿಗರನ್ನು ಸಭೆಗೆ ಆಹ್ವಾನಿಸದೇ ನಿರ್ಲಕ್ಷಿಸಲಾಗಿದೆ ಎಂದು ಆರೋಪಿಸಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು. ಕಳೆದ ಮೂರು ದಶಕಗಳಿಂದ ಪಕ್ಷಕ್ಕಾಗಿ ದುಡಿಯುತ್ತಿರುವ ಕಾರ್ಯಕರ್ತರನ್ನು ಕಡೆಗಣಿಸಿ ಹೊಸಬರಿಗೆ ಅವಕಾಶ ನೀಡಲಾಗುತ್ತಿದೆ ಎಂದು ಅವರು ದೂರಿದರು.

ವೇದಿಕೆಗೆ ಶಾಸಕ ಕೊತ್ತೂರು ಮಂಜುನಾಥ್, ವಿಧಾನ ಪರಿಷತ್ ಸದಸ್ಯರಾದ ನಜೀರ್ ಅಹ್ಮದ್ ಹಾಗೂ ಅನಿಲ್ ಕುಮಾರ್ ಸೇರಿದಂತೆ ನಾಯಕರು ಆಗಮಿಸುತ್ತಿದ್ದಂತೆಯೇ ಮುನಿಯಪ್ಪ ಬೆಂಬಲಿಗರು ವೇದಿಕೆ ಸಮೀಪ ಪ್ರತಿಭಟನೆ ನಡೆಸಿದರು.

ಜಿಲ್ಲಾ ಎಸ್ಸಿ ಘಟಕದ ಅಧ್ಯಕ್ಷ ಕೆ. ಜಯದೇವ್, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಪ್ರಸಾದ್ ಬಾಬು, ನಗರಸಭೆ ಮಾಜಿ ಸದಸ್ಯರಾದ ಲಾಲ್ ಬಹದ್ದೂರ್ ಶಾಸ್ತ್ರಿ ಹಾಗೂ ಸಿ. ಸೋಮಶೇಖರ್, ಮುಖಂಡರಾದ ಎಂ. ಶ್ರೀಕೃಷ್ಣ, ಗಂಗಮ್ಮನಪಾಳ್ಯ ಮಂಜುನಾಥ್, ಪರ್ವೀಸ್ ಅಹ್ಮದ್ ಸೇರಿದಂತೆ ಹಲವರು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

“30 ವರ್ಷಗಳಿಂದ ಪಕ್ಷಕ್ಕಾಗಿ ದುಡಿದವರನ್ನು ಕಡೆಗಣಿಸಿ, ಸಂಘಟನೆಯ ಬಗ್ಗೆ ಅರಿವೇ ಇಲ್ಲದವರನ್ನು ನೇಮಕ ಮಾಡಲಾಗುತ್ತಿದೆ. ಸಭೆಗೆ ಆಹ್ವಾನಿಸುವ ಸೌಜನ್ಯವನ್ನೂ ತೋರಿಲ್ಲ. ಕೆ.ಎಚ್. ಮುನಿಯಪ್ಪ ಬೆಂಬಲಿಗರು ಕಾಂಗ್ರೆಸ್‌ಗೆ ಅಗತ್ಯವಿಲ್ಲವೇ?” ಎಂದು ಪ್ರಶ್ನಿಸಿದರು.

ಪರಿಸ್ಥಿತಿಯನ್ನು ಸಮಾಧಾನಪಡಿಸಲು ಮುಂದಾದ ವಿಧಾನ ಪರಿಷತ್ ಸದಸ್ಯ ನಜೀರ್ ಅಹ್ಮದ್, ಪಕ್ಷದ ಸಂಘಟನೆ ಹಾಗೂ ಎಸ್ಐಆರ್ ವಿಚಾರದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಮನವಿ ಮಾಡಿದರು. ಈ ಕುರಿತು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಗಮನಕ್ಕೆ ತಂದು ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಆದರೂ ಸಮಾಧಾನವಾಗದ ಮುನಿಯಪ್ಪ ಬಣದ ಕಾರ್ಯಕರ್ತರು ಸಭೆಯನ್ನು ಬಹಿಷ್ಕರಿಸಿ ಹೊರನಡೆದರು. ಇದರಿಂದ ಕೆಲಕಾಲ ಸಭೆಯಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಸಭೆ ನಂತರ ಆರಂಭವಾದರೂ ಕಾಂಗ್ರೆಸ್‌ನ ಒಳಬಣಗಳ ಭಿನ್ನಾಭಿಪ್ರಾಯ ಮತ್ತೊಮ್ಮೆ ಬಹಿರಂಗಗೊಂಡಂತಾಯಿತು.

## ಸ್ಕೌಟ್ ಕಾರ್ಯಕ್ರಮವನ್ನು ವಿಸ್ತರಿಸಿ: ಸಿಎಂ

ಬೆಂಗಳೂರು

“ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸುವ ಸ್ಕೌಟ್ ಕಾರ್ಯಕ್ರಮವನ್ನು 3 ವರ್ಷಗಳಿಗೆ ಸೀಮಿತಗೊಳಿಸದೇ, ಇದನ್ನು ಹೆಚ್ಚಿನ ಅವಧಿಗೆ ವಿಸ್ತರಿಸಿ” ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಸಲಹೆ ನೀಡಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಮತ್ತು ಬ್ರಿಟಿಷ್ ಕೌನ್ಸಿಲ್ ಸಹಯೋಗದೊಂದಿಗೆ ಅತ್ಯುತ್ತಮ ಪ್ರತಿಭಾವಂತ ಪದವಿಪೂರ್ವ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ಖಅಔಗಿಖ–2.0 ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಚಾಲನೆ ನೀಡಿ ಮಾತನಾಡಿದರು.

“ರಾಜ್ಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಭೇಟಿ ಮಾಡಿರುವುದಕ್ಕೆ ಸಂತೋಷವಾಗಿದೆ. ಕರ್ನಾಟಕ ಎಂದರೆ ಬೆಂಗಳೂರು ಮಾತ್ರವಲ್ಲ. ಚಾಮರಾಜನಗರದಿಂದ ಬೀದರ್ ವರೆಗೆ ಎಲ್ಲಾ ಗ್ರಾಮೀಣ ಪ್ರದೇಶದವರೆಗೆ ಎಲ್ಲಾ ಭಾಗದ ವಿದ್ಯಾರ್ಥಿಗಳು ಇದ್ದಾರೆ. ಎಲ್ಲಾ ವಿವಿಗಳು ಈ ಜವಾಬ್ದಾರಿ ವಹಿಸಿಕೊಂಡಿರುವುದು ಸಂತೋಷದ ವಿಚಾರ. ಬ್ರಿಟೀಷರು ಇಲ್ಲಿ ಆಳ್ವಿಕೆ ಮಾಡಿದ್ದರೂ ಅವರೊಂದಿಗೆ ಈ ಸಹಯೋಗ ಹಳೆಯದಾಗಿದೆ” ಎಂದರು.

“ಜ್ಞಾನಗಳು, ಆಲೋಚನೆಗಳ ವಿನಿಮಯ ಮುಂದುವರಿಸುತ್ತಿದ್ದೇವೆ. ಈ ಕಾರ್ಯಕ್ರಮದ ಮೂಲಕ ಕರ್ನಾಟಕ ಸರ್ಕಾರದ ಜೊತೆಗೆ ಕೈಜೋಡಿಸಿರುವ ಬ್ರಿಟೀಷ್ ಕೌನ್ಸಿಲ್ ಗೆ ಧನ್ಯವಾದ ತಿಳಿಸುತ್ತೇನೆ. ನಾನು ಆಯ್ಕೆಯಲ್ಲಿ ಶಿಕ್ಷಣತಜ್ಞ, ಶಿಕ್ಷಣ ಎಲ್ಲರಿಗೂ ಅತಿ ಮುಖ್ಯವಾದುದು. ಈ ವಿದ್ಯಾರ್ಥಿಗಳು ನಮ್ಮ ರಾಯಭಾರಿಗಳು. ನಾಯಕರುಗಳನ್ನು ತಯಾರು ಮಾಡುವವನೇ ನಿಜವಾದ ನಾಯಕ. ಇಲ್ಲಿರುವ ವಿದ್ಯಾರ್ಥಿಗಳು ನಾಯಕರುಗಳೇ. ನೀವೆಲ್ಲರೂ ಸರಿಯಾದ ಹಾದಿಯಲ್ಲಿದ್ದೀರಿ. ನೀವು ಕರ್ನಾಟಕದ ಪ್ರತಿನಿಧಿಯಾಗಿದ್ದು, ನಿಮ್ಮ ಭವಿಷ್ಯ ಬದಲಿಸಿಕೊಳ್ಳಲು ಇದು ಉತ್ತಮ ಅವಕಾಶವಾಗಿದೆ” ಎಂದರು.

“ಕರ್ನಾಟಕ ಹಾಗೂ ಬೆಂಗಳೂರು ಪ್ರತಿಭಾನ್ವಿತರ ಕೇಂದ್ರ. ಇಡೀ ವಿಶ್ವ ನಮ್ಮ ಕಡೆ ನೋಡುತ್ತಿದೆ. ಕರ್ನಾಟಕದ ಮೂಲಕ ಭಾರತವನ್ನು ನೋಡಲಾಗುತ್ತಿದೆ. ನೀವು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಎಂದು ಆತ್ಮವಿಶ್ವಾಸ ಕಳೆದುಕೊಳ್ಳಬಾರದು.

ನಮ್ಮ ಕಾಲದಲ್ಲಿ ನಾವು ಕಷ್ಟಪಟ್ಟು ಓದಬೇಕಿತ್ತು. ಈಗ ಎಲ್ಲಾ ಮಾಹಿತಿ ನಿಮ್ಮ ಬೆರಳತುದಿಯಲ್ಲಿವೆ. ಈಗ ಶಿಕ್ಷಕರು ವಿದ್ಯಾರ್ಥಿಗಳಿಂದಲೇ ಪಾಠ ಮಾಡಿಸುವ ಮಟ್ಟಿಗೆ ಕಾಲ ಬದಲಾವಣೆಯಾಗಿದೆ. ಪ್ರತಿಯೊಬ್ಬರು ಸಮರ್ಥರು, ನೀವೆಲ್ಲರೂ ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡುತ್ತಿದ್ದೀರಿ. ಈ ಸ್ಕೌಟ್ ಕಾರ್ಯಕ್ರಮದಲ್ಲಿ ನಿಮ್ಮ ಆಲೋಚನೆ ದೂರದೃಷ್ಟಿಯಾಗಿರಬೇಕು. ನಿಮ್ಮ ಮೇಲೆ ಸಾಕಷ್ಟು ನಿರೀಕ್ಷೆಗಳಿವೆ” ಎಂದು ತಿಳಿಸಿದರು.

“ನಮ್ಮ ಸರ್ಕಾರ ಹಾಗೂ ವಿವಿಗಳು ಈ ಕಾರ್ಯಕ್ರಮ ವಿಸ್ತರಣೆ ಮಾಡಲು ಸಿದ್ಧವಿದೆ. ನಮ್ಮ ವಿದ್ಯಾರ್ಥಿಗಳಿಗೆ ಅವಕಾಶ ಸಿಗಬೇಕು. ಇಲ್ಲಿಂದ ಬ್ರಿಟನ್ ಗೆ ಹೋಗಿ ಅಲ್ಲೇ ನೆಲೆಸಬೇಡಿ, ಅಲ್ಲಿ ವ್ಯಾಸಂಗ ಮಾಡಿ ಭಾರತಕ್ಕೆ ಮರಳಿ, ಇಲ್ಲಿ ಕೆಲಸ ಮಾಡಿ. ಇಲ್ಲಿಗೆ ಬಂದು ನೀವು ನಿಮ್ಮ ಕ್ಷೇತ್ರದಲ್ಲಿ ಬೆಳೆಯಿರಿ. ವಿವಿಗಳ ಉಪಕುಲಪತಿಗಳು ಇನ್ನಷ್ಟು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕು.

ವಿದ್ಯಾರ್ಥಿಗಳ ಪ್ರತಿಭೆಗೆ ಅನುಗುಣವಾಗಿ ಅವರನ್ನು ಗುರುತಿಸಿ, ಅವರಿಗೆ ಅವಕಾಶ ಕಲ್ಪಿಸಬೇಕು. ಕಳೆದ ವರ್ಷ ಗ್ರಾಮೀಣ ಭಾಗದ ಮಕ್ಕಳು ಉತ್ತಮ ಸಾಧನೆ ಮಾಡಿದ್ದನ್ನು ನೋಡಿದ್ದೇವೆ” ಎಂದು ಹೇಳಿದರು.

“ಇದು ಕೇವಲ ಪದವಿ ಪಡೆಯುವ ಕಾರ್ಯಕ್ರಮವಲ್ಲ. ಯುವ ವಿರ್ದಾರ್ಥಿಗಳಿಗೆ ಪ್ರೋತ್ಸಾಹ ನೀಡಿ ಅವರ ಕ್ಷೇತ್ರಗಳಲ್ಲಿ ಅವರನ್ನು ನಾಯಕರನ್ನಾಗಿ ಬೆಳೆಸುವುದಾಗಿದೆ. ಈ ಅವಕಾಶ ಕೆಲವರಿಗೆ ಮಾತ್ರ ಸಿಗುತ್ತದೆ. ನೀವು ಕನಸು ಕಾಣಬೇಕು, ಆ ಕನಸು ನನಸಾಗಿಸಿಕೊಳ್ಳಲು ಹಂಬಲಿಸಬೇಕು.

ಅದಕ್ಕಾಗಿ ಬದ್ಧರಾಗಿರಬೇಕು, ಶಿಸ್ತಿನ ಪರಿಶ್ರಮ ಹಾಕಬೇಕು. ನೀವು ನಿಮ್ಮ ಜೀವನದಲ್ಲಿ ಯಾವುದೇ ಹಂತಕ್ಕೆ ಹೋದರೂ ನಿಮ್ಮ ಮೂಲವನ್ನು ಮಾತ್ರ ಮರೆಯಬಾರದು. ನೀವು ನಿಮ್ಮ ಮೂಲವನ್ನು ಮರೆತರೆ ಯಶಸ್ಸು ಸಾಧಿಸಲು ಸಾಧ್ಯವಿಲ್ಲ. ಉದ್ಯೋಗಿಗಳಾಗುವುದಕ್ಕಿಂತ ಉದ್ಯೋಗದಾತರಾಗುವುದು ನಿಮ್ಮ ಗುರಿಯಾಗಲಿ” ಎಂದು ಸಲಹೆ ನೀಡಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರಿನ ವಿಜಯನಗರದಲ್ಲಿರುವ ಆದಿ ಚುಂಚನಗಿರಿ ಶಾಖಾ ಮಠಕ್ಕೆ ಸೋಮವಾರ ರಾತ್ರಿ ಭೇಟಿ ನೀಡಿ, ಮಠಾಧೀಪತಿಗಳಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಗಳ ಆಶೀರ್ವಾದ ಪಡೆದರು.

## ‘ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು’



ಬೆಂಗಳೂರು

ಕಂದಾಯ ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಸಹಾಯಕ ಆಯುಕ್ತರಿಗೆ ಹೆಚ್ಚಿನ ಜವಾಬ್ದಾರಿ ನೀಡಬೇಕು ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ಅವರು ಹೇಳಿದರು.

ವಿಧಾನಸೌಧದಲ್ಲಿ ಇಂದು ಕಂದಾಯ ಇಲಾಖೆಯ ವಿವಿಧ ಯೋಜನೆಗಳು, ಆಡಳಿತಾತ್ಮಕ ಪ್ರಗತಿ ಹಾಗೂ ಸಾರ್ವಜನಿಕ ಸೇವೆಗಳ ಅನುಷ್ಠಾನದ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಗ್ರ ಪರಿಶೀಲನೆ ನಡೆಸಿದ ಅವರು, ಬಾಕಿ ಉಳಿದಿರುವ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.

ಪರವಾನಗಿ ಭೂಮಾಪಕರ ಸಮಸ್ಯೆಗಳ ಕುರಿತು ಗಮನ ಹರಿಸಬೇಕೆಂದು ಸೂಚಿಸಿದ ಅವರು, ಭೂಮಾಪಕರ ಸಭೆಯನ್ನು ಕರೆದು ಅವರ ಅಹವಾಲುಗಳು ಹಾಗೂ ಬೇಡಿಕೆಗಳನ್ನು ಆಲಿಸಬೇಕು. ಭೂಮಾಪಕರ ಸೇವಾ ಹಾಗೂ ವೃತ್ತಿಪರ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಂಡು, ತ್ವರಿತವಾಗಿ ಇತ್ಯರ್ಥಪಡಿಸಬೇಕು ಎಂದು ಹೇಳಿದರು.

ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಬೇಕು. ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ವಿಳಂಬ ಉಂಟಾಗಬಾರದು. ಜೇಷ್ಠತಾ ಪಟ್ಟಿಯನ್ನು ಶೀಘ್ರ ಪ್ರಕಟಿಸಿ, ನಿಯಮಾನುಸಾರ ಪಾರದರ್ಶಕವಾಗಿ ಬಡ್ತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಭೂ ದಾಖಲೆ, ಖಾತೆ ಬದಲಾವಣೆ, ಸರ್ವೇ ಕಾರ್ಯ, ಮ್ಯೂಟೇಷನ್ ಹಾಗೂ ಇತರೆ ಕಂದಾಯ ಸೇವೆಗಳ ವಿಲೇವಾರಿಯಲ್ಲಿ ವಿಳಂಬ ಕಡಿಮೆ ಮಾಡುವ ನಿಟ್ಟಿನಲ್ಲಿ ನಿರಂತರ ಮೇಲ್ವಿಚಾರಣೆ ನಡೆಸಬೇಕು.

ಇಲಾಖೆಯ ಎಲ್ಲಾ ಕಾರ್ಯಗಳ ಪ್ರಗತಿಯನ್ನು ನಿಯಮಿತವಾಗಿ ಪರಿಶೀಲಿಸಿ, ಗುರಿ ಸಾಧನೆಯತ್ತ ಗಮನ ಹರಿಸಬೇಕು. ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವ ಉದ್ದೇಶದಿಂದ ಆಡಳಿತಾತ್ಮಕ ಕಾರ್ಯಗಳಿಗೆ ಮತ್ತಷ್ಟು ವೇಗ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy